ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ    Postal Reg. No. BDR/054/2026-2027 Email: mallammanudi@gmail.com  E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 115 ಸಂಚಿಕೆ- 115 | PAGE-8 ಪುಟ-8 | ಶುಕ್ರವಾರ 13.06.2025 | RS.2/- ಬೆಲೆ 2/-

# ವಿಮಾನ ಪತನ: 241 ಪ್ರಯಾಣಿಕರ ಸಜೀವ ದಹನ, 5 ಹಾಸ್ಟೆಲ್ ವಿದ್ಯಾರ್ಥಿಗಳೂ ಬಲಿ





ಮಲ್ಲಮ್ಮ ನುಡಿ ವಾರ್ತೆ ಅಹ್ಮದಾಬಾದ್:ಜೂ.12:ಅಹ್ಮದಾಬಾದ್ ನಲ್ಲಿ ಪತನವಾದ ಏರ್ ಇಂಡಿಯಾ ವಿಮಾನ ದುರಂತ ಪ್ರಕರಣದಲ್ಲಿ ಯಾರೂ ಉಳಿದಿಲ್ಲ ಎಂದು ಪೊಲೀಸ್ ಮೂಲಗಳು ಮಾಹಿತಿ ನೀಡಿದ್ದು, ವಿಮಾನ ಪ್ರಯಾಣಿಕರಲ್ಲದೇ 5 ಹಾಸ್ಟೆಲ್ ವಿದ್ಯಾರ್ಥಿಗಳೂ ಕೂಡ ಸಾವನ್ನಪ್ಪಿದ್ದಾರೆ.

ಗುಜರಾತ್ ರಾಜಧಾನಿ ಅಹಮದಾಬಾದ್ ಏರ್?ಪೋರ್ಟ್ ಬಳಿ ಟೇಕ್ ಆಫ್ ಆಗುತ್ತಿದ್ದ ಏರ್ ಇಂಡಿಯಾ ವಿಮಾನ ಟೇಕ್ ಆಫ್ ಆದ ಕೇವಲ ಐದೇ ನಿಮಿಷದಲ್ಲಿ ಪತನಗೊಂಡಿದೆ.

ಏರ್?ಪೋರ್ಟ್ ಬಳಿ ಮೇಧಿನಿ ನಗರ್?ನಲ್ಲಿ ಈ ಘಟನೆ ಸಂಭವಿಸಿದ್ದು ಬೋಯಿಂಗ್ 787-8 ಡ್ರೀಮ್‌ಲೈನರ್ (AI-171) ವಿಮಾನವು 230 ಪ್ರಯಾಣಿಕರು ಮತ್ತು 12 ಸಿಬ್ಬಂದಿ ಸೇರಿದಂತೆ 242 ಜನರೊಂದಿಗೆ ಲಂಡನ್‌ಗೆ ತೆರಳುತ್ತಿತ್ತು ಎನ್ನಲಾಗಿದೆ.

ವಿಮಾನವು ನಗರದ ವಿಮಾನ ನಿಲ್ದಾಣದಿಂದ ಸ್ವಲ್ಪ ದೂರದಲ್ಲಿರುವ ಫೋರೆನ್ಸಿಕ್ ಕ್ರಾಸ್ ರಸ್ತೆಯ ಬಳಿ ಬಿಜೆ ಮೆಡಿಕಲ್ ಕಾಲೇಜು ಹಾಸ್ಟೆಲ್ ಮೆಸ್ ಮೇಲೆ ಬಿದ್ದಿದೆ.

247 ಮಂದಿ ಸಾವು:ಈ ದುರಂತದಲ್ಲಿ ಒಟ್ಟು 247 ಮಂದಿ ಸಾವಿಗೀಡಾಗಿದ್ದು, ಈ ಪೈಕಿ 230 ವಿಮಾನ ಪ್ರಯಾಣಿಕರು, 10 ಮಂದಿ ವಿಮಾನ ಸಿಬ್ಬಂದಿ, ಇಬ್ಬರು ಪೈಲಟ್ (ಮುಖ್ಯ ಪೈಲಟ ಸುಮಿತ್ ಸಭರ್ವಾಲ್ ಮತ್ತು ಕೋ ಪೈಲಟ್ ಕ್ಲೈವ್ ಕುಂದರ್) ಗಳು ಸೇರಿದ್ದರು.ವಿಮಾನದಲ್ಲಿದ್ದ 241 ಜನರಲ್ಲಿ 169 ಭಾರತೀಯ ಪ್ರಜೆಗಳು, 53 ಬ್ರಿಟಿಷ್ ಪ್ರಜೆಗಳು, 1 ಕೆನಡಾ ಪ್ರಜೆ ಮತ್ತು 7 ಪೋರ್ಚುಗೀಸ್ ಪ್ರಜೆಗಳು ಇದ್ದರು ಎಂದು ತಿಳಿದುಬಂದಿದೆ.

ಇದಲ್ಲದೆ ವಿಮಾನ ಢಿಕ್ಕಿಯಾದ ಬಿಜೆ ವೈದ್ಯಕೀಯ ಕಾಲೇಜಿನ 5 ಮಂದಿ ಹಾಸ್ಟೆಲ್ ವಿದ್ಯಾರ್ಥಿಗಳೂ ಸಾವನ್ನಪ್ಪಿದ್ದಾರೆ. ದುರಂತ ನಡೆದ ಸಂದರ್ಭದಲ್ಲಿ ವಿಮಾನ ಕೇವಲ 825 ಅಡಿ ಎತ್ತರದಲ್ಲಿತ್ತು ಎನ್ನಲಾಗಿದೆ.

ಗುಜರಾತ್ ಮಾಜಿ ಸಿಎಂ ವಿಜಯ್ ರೂಪಾನಿ ನಿಧನ:

ಇದೇ ದುರಂತದಲ್ಲಿ ಗುಜರಾತ್ ಮಾಜಿ ಮುಖ್ಯಮಂತ್ರಿ ವಿಜಯ್ ರೂಪಾನಿ ಕೂಡ ಸಾವನ್ನಪ್ಪಿದ್ದಾರೆ ಎಂದು ತಿಳಿದುಬಂದಿದೆ. ವಿಜಯ್ ರೂಪಾನಿ ಅವರು ಕುಟುಂಬ ಸದಸ್ಯರ ಭೇಟಿ ಮಾಡಲು ಲಂಡನ್ ತೆರಳುತಿದ್ದರು ಎಂದು ತಿಳಿದುಬಂದಿದೆ.

ಸಹಾಯವಾಣಿ ಆರಂಭ

ವಿಮಾನ ದುರಂತಕ್ಕೆ ಸಂಬಂಧಿಸಿದಂತೆ ಎಲ್ಲಾ ವಿವರಗಳನ್ನು ಸಂಘಟಿಸಲು ನಾಗರಿಕ ವಿಮಾನಯಾನ ಸಚಿವಾಲಯದಲ್ಲಿ ಕಾರ್ಯಾಚರಣಾ ನಿಯಂತ್ರಣ ಕೊಠಡಿಯನ್ನು ಸಕ್ರಿಯಗೊಳಿಸಲಾಗಿದೆ. ಅದಕ್ಕಾಗಿ 011-24610843, 9650391859 ದೂರವಾಣಿ ಸಂಖ್ಯೆಯನ್ನು ತೆರೆಯಲಾಗಿದೆ ಎಂದು ವಿಮಾನಯಾನ ಸಚಿವಾಲಯದ ಅಧಿಕಾರಿಗಳು ತಿಳಿಸಿದ್ದಾರೆ.

ಏರ್ ಇಂಡಿಯಾ ಹಾಟ್‌ಲೈನ್ ಸಂಖ್ಯೆ ಬಿಡುಗಡೆ

ಇತ್ತ ಏರ್ ಇಂಡಿಯಾ ವಿಮಾನಯಾನ ಸಂಸ್ಥೆ ಕೂಡ ಹಾಟ್?ಲೈನ್ ಸಂಖ್ಯೆ ಬಿಡುಗಡೆ ಮಾಡಿದ್ದು, ಹೆಚ್ಚಿನ ಮಾಹಿತಿ ನೀಡಲು ನಾವು 1800 5691 444 ಎಂಬ ಪ್ರಯಾಣಿಕರ ಹಾಟ್‌ಲೈನ್ ಸಂಖ್ಯೆಯನ್ನು ಸಹ ಸ್ಥಾಪಿಸಿದ್ದೇವೆ ಎಂದು ತಿಳಿಸಿದೆ.

ಎಎಐಬಿಯಿಂದ ತನಿಖೆ

ಏರ್ ಇಂಡಿಯಾ ವಿಮಾನ AI-171 ಕುರಿತು 'ವಿಮಾನ ಅಪಘಾತ ತನಿಖಾ ಸಂಸ್ಥೆ' (ಎಎಐಬಿ) ತನಿಖೆ ಆರಂಭಿಸಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಎಎಐಬಿ ಮಹಾನಿರ್ದೇಶಕ ಮತ್ತು ಸಂಸ್ಥೆಯ ತನಿಖಾ ನಿರ್ದೇಶಕ ಸೇರಿದಂತೆ ಇತರರು ಅಹಮದಾಬಾದ್‌ಗೆ ತೆರಳಿದ್ದಾರೆ ಎಂದು ಅಧಿಕಾರಿಗಳು ಹೇಳಿದ್ದಾರೆ.ಭಾರತದ ವಾಯು ಪ್ರದೇಶದಲ್ಲಿ ಸಂಭವಿಸುವ ವಿಮಾನಗಳ ಅಪಘಾತ ಮತ್ತು ಗಂಭೀರ ಸ್ವರೂಪದ ಘಟನೆಗಳಿಗೆ ಸಂಬಂಧಿಸಿದಂತೆ ಸುರಕ್ಷತಾ ಮಾನದಂಡಗಳ ವಿಂಗಡನೆಯ ಹೊಣೆ ಎಎಐಬಿಯದ್ದು ಎಂದು ನಾಗರಿಕ ವಿಮಾನಯಾನ ಸಚಿವಾಲಯ ಹೇಳಿದೆ. ಅಪಘಾತಗಳ ಕುರಿತು ಸಮಗ್ರ ತನಿಖೆ ನಡೆಸಲಿರುವ ಎಎಐಬಿ, ಸುರಕ್ಷತಾ ಮಾನದಂಡಗಳನ್ನು ಸುಧಾರಿಸಲು ನಿರ್ದೇಶನ ನೀಡಲಿದೆ.

## ವಿಮಾನ ದುರಂತ:ಖರ್ಗೆ ಸಂತಾಪ, ನ್ಯಾಯಾಂಗ ತನಿಖೆಗೆ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:ಜೂ.12:ಗುಜರಾತನ ಅಹ್ಮದಾಬಾದ್ ನಲ್ಲಿ ಪ್ರಯಾಣಿಕರಿದ್ದ ವಿಮಾನ ಸಡನ ಆಗಿ ಜನವಸತಿ ಪ್ರದೇಶದಲ್ಲಿ ಬಿದ್ದು ಬೆಂಕಿ ಹತ್ತಿದೆ

ಇದರಲ್ಲಿ ಹಲವಾರು ಜನ ಸಾವನಪ್ಪಿದ್ದಾರೆ.ಇದೊಂದು ದೊಡ್ಡ ದುರಂತವಾಗಿದೆ.ಭಾರತಿಯರು ಬ್ರಿಟಿಷ್ ನಾಗರಿಕರು ಸಾವನಪ್ಪಿದ್ದಾರೆ

ಎಷ್ಟು ಜನ ಸಾವನಪ್ಪಿದ್ದಾರೆಂಬ ಖಚಿತ ಮಾಹಿತಿ ಇಲ್ಲ ಆದರೂ 169 ಜನರು ಮೃತರಾಗಿರುವ ಬಗ್ಗೆ ತಿಳಿದುಬಂದಿದೆ.ಇದು ಅತ್ಯಂತ ದುಖದ ವಿಷಯವಾಗಿದೆ

ನಾನು ಆ ಘಟನೆಗೆ ಸಂತಾಪ ಸೂಚಿಸುತ್ತೆನೆ ಎಂದು ಕಲಬುರಗಿಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ತಿಳಿಸಿದರು.

ಅವರು ಸುದ್ದಿಗಾರರೊಂದಿಗೆ ಮಾತನಾಡಿ, ಭೀಕರ ದುರಂತದಲ್ಲಿ ಸಾವನಪ್ಪಿದವರ ಕುಟುಂಬಕ್ಕೆ ಎಲ್ಲ ರೀತಿಯ ಸಹಾಯ ಮಾಡಲು ಕಾರ್ಯಕರ್ತರಿಗೆ ಸೂಚಿಸುತ್ತೆನೆ

ಘಟನೆಯಲ್ಲಿ ಬದುಕುಳಿದ ಜನರಿಗೆ ಚಿಕಿತ್ಸೆ ಕೊಡಿಸಬೇಕು ಎಂದ ಅವರು ವಿಮಾನ ಅಪಘಾತದ ಜವಾಬ್ದಾರಿ ಕೇಂದ್ರ ಸರ್ಕಾರ ಹೊರಬೇಕು ಎಂದರು.ದುರಂತದಲ್ಲಿ ಇಂಗ್ಲೆಂಡ್ ನ ಕೆಲ ಪ್ರಯಾಣಿಕರು ಮೃತಪಟ್ಟಿದ್ದಾರೆ.ವಿಮಾನ ಬೇಗ ಬಿಡುವಂತೆ ಒತ್ತಾಯ ಮಾಡಿರೋದೆ ಘಟನೆಗೆ ಕಾರಣ ಎನ್ನಲಾಗುತ್ತಿದೆ.

ಇದರ ಬಗ್ಗೆ ಸಹ ತನಿಖೆ ಆಗಬೇಕು ಎಂದರು.

ವಾತಾವರಣ ಸರಿ ಇಲ್ಲ ಅಂದ್ರು ಕೆಲವರು ವಿಮಾನ ಬಿಡಿಸಿದ್ದಾರೆ ಎಂಬ ಮಾಹಿತಿಯಿದ್ದು,ಇದರ ಬಗ್ಗೆ ಉನ್ನತ ತನಿಖೆ ಆಗಬೇಕು.

ಸುಪ್ರೀಂ ಕೋಟ9ನ ಹಾಲಿ ಅಥವಾ ಮಾಜಿ ನ್ಯಾಯಾಧೀಶರ ಮೂಲಕ ತನಿಖೆಯಾಗಬೇಕೆಂದು ಖರ್ಗೆ ಒತ್ತಾಯಿಸಿದರು.

## ಟ್ರಾಫಿಕ್‌ನಲ್ಲಿ ಸಿಲುಕಿದ್ದರಿಂದ ಬದುಕುಳಿದ ಲಕ್ಕಿ ಲೇಡಿ



ಮಲ್ಲಮ್ಮ ನುಡಿ ವಾರ್ತೆ ಅಹಮದಾಬಾದ್:ಜೂ.12: ಮಹಿಳೆಯೊಬ್ಬರು ಟ್ರಾಫಿಕ್‌ನಲ್ಲಿ ಸಿಲುಕಿಕೊಂಡಿದ್ದರಿಂದ ಏರ್ ಇಂಡಿಯಾ ವಿಮಾನ ಅಪಘಾತದಿಂದ ಪಾರಾಗಿದ್ದಾರೆ.

ಅಹಮದಾಬಾದ್‌ನ ಭೂಮಿ

(2ನೇ ಪುಟ ನೋಡಿ)

## ಎಗ್ಗಿಲ್ಲದೆ ನಡೆಯುತ್ತಿರುವ ಅಕ್ರಮ ಮರಳುಗಾರಿಕೆ: ಅಧಿಕಾರಿಗಳ ಮೌನ ಹಲವು ಅನುಮಾನಗಳಿಗೆ ಎಡೆ



ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ: ಜಿಲ್ಲೆಯಲ್ಲಿ ಕೃಷ್ಣಾ ಮತ್ತು ಭೀಮಾ ನದಿಗಳಲ್ಲಿ ಮರಳುಗಾರಿಕೆ ನಿಂತ ನಂತರ, ಅಕ್ರಮ ಮರಳು ಗಣಿಗಾರಿಕೆ ಗ್ರಾಮಗಳಲ್ಲಿನ ಹಳ್ಳಗಳ ಕಡೆಗೆ ತಿರುಗಿದೆ. ಯಾದಗಿರಿ ತಾಲೂಕಿನ ಹತ್ತಿಕುಣಿ ಡ್ಯಾಂನಿಂದ ಹರಿದು ಬರುವ ಯಡ್ಡಳ್ಳಿ ಹೊರುಂಚ ಗ್ರಾಮದ ಹಳ್ಳದಲ್ಲಿ ರಾತ್ರಿ ಹಗಲೆನ್ನದೆ ಅಕ್ರಮ ಮರಳುಗಾರಿಕೆ ನಡೆಯುತ್ತಿದ್ದರೂ, ಕಂದಾಯ ಇಲಾಖೆಯ ಅಧಿಕಾರಿಗಳು ಮೌನಕ್ಕೆ ಶರಣಾಗಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ.

ಸಾಗಾಟದ ದಂಧೆ ಜೋರು:

ಯಡ್ಡಳ್ಳಿ ಹೊರುಂಚ ಗ್ರಾಮದ ಪಕ್ಕದಲ್ಲಿ ಹರಿಯುವ ಹಳ್ಳ ಮತ್ತು ಪಟ್ಟಾ ಜಮೀನಿನಲ್ಲಿ ಅಡಗಿರುವ ಮರಳನ್ನು ಅಕ್ರಮವಾಗಿ ತೆಗೆದು ಟ್ರ್ಯಾಕ್ಟರ್ ಮತ್ತು ಟ್ರಕ್‌ಗಳ ಮೂಲಕ ಸಾಗಿಸುವ ದಂಧೆ ಜೋರಾಗಿದೆ. ಕಳೆದ ಹಲವು ವರ್ಷಗಳಿಂದ ಹಳ್ಳದಲ್ಲಿ ಸಂಗ್ರಹವಾಗುತ್ತಿದ್ದ ಮರಳನ್ನು ಕದ್ದುಮುಚ್ಚಿ ಮಾರಾಟ ಮಾಡುತ್ತಿದ್ದ ಅಕ್ರಮ ಮರಳು ಗಣಿಗಾರರು ಈಗ ಸಾಗುವಳಿ ಮಾಡುತ್ತಿರುವ ಜಮೀನಿನಲ್ಲಿ ಮತ್ತು ಹಳ್ಳಗಳಲ್ಲಿ ಜೆಸಿಬಿ ಮೂಲಕ

(2ನೇ ಪುಟ ನೋಡಿ)

## ಜಾತಿ ಗಣತಿಗೆ ಸಚಿವ ಸಂಪುಟ ಅಸ್ತು



ಬೆಂಗಳೂರು:ಜೂ.12: ರಾಜ್ಯದಲ್ಲಿ ಹೊಸದಾಗಿ ಸಾಮಾಜಿಕ-ಶೈಕ್ಷಣಿಕ ಸಮೀಕ್ಷೆ(ಜಾತಿಗಣತಿ) ನಡೆಸಲು ಸಚಿವ ಸಂಪುಟ ಸಭೆ "ಸರ್ವಾನುಮತದಿಂದ" ನಿರ್ಧರಿಸಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗುರುವಾರ ಹೇಳಿದ್ದಾರೆ.ಇಂದು ವಿಧಾನಸೌಧದಲ್ಲಿ ನಡೆದ ವಿಶೇಷ ಸಚಿವ ಸಂಪುಟ ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಿಎಂ ಸಿದ್ದರಾಮಯ್ಯ ಅವರು, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ-ಕ್ಕೆ, ಹೊಸದಾಗಿ ಸಮೀಕ್ಷೆ ನಡೆಸಿ ವರದಿ ಸಲ್ಲಿಸಲು 90 ದಿನಗಳ ಗಡುವು ನೀಡಲಾಗಿದೆ ಎಂದು ಹೇಳಿದರು. ಆದರೆ ಸಮೀಕ್ಷೆಯ ವೆಚ್ಚದ ಬಗ್ಗೆ ಪ್ರತಿಕ್ರಿಯಿಸಲು ನಿರಾಕರಿಸಿದರು.ನಾವು ಸಂಪುಟದಲ್ಲಿ ನಿರ್ಧಾರ ತೆಗೆದುಕೊಂಡಿದ್ದೇವೆ. ಹೊಸ ಸಮೀಕ್ಷೆ ನಡೆಸುವುದು ಸರ್ವಾನುಮತದ ನಿರ್ಧಾರವಾಗಿದೆ. ಸರ್ಕಾರವು ಕರ್ನಾಟಕ ರಾಜ್ಯ

(2ನೇ ಪುಟ ನೋಡಿ)



ಕಲಬುರಗಿ : ನಗರದಲ್ಲಿ ಗುರುವಾರ ಎಐಸಿಸಿ ಅಧ್ಯಕ್ಷ ಡಾ. ಮಲ್ಲಿಕಾರ್ಜುನ ಖರ್ಗೆಗೆ ಮಾಜಿ ಸಚಿವ ರಾಜಶೇಖರ ಪಾಟೀಲ ಭೇಟಿ ಮಾಡಿ ಯೋಗಕ್ಷೇಮ ವಿಚಾರಿಸಿದ ಬಳಿಕ ಪ್ರಸ್ತುತ ರಾಜಕೀಯ ವಿದ್ಯಮಾನಗಳ ಕುರಿತು ಚರ್ಚಿಸಿದರು. ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಫ್ಸರಮಿಯ, ಗ್ರಾಮೀಣ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಓಂಕಾರ ತುಂಬಾ, ಜಿಪಂ. ಮಾಜಿ ಉಪಾಧ್ಯಕ್ಷ ಲಕ್ಷ್ಮಣರಾವ ಬುಳ್ಳಾ, ಪಿಎಲ್ಡಿ ಬ್ಯಾಂಕ್ ಅಧ್ಯಕ್ಷ ಮಲ್ಲಿಕಾರ್ಜುನ್ ಮಾಶಟ್ಟಿ, ಮಲ್ಲಿಕಾರ್ಜುನ್ ಮಹೇಂದ್ರಕರ್, ಲೋಕೇಶ ಮೇತ್ರೆ ಇದ್ದರು.

## ಹುಮನಾಬಾದ್ ನಲ್ಲಿ ಸರಕಾರಿ ಜಾಗಗಳು ಸೇಫ್ ಇವೆಯೇ?

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್. ಪ್ರತಿ ನಿತ್ಯ ನಿವೇಶನಗಳ ಬೆಲೆ ಗಗನಕ್ಕೇರುತ್ತಿದೆ. ಸರಕಾರಿ ಜಾಗಗಳಿಗೆ ನಂಬರಗಳನ್ನು ಅಳವಡಿಸಿ. ಅವುಗಳಿಗೆ ಬಿ. ಖಾತಾ ನೀಡುವುದರ ಮೂಲಕ ಅಕ್ರಮ ಎಸಯಲಾಗುತ್ತಿದೆ ಎಂಬ ಆರೋಪ ಹುಮನಾಬಾದ್ ಸಾರ್ವಜನಿಕ ವಲಯದಲ್ಲಿ ಕೇಳಿ ಬರುತ್ತುದೆ.

ಈ ಅಕ್ರಮಗಳಿಗೆ ಕೆಲ ಅಧಿಕಾರಿಗಳು, ಸಿಬ್ಬಂದಿ ಗಳು. ಜನ ಪ್ರತಿನಿಧಿಗಳು ಸಾಥ ನೀಡುತ್ತಿದ್ದಾರೆ ಎಂಬ ಗಂಭೀರ ಆರೋಪವು ಸದ್ದು ಮಾಡುತ್ತಿದೆ.ಹಾಗಾಗಿ ಜಿಲ್ಲಾಧಿಕಾರಿ ಗಳು ಹುಮನಾಬಾದ್ ತಾಲ್ಲೂಕಿನ ಲ್ಲಿ ವಿತರಣೆ ಮಾಡಿದ ಬಿ. ಖಾತಾಗಳ ಬಗ್ಗೆ ಪರಿಶೀಲನೆ ಮಾಡಬೇಕು. ತಪಿಸ್ಥರ ಮೇಲೆ ಕ್ರಮ ಕೈಗೊಳ್ಳಬೇಕು. ಸರ್ಕಾರಕ್ಕೆ ಸೇರಬೇಕಾದ ಜಾಗಗಳನ್ನು ಸರ್ಕಾರ ವಾಪಸ್ ಪಡೆಯಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

## ಬಾಲಕಾರ್ಮಿಕರನ್ನು ಕೆಲಸಕ್ಕೆ ನೇಮಿಸಿಕೊಂಡರೆ ಕಾನೂನು ಕ್ರಮ:ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ



ಮಲ್ಲಮ್ಮ ನುಡಿ ವಾರ್ತೆ

ಬೀದರ,ಜೂ.12:ಜಿಲ್ಲೆಯಲ್ಲಿ ಯಾವುದೇ ಅಂಗಡಿಗಳಲ್ಲಿ ಬಾಲಕಾರ್ಮಿಕರನ್ನು ಕೆಲಸಕ್ಕೆ ನೇಮಿಸಿಕೊಳ್ಳುವಂತಿಲ್ಲ. ಒಂದುವೇಳೆ ನೇಮಿಸಿಕೊಂಡಿರುವುದು ಕಂಡುಬಂದರೆ ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಹೇಳಿದರು.

ಅವರು ಗುರುವಾರದಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರ ಸಂಯುಕ್ತಾಶ್ರಯದಲ್ಲಿ ನಗರದ ಜಿಲ್ಲಾ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಶ್ವಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಕುರಿತು ಮಾತನಾಡಿದರು.

ಬಾಲಕಾರ್ಮಿಕ ಪದ್ಧತಿಯು ಮಕ್ಕಳ ಬಾಲ್ಯವನ್ನು ಕಸಿದಿಕೊಳ್ಳುತ್ತದೆ. ಶಾಲಾ-ಕಾಲೇಜು ವಿದ್ಯಾರ್ಥಿಗಳು,

(2ನೇ ಪುಟ ನೋಡಿ)

ಒಂದನೇ ಪುಟದಿಂದ

# ಕೆಲಸಕ್ಕೆ ನೇಮಿಸಿಕೊಂಡರೆ ಕಾನೂನು ಕ್ರಮ:ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ

ಶಿಕ್ಷಕರು ಮತ್ತು ನಾಗರಿಕರು ಎಲ್ಲೆ ಬಾಲಕಾರ್ಮಿಕರು ಕಂಡು ಬಂದಲ್ಲಿ ತಕ್ಷಣ ಸಂಬಂಧಪಟ್ಟ ಅಧಿಕಾರಿಗಳಿಗೆ ಅಥವಾ ಮಕ್ಕಳ ಸಹಾಯವಾಣಿ ಸಂಖ್ಯೆ 1098 ಕರೆ ಮಾಡಿ ತಿಳಿಸಬೇಕೆಂದರು. 14 ವರ್ಷದೊಳಗಿನ ಮಕ್ಕಳು ಬಾಲ ಕಾರ್ಮಿಕರು ಮತ್ತು 14 ರಿಂದ 18 ವರ್ಷದೊಳಗಿನ ಮಕ್ಕಳು ಕಿಶೋರ ಕಾರ್ಮಿಕರೆಂದು ಪರಿಗಣಿಸಲಾಗುತ್ತದೆ ಹಾಗೂ 1986 ರ ಬಾಲಕಾರ್ಮಿಕ ನಿಷೇಧ ಕಾಯ್ದೆ ಅನ್ವಯ ಬಾಲಕಾರ್ಮಿಕ ಪದ್ಧತಿ ಸಂಪೂರ್ಣ ನಿಷೇಧ ಮತ್ತು ಕಿಶೋರ ಕಾರ್ಮಿಕರನ್ನು ಯಾವುದೇ ಅಪಾಯಕಾರಿ ಕೆಲಸಗಳಲ್ಲಿ ನೇಮಿಸಿಕೊಳ್ಳುವುದು ಕಾನೂನಾತ್ಮಕ ಅಪರಾಧ ಎಂದು ಪರಿಗಣಿಸಲಾಗುತ್ತದೆ ಎಂದು ತಿಳಿಸಿದರು.

ಸಂವಿಧಾನದ 21ಎ ವಿಧಿಯ ಶಿಕ್ಷಣ ಒಂದು ಮೂಲಭೂತ ಹಕ್ಕು ಎಂದು ತಿಳಿಸುತ್ತದೆ, ಆದ್ದರಿಂದ 6 ರಿಂದ 14 ವರ್ಷದೊಳಗಿನ ಮಕ್ಕಳಿಗೆ ಉಚಿತ ಮತ್ತು ಕಡ್ಡಾಯ ಶಿಕ್ಷಣ ನೀಡಲಾಗುತ್ತದೆ. ಬಾಲಕಾರ್ಮಿಕರು ಕಂಡು ಬಂದಲ್ಲಿ ಅಂತಹವರನ್ನು ನೇರವಾಗಿ ಮುರಾರ್ಜಿ ದೇಸಾಯಿ ವಸತಿ ಶಾಲೆ ಸೇರಿಸಿ ಮಕ್ಕಳಿಗೆ ಉನ್ನತ ಮಟ್ಟದ ಶಿಕ್ಷಣ ನೀಡಲಾಗುವುದು ಎಂದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಪ್ರಕಾಶ ಬನಸೋಡೆ ಮಾತನಾಡಿ, 14 ವರ್ಷದೊಳಗಿನ ಮಕ್ಕಳು ಹೆಚ್ಚಾಗಿ ಹೊಟೇಲ್, ಗ್ಯಾರೇಜ್, ಧಾಭಾ ಮತ್ತು ಸಣ್ಣ ಗುಡಿ ಕೈಗಾರಿಕೆಗಳಲ್ಲಿ ಕಂಡು ಬರುತ್ತಾರೆ ಅದಕ್ಕೆ ಅನೇಕ ಕಾರಣಗಳಿವೆ ಬಡತನ, ಕೌಟುಂಬಿಕ ಕಲಹ, ಮಕ್ಕಳಿಗೆ ಪೋಷಕರು ಇಲ್ಲದೆ ಇರುವುದು ಇತ್ಯಾದಿ, ಆದರೆ ನಾವು ಅವರಿಗೆ ಬಾಲಕಾರ್ಮಿಕ ಪದ್ಧತಿಯಿಂದ ಆಗುವ ಸಮಸ್ಯೆಗಳ ಬಗ್ಗೆ ಅರಿವು ಮೂಡಿಸಬೇಕೆಂದರು. ಬಾಲಕಾರ್ಮಿಕರನ್ನು ಕೆಲಸಕ್ಕೆ ನೇಮಿಸಿಕೊಳ್ಳುವುದು ಕಾನೂನಾತ್ಮಕ ಅಪರಾಧವಾಗಿದೆ ಆದರೂ ಬಾಲಕಾರ್ಮಿಕ ಪದ್ಧತಿ ಕಂಡು ಬರುವುದು ವಿಷಾದದ ವಿಷಯವಾಗಿದೆ ಎಂದರು.

ಬೀದರ ಜಿಲ್ಲೆಯನ್ನು ಬಾಲಕಾರ್ಮಿಕ ಪದ್ಧತಿ ಮುಕ್ತ ಜಿಲ್ಲೆಯನ್ನಾಗಿ ಮಾಡುವುದು ಮತ್ತು ಮಕ್ಕಳಿಗೆ ಬಾಲ್ಯವನ್ನು ಆಟ–ಪಾಠಗಳ ಜೊತೆಗೆ ಕಳೆಯಲು ಬಿಡಬೇಕು. ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ, ಬಾಲ್ಯ ವಿವಾಹ, ಪೋಕ್ಸೋ ಕಾಯ್ದೆ ಬಗ್ಗೆ ಜನರಿಗೆ ಅರಿವು ಮೂಡಿಸಬೇಕು ಮತ್ತು ಕೇವಲ ಅಧಿಕಾರಿಗಳು ಅಷ್ಟೇ ಅಲ್ಲ ಪೋಷಕರು, ನಾಗರಿಕರು ಇವುಗಳನ್ನು ತಡೆಯುವ ಕೆಲಸ ಮಾಡಬೇಕೆಂದು ತಿಳಿಸಿದರು.

ನ್ಯಾಯವಾದಿ ಅಂಜನಾ ಕುಲಕರ್ಣಿ ಅವರು ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಬಗ್ಗೆ ಉಪನ್ಯಾಸ ಮಾಡಿದರು. ದಿನಾಚರಣೆ ಅಂಗವಾಗಿ ವಿದ್ಯಾರ್ಥಿಗಳಿಂದ ಭಾಷಣ, ಕಿರು ನಾಟಕ ಪ್ರದರ್ಶನ ಮಾಡಲಾಯಿತು.

ಕಾರ್ಯಕ್ರಮ ಮುಂಚಿತವಾಗಿ ಜಿಲ್ಲಾಧಿಕಾರಿ ಕಚೇರಿಯಿಂದ ರಂಗ ಮಂದಿರದವರೆಗೆ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಜಾಗೃತಿ ಜಾಥಾ ಕೈಗೊಳ್ಳಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಸನ್ಮುಖಯ್ಯಾ ಬಿ. ಸ್ವಾಮಿ, ಜಿಲ್ಲಾ ವಕೀಲರ ಸಂಘದ ಕಾರ್ಯದರ್ಶಿ ಧನರಾಜ ಬಿರಾದಾರ, ಜಿಲ್ಲಾ ಕಾರ್ಮಿಕ ಅಧಿಕಾರಿ ಮಹೇಶ ಲಕ್ಷ್ಮಣ ಕುಳಲಿ, ಜಿಲ್ಲಾ ಮಕ್ಕಳ ಸಮಿತಿ ಅಧ್ಯಕ್ಷ ಸೀಮಪ್ಪಾ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಗುರುರಾಜ, ಬೀದರ ಗ್ಯಾರೇಜ್ ಮಾಲೀಕರ ಸಂಘದ ಅಧ್ಯಕ್ಷ ಅನಿಲ ಪಸರ್ಗೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಬದುಕುಳಿದ ಲಕ್ಕಿ ಲೇಡಿ

ಚೌಹಾಣ್ ಲಂಡನ್‌ಗೆ ಹೊರಟಿದ್ದರು. ಆದರೆ, ಟ್ರಾಫಿಕ್‌ನಲ್ಲಿ ಸಿಲುಕಿಕೊಂಡಿದ್ದರಿಂದ ಅಹಮದಾಬಾದ್ ವಿಮಾನ ನಿಲ್ದಾಣವನ್ನು 10 ನಿಮಿಷ ತಡವಾಗಿ ತಲುಪಿದ್ದರು. ಇದರಿಂದ ಅವರಿಗೆ ವಿಮಾನ ಏರಲು ಅನುಮತಿ ನಿರಾಕರಿಸಲಾಗಿತ್ತು. ಇದಾದ ಕೆಲವೇ ನಿಮಿಷಗಳಲ್ಲಿ ವಿಮಾನ ಅಪಘಾತದ ಸುದ್ದಿ ಬಂದಿದ್ದು, ಮಹಿಳೆ, ಮಾಧ್ಯಮಗಳ ಮುಂದೆ ಗದ್ಗದಿತರಾಗಿದ್ದಾರೆ.

ಈ ವಿಚಾರ ಕೇಳಿ ನನಗೆ ಭಯವಾಗಿ ಕೈಕಾಲುಗಳು ನಡುಗಲು ಪ್ರಾರಂಭಿಸಿದವು. ನಾನು ತುಂಬಾ ಹೊತ್ತು ಅದೇ ಆಘಾತದಲ್ಲಿದ್ದೆ. ಕೇವಲ 10 ನಿಮಿಷ ತಡವಾಗಿ ಬಂದಿದ್ದರಿಂದ ವಿಮಾನ ತಪ್ಪಿಸಿಕೊಂಡು ಬದುಕುಳಿದೆ. ನನ್ನ ನೆಚ್ಚಿನ ದೇವರಾದ ಗಣಪತಿಗೆ ಕೃತಜ್ಞತೆ ಸಲ್ಲಿಸುತ್ತೇನೆ. ನನ್ನ ಗಣಪತಿ ಬಪ್ಪಾ ನನ್ನನ್ನು ಉಳಿಸಿದ ಎಂದು ಹೇಳಿಕೊಂಡಿದ್ದಾರೆ.

ಭೂಮಿ ತಮ್ಮ ಪತಿಯೊಂದಿಗೆ ಲಂಡನ್‌ನಲ್ಲಿ ವಾಸವಾಗಿದ್ದರು. ರಜೆ ಇದ್ದ ಕಾರಣ ಭಾರತಕ್ಕೆ ಬಂದಿದ್ದರು. ಅವರ ಪತಿ ಈಗ ಬ್ರಿಟನ್‌ನಲ್ಲಿದ್ದಾರೆ. ಭೂಮಿ ಎರಡು ವರ್ಷಗಳ ಹಿಂದೆ ಲಂಡನ್‌ಗೆ ತೆರಳಿದ್ದರು. ಇದಾದ ಬಳಿಕ ಮೊದಲ ಬಾರಿಗೆ ಅವರು ಭಾರತಕ್ಕೆ ಬಂದಿದ್ದರು.

## ಅಧಿಕಾರಿಗಳ ಮೌನ ಹಲವು ಅನುಮಾನಗಳಿಗೆ ಎಡೆ

ಕಂದಕ ತೋಡಿ ಅದರಲ್ಲಿ ಅಡಗಿರುವ ಮರಳನ್ನು ರಾಜಾರೋಷವಾಗಿ ಸಾಗಿಸುತ್ತಿದ್ದಾರೆ.ಪ್ರಾಣಾಪಾಯದ ಅಪಾಯ:ಜೆಸಿಬಿ ಮೂಲಕ ಹೊಲದಲ್ಲಿ ಹಳ್ಳ ತೋಡಿ ಹಾಗೆಯೇ ಬಿಡುವುದರಿಂದ ನೀರು ತುಂಬಿಕೊಂಡಿರುವ ಗುಂಡಿಯ ಆಳ ಗೊತ್ತಾಗದೆ ಮಕ್ಕಳು ಈಜಲು ಹೋಗಿ ಪ್ರಾಣ ಕಳೆದುಕೊಂಡ ಉದಾಹರಣೆಗಳು ಸಾಕಷ್ಟಿದ್ದರೂ, ಅಕ್ರಮ ಮರಳು ಗಣಿಗಾರಿಕೆ ಮಾಡುವವರಿಗೆ ಇದು ಕಣ್ಣಿಗೆ ಕಾಣಿಸುತ್ತಿಲ್ಲ.

ಗ್ರಾಮಸ್ಥರ ಆಕ್ರೋಶ ಮತ್ತು ಜೀವ ಬೆದರಿಕೆ:

ಅಹೋರಾತ್ರಿ ಅಕ್ರಮವಾಗಿ ಮರಳು ತೆಗೆದು ಹೊಲಗಳಲ್ಲಿ ಸಾಗಾಟ ಮಾಡುತ್ತಿರುವ ಮರಳು ಕಳ್ಳರನ್ನು ಪ್ರಶ್ನಿಸಿದರೆ, ಅವರಿಗೆ ಜೀವ ಬೆದರಿಕೆ ಹಾಕುವ ಮೂಲಕ ದರ್ಪ ತೋರಿಸುತ್ತಿದ್ದಾರೆ ಎಂದು ಹೆಸರು ಹೇಳಲಿಚ್ಛಿಸದ ಕೆಲವು ಗ್ರಾಮಸ್ಥರು ಅಳಲು ತೋಡಿಕೊಳ್ಳುತ್ತಿದ್ದಾರೆ. ಯಡ್ಡಳ್ಳಿ ಗ್ರಾಮದ ಜನರು ರಾತ್ರಿಯಿಡೀ ಟ್ರ್ಯಾಕ್ಟರ್ ಮತ್ತು ಟಿಪ್ಪರ್‌ಗಳ ಶಬ್ದದಿಂದ ಬೇಸತ್ತು ಹೋಗಿದ್ದಾರೆ. ಟ್ರ್ಯಾಕ್ಟರ್‌ನವರಿಗೆ ಏನಾದರೂ ಪ್ರಶ್ನೆ ಮಾಡಲು ಹೋದರೆ, "ನಮ್ಮ ಹಿಂದೆ ಪ್ರಭಾವಿಗಳು ಇದ್ದಾರೆ" ಎಂದು ಬೆದರಿಕೆ ಹಾಕುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಅಧಿಕಾರಿಗಳೊಂದಿಗೆ ಶಾಮೀಲು ಆರೋಪ:

ಯಡ್ಡಳ್ಳಿ ಗ್ರಾಮಕ್ಕೆ ಪೊಲೀಸ್ ಅಧಿಕಾರಿಗಳು ಮತ್ತು ಗಣಿ ಮತ್ತು ಭೂವಿಜ್ಞಾನ ಇಲಾಖೆಯ (Department of Mines and Geology) ಅಧಿಕಾರಿಗಳು ಹಲವು ಬಾರಿ ಭೇಟಿ ನೀಡಿದರೂ ಯಾವುದೇ ಕ್ರಮ ಕೈಗೊಂಡಿಲ್ಲ. ಅಧಿಕಾರಿಗಳು ಸಹ ಅಕ್ರಮ ಮರಳು ಗಣಿಗಾರರೊಂದಿಗೆ ಕೈಜೋಡಿಸಿದ್ದಾರೆ ಎಂಬ ಅನುಮಾನಗಳು ವ್ಯಕ್ತವಾಗುತ್ತಿವೆ.

ಜಿಲ್ಲಾ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಕ್ರಮ ಕೈಗೊಳ್ಳುತ್ತಾರಾ ಎಂದು ಕಾದು ನೋಡಬೇಕಾಗಿದೆ.

## ಜಾತಿ ಗಣತಿಗೆ ಸಚಿವ ಸಂಪುಟ ಅಸ್ತು

ಹಿಂದುಳಿದ ವರ್ಗಗಳ ಆಯೋಗದೊಂದಿಗೆ ಸಮಾಲೋಚಿಸಲಿದೆ. ಹೊಸ ಸಮೀಕ್ಷೆ ಮಾಡಿ ವರದಿ ನೀಡಲು ನಾವು 90 ದಿನಗಳ ಕಾಲಾವಕಾಶ ನೀಡಲಿದ್ದೇವೆ" ಎಂದು ಸಿಎಂ ತಿಳಿಸಿದರು.

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ಕಾಯ್ದೆಯ ಸೆಕ್ಷನ್ 11(1) ರ ಪ್ರಕಾರ, ಕೊನೆಯ ಸಮೀಕ್ಷೆ ನಡೆದು ಹತ್ತು ವರ್ಷಗಳು ಕಳೆದಿರುವುದರಿಂದ ರಾಜ್ಯ ಸರ್ಕಾರವೂ ಸಮೀಕ್ಷೆ ನಡೆಸಬೇಕು ಎಂದು ಮುಖ್ಯಮಂತ್ರಿ ಹೇಳಿದರು.

"ಎಲ್ಲಾ ಅಂಶಗಳು ಮತ್ತು ಕಾನೂನನ್ನು ಪರಿಗಣಿಸಿದ ನಂತರ, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಸಾಮಾಜಿಕ–ಶೈಕ್ಷಣಿಕ ಸಮೀಕ್ಷೆಯನ್ನು ನಡೆಸಿ ಹತ್ತು ವರ್ಷಗಳು ಕಳೆದಿವೆ. ಹಿಂದುಳಿದ ವರ್ಗಗಳ ಆಯೋಗದ ಅಧಿನಿಯಮದ ಪ್ರಕಾರ, ಸಮೀಕ್ಷೆ ನಡೆದು 10 ವರ್ಷದ ನಂತರ ಪರಿಷ್ಕರಣೆಗೆ ಅವಕಾಶವಿದೆ. ಆದ್ದರಿಂದ, ಸಂಪುಟವು ಹೊಸ ಸಮೀಕ್ಷೆ ನಡೆಸಲು ನಿರ್ಧರಿಸಿದೆ; ಮತ್ತು ಕಾಯ್ದೆಯ ಸೆಕ್ಷನ್ 11(2) ರ ಪ್ರಕಾರ ಈ ನಿಟ್ಟಿನಲ್ಲಿ ಆಯೋಗದೊಂದಿಗೆ ಸಮಾಲೋಚಿಸಲು ನಿರ್ಧರಿಸಲಾಗಿದೆ" ಎಂದು ಸಿದ್ದರಾಮಯ್ಯ ತಿಳಿಸಿದರು.

ಕರ್ನಾಟಕ ಹಿಂದುಳಿದ ವರ್ಗಗಳ ಶಾಶ್ವತ ಆಯೋಗಕ್ಕೆ ಈ ಹಿಂದೆ ಅಡ್ವೋಕೇಟ್ ಜನರಲ್ ಆಗಿದ್ದ ಮಧುಸೂದನ್ ನಾಯಕ್ ಅವರನ್ನು ಅಧ್ಯಕ್ಷರನ್ನಾಗಿ ನೇಮಿಸಲಾಗಿದೆ. ಸದಸ್ಯರನ್ನು 2–3 ದಿನಗಳಲ್ಲಿ ನೇಮಿಸಲಾಗುವುದು ಎಂದು ಹೇಳಿದರು.

ಹತ್ತು ವರ್ಷದಲ್ಲಿ ಜನಗಣತಿ ಹೆಚ್ಚಾಗುತ್ತದೆ. ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕವಾಗಿ ಬದಲಾವಣೆಗಳಾಗುತ್ತವೆ. ನಮ್ಮ ಸರ್ಕಾರ ಕಾನೂನು ರೀತಿ ನಿರ್ಧಾರ ಕೈಗೊಂಡಿದೆ. ಹೈಕಮಾಂಡ್ ಸಲಹೆ ನೀಡಿದೆ. ಆದರೆ ಹೈಕಮಾಂಡ್ ನಿರ್ಧಾರಕ್ಕೆ ಮಣಿದಿಲ್ಲ ಎಂದು ಹೇಳಿದರು.

ಕೇಂದ್ರ ಸರ್ಕಾರದ ಮುಂದಿನ ಜನಗಣತಿಯಲ್ಲಿ ಜಾತಿ ಗಣತಿ ನಡೆಸುವ ಪ್ರಶ್ನೆಗೆ ಉತ್ತರಿಸಿದ ಸಿಎಂ, ರಾಜ್ಯದ ಸಮೀಕ್ಷೆಯು ಕೇಂದ್ರಕ್ಕಿಂತ ಭಿನ್ನವಾಗಿರುತ್ತದೆ. ಏಕೆಂದರೆ ಅವರು ಸಾಮಾಜಿಕ–ಶೈಕ್ಷಣಿಕ ಸಮೀಕ್ಷೆಯನ್ನು ಮಾಡುತ್ತಾರೆ ಎಂದು ಎಲ್ಲಿಯೂ ಹೇಳಿಲ್ಲ.

ಬೆಂಗಳೂರಿನ ಕಾಲ್ತುಳಿತ ಪ್ರಕರಣದಿಂದ ಗಮನವನ್ನು ಬೇರೆಡೆ ಸೆಳೆಯಲು ಹೊಸ ಸಮೀಕ್ಷೆಯ ವಿಷಯ ಮುನ್ನೆಲೆಗೆ ತರಲಾಗಿದೆ ಎಂಬ ಬಿಜೆಪಿಯ ಆರೋಪವನ್ನು ಸಿದ್ದರಾಮಯ್ಯ ತಿರಸ್ಕರಿಸಿದರು.

ಮುಸ್ಲಿಂ ಮೀಸಲಾತಿಯನ್ನು ಶೇಕಡಾ 8 ಕ್ಕೆ ಹೆಚ್ಚಿಸುವಂತಹ ಹಿಂದಿನ ಸಮೀಕ್ಷಾ ವರದಿಯಲ್ಲಿ ಮಾಡಲಾದ ಶಿಫಾರಸು ಬಗ್ಗೆ ಪ್ರತಿಕ್ರಿಯಿಸಿದ ಸಿಎಂ, "ಹೊಸ ಸಮೀಕ್ಷೆಯ ನಂತರ ಅದನ್ನು ಮರುಪರಿಶೀಲಿಸಲಾಗುವುದು" ಎಂದು ಹೇಳಿದರು.

ಹಿಂದಿನ ಸಾಮಾಜಿಕ–ಶೈಕ್ಷಣಿಕ ಸಮೀಕ್ಷೆಯನ್ನು ಮನೆ ಮನೆಗೆ ಹೋಗಿ 54 ಮಾನದಂಡಗಳೊಂದಿಗೆ ನಡೆಸಲಾಯಿತು ಮತ್ತು ವರದಿಯನ್ನು ಸಲ್ಲಿಸಲಾಯಿತು. 2011 ರ ಜನಗಣತಿಯ ಪ್ರಕಾರ ಕರ್ನಾಟಕದ ಜನಸಂಖ್ಯೆ 6.11 ಕೋಟಿ ಆಗಿದ್ದು, 2015 ರ ಹೊತ್ತಿಗೆ, ಇದು 6.35 ಕೋಟಿ ಎಂದು ಅಂದಾಜಿಸಲಾಗಿದೆ. ಅದರಲ್ಲಿ 5.98 ಕೋಟಿಯನ್ನು ಸಮೀಕ್ಷೆ ಮಾಡಲಾಗಿದೆ. ಏಪ್ರಿಲ್ 11 ರಿಂದ ಮೇ 30, 2015 ರ ನಡುವೆ 1.60 ಲಕ್ಷ ಸಿಬ್ಬಂದಿ ಸಮೀಕ್ಷೆ ನಡೆಸಿದ್ದಾರೆ. ಅವರಲ್ಲಿ 1.33 ಲಕ್ಷ ಶಿಕ್ಷಕರು ಸೇರಿದ್ದಾರೆ ಎಂದು ಸಿಎಂ ತಿಳಿಸಿದರು.

## ಜೂ.15ರಂದು ಕಲಬುರಗಿ ಬ್ರಹ್ಮಾಕುಮಾರಿ ಕೇಂದ್ರದಲ್ಲಿ ಪತ್ರಕರ್ತರಿಗಾಗಿ ಒಂದು ದಿವಸ ವಿಚಾರ ಸಂಕಿರಣ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 12 : ಈ ತಿಂಗಳ 15 ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 1.30 ಗಂಟೆವರೆಗೆ ಕಲಬುರಗಿ ನಗರದ ಸೇಡಂ ರಸ್ತೆಯಲ್ಲಿರುವ ಗೀತಾ ನಗರದಲ್ಲಿನ ಬ್ರಹ್ಮಾಕುಮಾರಿ ರಿಟ್ರಿಟ್ ಸೆಂಟರ್ ನಲ್ಲಿ *ಕಲ್ಯಾಣ ಕರ್ನಾಟಕದ ಏಳು ಜಿಲ್ಲೆಗಳ ಮುದ್ರಣ ಹಾಗೂ ದೃಶ್ಯ ಮಾಧ್ಯಮದ ಗೆಳೆಯರಿಗೆ ಒಂದು ದಿನದ ವಿಚಾರ ಸಂಕಿರಣ ಆಯೋಜಿಸಲಾಗಿದೆ.

ರಾಜಯೋಗ ಶಿಕ್ಷಣ ಮತ್ತು ಸಂಶೋಧನಾ ಪ್ರತಿಷ್ಠಾನದ ಮಾಧ್ಯಮ ವಿಭಾಗ ಮತ್ತು ಪ್ರಜಾಪಿತಾ ಬ್ರಹ್ಮಾಕುಮಾರೀಸ್ ಈಶ್ವರೀಯ ವಿಶ್ವವಿದ್ಯಾಲಯ ಮೌಂಟ್ ಅಬು ಮತ್ತು ಉಪ ವಲಯ ಕೇಂದ್ರ, ಕಲಬುರಗಿ ಇವರ ಸಹಯೋಗದಲ್ಲಿ ವಿಚಾರ ಸಂಕಿರಣ ಹಮ್ಮಿಕೊಳ್ಳಲಾಗಿದೆ.

*ಶಾಂತಿ, ಏಕತೆ ಮತ್ತು ವಿಶ್ವಾಸವನ್ನು ಉತ್ತೇಜಿಸುವಲ್ಲಿ ಮಾಧ್ಯಮಗಳ ಪಾತ್ರ* ಎಂಬ ವಿಷಯದ ಕುರಿತು ವಿಚಾರ ಸಂಕಿರಣ ಜರುಗಲಿದೆ.

ಬ್ರಹ್ಮಕುಮಾರೀಸ್ ಪ್ರಧಾನ ಕೇಂದ್ರ ಮೌಂಟ್ ಅಬುದ ಮಾಧ್ಯಮ ವಿಭಾಗದ ರಾಷ್ಟ್ರೀಯ ಸಂಯೋಜಕರಾದ ಬಿ.ಕೆ ಶಾಂತನು ಭಾಯಿ, ಹೈದ್ರಾಬಾದ್ ನ ಬಿ.ಕೆ ಸರಳಾ ದಿದಿ, ರಾಜಯೋಗಿನಿ ಬಿ.ಕೆ ಮಂಜು ದಿದಿ ಹಾಗೂ ಇತರರು ವಿಚಾರ ಸಂಕಿರಣ ಉದ್ದೇಶಿಸಿ ಮಾತನಾಡುವರು.

ಕಾರಣ ಬೀದರ್ ಜಿಲ್ಲೆಯ ಎಲ್ಲ ಮುದ್ರಣ ಹಾಗೂ ದೃಶ್ಯ ಮಾಧ್ಯಮ ದ ಗೆಳೆಯರು ಈ ಮಹತ್ವದ ವಿಚಾರ ಸಂಕಿರಣದಲ್ಲಿ ಭಾಗವಹಿಸಬೇಕಾಗಿ ವಿನಂತಿ

## ಸಿಇಐಆರ್ ಪೋರ್ಟಲ್ ಮೂಲಕ 46.54 ಲಕ್ಷ ರೂ.ಮೊತ್ತದ 225 ಮೊಬೈಲ್ ಪತ್ತೆ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.12:ಕಲಬುರಗಿ ನಗರ ಪೊಲೀಸರು ಭರ್ಜರಿ ಕಾರ್ಯಾಚರಣೆ ನಡೆಸಿ ಸಿಇಐ–ಆರ್ ಪೋರ್ಟಲ್ ಮೂಲಕ 46,54,000 ರೂ.ಮೌಲ್ಯದ 225 ಮೊಬೈಲ್‌ಗಳನ್ನು ಪತ್ತೆ ಹಚ್ಚುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ.ತಿಳಿಸಿದರು.

ನಗರದ ಕಮೀಷನರ್ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾರ್ವಜನಿಕರು ತಮ್ಮ ಮೊಬೈಲ್ ಫೋನ್‌ಗಳನ್ನು ಕಳೆದುಕೊಂಡ ಬಗ್ಗೆ ನಗರ ಪೊಲೀಸ್ ಆಯುಕ್ತಾಲಯ ವ್ಯಾಪ್ತಿಯಲ್ಲಿ ಬರುವ ಪೊಲೀಸ್ ಠಾಣೆಗಳಲ್ಲಿ ಇ–ಲಾಸ್ಟ್ ಮತ್ತು ಸಿಇಐಆರ್ ಪೋರ್ಟಲ್‌ನಲ್ಲಿ ದೂರು ಸಲ್ಲಿಸಿದ್ದರು.

ಈ ದೂರಿನ ಅನ್ವಯ ಡಿಸಿಪಿಗಳಾದ ಕನಿಕಾ ಸಿಕ್ರಿವಾಲ್, ಪ್ರವೀಣ್ ಹೆಚ್.ನಾಯಕ, ಕಲಬುರಗಿ ನಗರ ಹಾಗೂ ನಗರದ ಎಲ್ಲಾ ಸಹಾಯಕ ಪೊಲೀಸ್ ಆಯುಕ್ತರ ಮಾರ್ಗದರ್ಶನದಲ್ಲಿ ನಗರ ವ್ಯಾಪ್ತಿಯ ಎಲ್ಲಾ ಪೊಲೀಸ್ ಠಾಣೆಗಳ ಪೊಲೀಸ್ ಇನ್ಸಪೆಕ್ಟರ್‌ಗಳ ಮುಂದಾಳತ್ವದಲ್ಲಿ ಎಲ್ಲಾ ಪೊಲೀಸ್ ಠಾಣೆಗಳಲ್ಲಿನ ಸಿಇಐಆರ್ ಪೋರ್ಟಲ್ ಕರ್ತವ್ಯ ನಿರ್ವಹಿಸುವ ತಾಂತ್ರಿಕ ಸಿಬ್ಬಂದಿಗಳ ಸಹಾಯದಿಂದ 1.3.2023 ರಿಂದ ಇಲ್ಲಿಯವರೆಗೆ ಒಟ್ಟು 1423 ಮೊಬೈಲ್ ಫೋನ್‌ಗಳನ್ನು ಪತ್ತೆ ಹಚ್ಚಿ ವಾರಸುದಾರರಿಗೆ ಹಿಂದಿರುಗಿಸಲಾಗಿದೆ ಎಂದು ತಿಳಿಸಿದರು.

ಪ್ರಸ್ತುತ 46.54 ಲಕ್ಷ ರೂ. ಮೌಲ್ಯದ 225 ಮೊಬೈಲ್‌ಗಳನ್ನು ಪತ್ತೆ ಹಚ್ಚಲಾಗಿದ್ದು, 1648 ಮೊಬೈಲ್‌ಗಳನ್ನು ವಾರಸುದಾರರಿಗೆ ಹಿಂದಿರುಗಿಸಲಾಗಿದೆ ಎಂದು ತಿಳಿಸಿದರು.

ಸಾರ್ವಜನಿಕರು ತಮ್ಮ ಮೊಬೈಲ್ ಫೋನ್‌ಗಳನ್ನು ಕಳೆದುಕೊಂಡಲ್ಲಿ ಅಥವಾ ಕಳ್ಳತನವಾದಲ್ಲಿ ಇ–ಲಾಸ್ಟ್ ಮತ್ತು ಸಿಇಐಆರ್ ಪೋರ್ಟಲ್‌ನಲ್ಲಿ ತಮ್ಮ ದೂರುಗಳನ್ನು ದಾಖಲಿಸಬೇಕು ಎಂದು ಅವರು ತಿಳಸಿದರು.

ಕಳವಾದ ಮೊಬೈಲ್ ಫೋನ್‌ಗಳ ಪತ್ತೆ ಕಾರ್ಯದಲ್ಲಿ ಯಶಸ್ವಿಯಾದ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳ ಕಾರ್ಯವನ್ನು ಅವರು ಶ್ಲಾಘಿಸಿದರು.

ಸುದ್ದಿಗೋಷ್ಠಿಯಲ್ಲಿ ಡಿಸಿಪಿಗಳಾದ ಕನಿಕಾ ಸಿಕ್ರಿವಾಲ್, ಪ್ರವೀಣ್ ಹೆಚ್.ನಾಯಕ ಉಪಸ್ಥಿತರಿದ್ದರು.

# ನ್ಯೂಸ್ 81 ಕನ್ನಡ ವಾಹಿನಿಯ ಎರಡನೇ ವರ್ಷದ ವಾರ್ಷಿಕೋತ್ಸವ ಅದ್ದೂರಿ ಕಾರ್ಯಕ್ರಮ.!




ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ನ್ಯೂಸ್ 81 ಕನ್ನಡ ನ್ಯೂಸ್ ವಾಹಿನಿಯ ಅದ್ದೂರಿ ಕಾರ್ಯಕ್ರಮವು ಇತ್ತೀಚೆಗೆ ಬೆಂಗಳೂರಿನಲ್ಲಿ ಮಲ್ಲಸಂದ್ರದ ಅಂಬೇಡ್ಕರ್ ಭವನದಲ್ಲಿ ವಿಜೃಂಭಣೆಯಿಂದ ನೆರವೇರಿತು.ಈ ಕಾರ್ಯಕ್ರಮವನ್ನು ದಾಸರಹಳ್ಳಿ ಕ್ಷೇತ್ರದ ಮಾನ್ಯ ಶಾಸಕ ಶ್ರೀ ಎಸ್. ಮುನಿರಾಜು ಅವರು ಉದ್ಘಾಟಿಸಿದರು ಮತ್ತು ಮಹತ್ವದ ಭಾಷಣ ನೀಡಿದರು.

ಕಾರ್ಯಕ್ರಮದಲ್ಲಿ ಮಠದ ಶ್ರೀ ಸ್ವಾಮಿಗಳು ಆಶೀರ್ವಚನ ನೀಡಿ, ನ್ಯೂಸ್ 81 ವಾಹಿನಿಯ ಪ್ರಗತಿಗೆ ಶುಭಹಾರೈಸಿದರು. ಚಿತ್ರರಂಗದ ಜನಪ್ರಿಯ ಕಲಾವಿದರಾದ " ನಟ ನಿರ್ಮಾಪಕ ಸ್ಮೈಲ್ ಶಿವು, ನ್ಯೂಸ್ 81 ವಾಹಿನಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರಶಾಂತ್ ಗೌಡರು, "ವೀರೇಶ್ ಟಕ್ಕಳಕಿ ಕೆಂಭಾವಿ" ನೇತ್ರ.ಎಂ ಅವರಿಗೆ ಕಾರ್ಯಕ್ರಮದಲ್ಲಿ ಭಾಗವಹಿಸಿದ ಅತಿಥಿಗಳು ಶುಭ ಕೋರಿದರು.

ಸಮಾರಂಭವು ವಿವಿಧ ಕ್ಷೇತ್ರಗಳ ಗಣ್ಯರು ಹಾಗೂ ಭಾರೀ ಸಂ–ಖ್ಯೆಯ ಮಧ್ಯೆ ಯಶಸ್ವಿಯಾಗಿ ಆಯೋಜನೆಯಾಯಿತು. ನ್ಯೂಸ್ 81 ಕನ್ನಡ ವಾಹಿನಿಯ ಈ ಪ್ರಯತ್ನವು ಸುದ್ದಿಮಾಧ್ಯಮ ಕ್ಷೇತ್ರದಲ್ಲಿ ಹೊಸ ಯುಗದ ಪ್ರಾರಂಭವೆನ್ನಿಸಬಹುದು. ಆಯ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ನ್ಯೂಸ್ 81 ಕನ್ನಡ ವಾಹಿನಿಯ ಎರಡನೇ ವಾರ್ಷಿಕೋತ್ಸವದ ಸಂಭ್ರಮದಲ್ಲಿ ಸನ್ಮಾನಿಸಲಾಯಿತು.

## ‘ಅಹಿಂದ’ ರಾಜ್ಯ ಸಂಚಾಲಕರಾಗಿ ವಿಜಯ್ ಭರತ್



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ:ಜೂ.12:ಶತಮಾನಗಳಿಂದಲೂ ಶೋಷಿಸಲ್ಪಡುತ್ತಿರುವ ಅಲ್ಪಸಂಖ್ಯಾತ, ಹಿಂದುಳಿದ ಮತ್ತು ದಲಿತರಿಗೆ ನ್ಯಾಯ ದೊರಕಿಸಿ ಕೊಡಲು ‘ಅಹಿಂದ’ ಚಳುವಳಿಯನ್ನು ಹುಟ್ಟು ಹಾಕಿದ್ದು ಯಾದಗಿರಿ ಜಿಲ್ಲೆಯ ಲಕ್ಷ್ಮಿ ಮಿನರಲ್ ವಾಟರ್ ನ ವಿಜಯ್ ಭರತ್ ಮಾರುತಿರಾವ್ ಇವರನ್ನು ರಾಜ್ಯ ಸಂಚಾಲಕರನ್ನಾಗಿ ನಿಯೋಜಿಸಲಾಗಿದೆ.‘ಅಹಿಂದ’ ರಾಜ್ಯ ಮುಖ್ಯ ಸಂಚಾಲಕರಾದ ಮೂರ್ತಿ ಸಿದ್ದಯ್ಯ ಈ ಕುರಿತು ಪ್ರಕಟಣೆ ನೀಡಿದ್ದು, ಇದೊಂದು ಸಾಮಾಜಿಕ ಜವಾಬ್ದಾರಿಯಾಗಿದೆ."ಅಹಿಂದ" –ಚಳುವಳಿ ಸಂಘಟನೆಯ ರಾಜ್ಯ ಘಟಕದ ಕಲ್ಯಾಣ ಕರ್ನಾಟಕದ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದೆ.ಅಹಿಂದ ಸಮುದಾಯಗಳ ಬದುಕನ್ನು ಬದಲಾಯಿಸಲು ಮತ್ತು ಸೇವಾ ಭಾವನೆಗಳಿಂದ ಸೇವೆ ಮಾಡಲು, "ಅಹಿಂದ" –ಚಳುವಳಿ ಸಂಘಟಣೆಯ ಬೈಲಾ, ಉದ್ದೇಶಗಳು, ಗುರಿಗಳನ್ನು ಪಾಲಿಸುವುದು, ಅದರಂತೆ ಕಾರ್ಯನಿರ್ವಹಿಸಲು ಸಲಹೆ ನೀಡಿರುವ ಮೂರ್ತಿ ಸಿದ್ದಯ್ಯ ಇವರು, ಹೆಚ್ಚುವರಿಯಾಗಿ, ರಾಜ್ಯದ "ಕಲ್ಯಾಣ ಕರ್ನಾಟಕ" ಜಿಲ್ಲೆಗಳಾದ ಯಾದಗಿರಿ, ಬಿದರ್, ಗುಲ್ಬರ್ಗಾ, ರಾಯಚೂರು, ಕೊಪ್ಪಳ, ವಿಜಯನಗರ ಮತ್ತು ಬಳ್ಳಾರಿ ಜಿಲ್ಲೆಗಳಲ್ಲಿ ಸಂಘಟಣೆಯ "ಜಿಲ್ಲಾ ಘಟಕ’ಗಳನ್ನು ರಚನೆ ಮಾಡಲು ಸೂಕ್ತ ಅಭ್ಯರ್ಥಿಗಳನ್ನು ಶಿಫಾರಸ್ಸು ಮಾಡುವುದು; ರಾಜ್ಯ ಮುಖ್ಯ ಸಂಚಾಲಕರು ಸೂಚಿಸಿದ ಜಿಲ್ಲೆಗಳ ಉಸ್ತುವಾರಿ ಕಾರ್ಯಗಳನ್ನು ನಿರ್ವಹಿಸಲು ಸೂಚಿಸಿದ್ದಾರೆ. ರಾಜ್ಯವ್ಯಾಪಿ ಅಹಿಂದ ಸಮುದಾಯಗಳ ಆರ್ಥಿಕ ಶಕ್ತಿ ವೃದ್ಧಿಗಾಗಿ "ಅಹಿಂದ ಸಬಲೀಕರಣ ಸೌಹಾರ್ದ ಸಹಕಾರಿ ಬ್ಯಾಂಕ್" ಸ್ಥಾಪನೆ ಮಾಡಲು, ಉದ್ದೇಶಗಳ ಗುರಿಗಳನ್ನು ಜಾರಿಗೊಳಿಸಲು, ಸಮುದಾಯ, ಜಿಲ್ಲಾ ಮತ್ತು ತಾಲ್ಲೂಕು ಘಟಕಗಳ ಮೂಲಕ ಕ್ರಮವಹಿಸಲು ವಿಜಯ್ ಭರತ್ ಅವರಿಗೆ ಸೂಚಿಸಿ ಈ ಪದನಾಮ ನೀಡಿರುವುದಾಗಿ ತಿಳಿಸಿದ್ದಾರೆ.

# ನಾಳೆ ಯೋಗಾಭ್ಯಾಸ, ಉಪನ್ಯಾಸ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜೂ.12: ಪಟ್ಟಣದ ಸಿದ್ಧಾರ್ಥ ನಗರದ ಶಣ್ಮುಖಪ್ಪ ಕಲ್ಯಾಣ ಮಂಟಪದಲ್ಲಿ ಶನಿವಾರ ಬೆಳಿಗ್ಗೆ 6 ಗಂಟೆಗೆ ಯೋಗಭ್ಯಾಸ ಮತ್ತು ವಿಶೇಷ ಉಪನ್ಯಾಸ ಕಾರ್ಯಕ್ರಮ ನಡೆಯಲಿದೆ ಎಂದು ವಿವೇಕ ವಾಹಿನಿ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಕಾರ್ಯದರ್ಶಿ ಈಶ್ವರ ರುಮ್ಮಾ ತಿಳಿಸಿದ್ದಾರೆ.

ವಿಶ್ವಯೋಗ ದಿನಾಚರಣೆಯ ಪ್ರಚಾರ ಮತ್ತು ಪ್ರಸಾರದ ನಿಮಿತ್ತ ದೇಶಾದ್ಯಂತ ಆಯುಷ ಇಲಾಖೆ ವತಿಯಿಂದ ಹಲವಾರು ವಿಭಿನ್ನ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದ್ದು ಅದರಲ್ಲಿ ಯೋಗಾಭ್ಯಾಸ, ವಿಶೇಷ ಉಪನ್ಯಾಸ ಕಾರ್ಯಕ್ರಮವು ಒಂದಾಗಿದೆ.

ಭಾರತ ಸರಕಾರದ ಆಯುಷ ಇಲಾಖೆಯ ಸೆಂಟ್ರಲ್ ಕೌನ್ಸಿಲ್ ಫಾರ್ ರಿಸರ್ಚ್ ಇನ್ ಯೋಗ ಆಂಡ್ ನ್ಯಾಚುರೋಪತಿ, ವಿವೇಕ ವಾಹಿನಿ ಶಿಕ್ಷಣ ಸಂಸ್ಥೆ ಸಹಯೋಗದಲ್ಲಿ ಈ ಯೋಗಾಭ್ಯಾಸ ಮತ್ತು ವಿಶೇಷ ಉಪನ್ಯಾಸ ಆಯೋಜಿಸಲಾಗಿದೆ.

ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ದಿವ್ಯ ಸಾನ್ನಿಧ್ಯ ವಹಿಸಲಿದ್ದಾರೆ.ಐಎನ್‌ಓ ಸಂಸ್ಥೆಯ ಜಿಲ್ಲಾ ಉಪಾಧ್ಯಕ್ಷ ಹರಿದೇವ ರುದ್ರಮುನಿ ಯೋಗವನ್ನು ಹೇಳಿಕೊಡಲಿದ್ದಾರೆ.

ಕಲಬುರಗಿಯ ನ್ಯಾಚುರೋಪತಿ ವೈದ್ಯ ಡಾ.ಋಷಿಕೇಶ ಅವರು ಯೋಗ ಹಾಗೂ ಪ್ರಾಕೃತಿಕ ಚಿಕಿತ್ಸಾ ಪದ್ಧತಿ ಕುರಿತು ವಿಶೇಷ ಉಪನ್ಯಾಸ ನೀಡಲಿದ್ದಾರೆ.

ಚನ್ನಬಸವಣ್ಣ ಬಳತೆ, ಜೈರಾಜ ದಾಬಶೆಟ್ಟಿ, ಸೂರ್ಯಕಾಂತ ಮಲ್ಲಾಸುರೆ, ಸಂಗಮೇಶ ಗಾಮಾ, ಜಯಕಿಶನ್ ಬಿಯಾನಿ, ಗುರುನಾಥ ರಾಜಗೀರಾ, ಗೋರಖನಾಥ ಕುಂಬಾರ, ಶಿವಕುಮಾರ ಕೇರೂರೆ ಸೇರಿದಂತೆ ಮುಂತಾದವರು ಭಾಗವಹಿಸಲಿದ್ದಾರೆ.ಸಾರ್ವಜನಿಕರು ಕೂಡ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೋಗಗಳ ನಿಯಂತ್ರಣಕ್ಕೆ ಮುನ್ನೆಚ್ಚರಿಕೆ ವಹಿಸಿ: ಶಾಸಕ ಪ್ರಭು ಚವ್ಹಾಣ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಔರಾಧ:ಜೂ.12:ಮಳೆಗಾಲ ಆರಂಭವಾಗಿದ್ದು, ಕೆಲವೆಡೆ ವಾಂತಿ–ಬೇಧಿ ಪ್ರಕರಣಗಳು ಕಂಡುಬಂದಿದ್ದು, ರೋಗಗಳ ಹತೋಟಿಗೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಜರುಗಿಸಬೇಕೆಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳನ್ನು ದೂರವಾಣಿ ಮುಖಾಂತರ ಸಂಪರ್ಕಿಸಿರುವ ಅವರು, ಮಳೆಗಾಲದ ಸಂದರ್ಭದಲ್ಲಿ ರಸ್ತೆಗಳ ಮೇಲೆ ಕೊಳಚೆ ನೀರು ಹರಿಯುತ್ತದೆ. ಈ ನೀರು ಕುಡಿಯುವ ನೀರಿನಲ್ಲಿ ಬೆರೆತರೆ ನಾನಾ ರೀತಿಯ ರೋಗಗಳಿಗೆ ಕಾರಣವಾಗುತ್ತದೆ. ಹಾಗಾಗಿ ಎಲ್ಲಿಯೂ ಕೊಳಚೆ ನೀರು ನಿಲ್ಲದಂತೆ ವ್ಯವಸ್ಥೆ ಮಾಡಿಕೊಳ್ಳುವಂತೆ ಮತ್ತು ಒಡೆದ ಪೈಪುಗಳನ್ನು ಸರಿಪಡಿಸಿಕೊಳ್ಳುವುದು, ಪೈಪುಗಳಿರುವ ಕಡೆ ನೀರು ನಿಲ್ಲದಂತೆ ನೋಡಿಕೊಳ್ಳುವುದು ಇಂತಹ ಸಣ್ಣ–ಪುಟ್ಟ ಸಮಸ್ಯೆಗಳನ್ನು ತಕ್ಷಣ ಗ್ರಾಮ ಪಂಚಾಯಿತಿಯಿಂದ ಸರಿಪಡಿಸಿಕೊಳ್ಳುವಂತೆ ತಮ್ಮ ವ್ಯಾಪ್ತಿಯ ಅಧಿಕಾರಿಗಳಿಗೆ ನಿರ್ದೇಶನ ನೀಡಬೇಕೆಂದು ಹೇಳಿದ್ದಾರೆ.ಹಲವು ಕಡೆಗಳಲ್ಲಿ ಚರಂಡಿಗಳ ಸ್ವಚ್ಛತೆಯ ಬಗ್ಗೆ ಗಮನ ಹರಿಸುತ್ತಿಲ್ಲ. ಚರಂಡಿ, ತಗ್ಗು–ಗುಂಡಿಗಳಲ್ಲಿ ನೀರು ನಿಲ್ಲುವುದರಿಂದ ಸೊಳ್ಳೆ ಹಾವಳಿ ಹೆಚ್ಚಾಗಿ ಡೆಂಗ್ಯೂ, ಮಲೇರಿಯಾದಂತಹ ವಿವಿಧ ಸಾಂಕ್ರಾಮಿಕ ರೋಗಗಳು ಹರಡುವ ಭೀತಿ ಇರುತ್ತದೆ. ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಚುರುಕಾಗಬೇಕು. ಎಲ್ಲ ಗ್ರಾಮಗಳನ್ನು ಸ್ವಚ್ಛವಾಗಿಡಬೇಕು ಎಂದಿದ್ದಾರೆ.ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಕೇಂದ್ರಸ್ಥಾನದಲ್ಲಿದ್ದು ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕು. ಎಲ್ಲ ಗ್ರಾಮಗಳಲ್ಲಿ ಸ್ವಚ್ಛತಾ ಕಾರ್ಯ ಸಮರೋಪಾದಿಯಲ್ಲಿ ನಡೆಯಬೇಕು.ರಸ್ತೆ,ಬೀದಿಗಳನ್ನು ಶುಚಿಯಾಗಿಡಬೇಕು.ಬ್ಲೀಚಿಂಗ್ ಪೌಡರ್ ಸಿಂಪಡಿಸಬೇಕು. ಜನತೆಗೆ ಪ್ರತಿದಿನ ಸ್ವಚ್ಛ ನೀರು ಪೂರೈಸಬೇಕು. ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಕಛೇರಿಗೆ ಸೀಮಿತವಾಗದೇ ಗ್ರಾಮಗಳಿಗೆ ಭೇಟಿ ನೀಡಿ ಸ್ವಚ್ಛತೆಯ ಕುರಿತು ನಿಗಾ ವಹಿಸಬೇಕು. ತಾವು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಬೇಕೆಂದು ಹೇಳಿದ್ದಾರೆ.

ಆರೋಗ್ಯ ಇಲಾಖೆಯ ಜವಾಬ್ದಾರಿ ಹೆಚ್ಚಿನ ಪ್ರಮಾಣದಲ್ಲಿದ್ದು, ಎಲ್ಲ ಆಸ್ಪತ್ರೆಗಳಲ್ಲಿ ಚಿಕಿತ್ಸೆಗೆ ಅಗತ್ಯ ವ್ಯವಸ್ಥೆಗಳನ್ನು ಮಾಡಿಕೊಳ್ಳಬೇಕು. ತಾಲ್ಲೂಕು ವೈದ್ಯಾಧಿಕಾರಿಗಳು ಎಲ್ಲ ಆಸ್ಪತ್ರೆಗಳಿಗೆ ಭೇಟಿ ನೀಡಿ ವ್ಯವಸ್ಥೆ ಪರಿಶೀಲಿಸಬೇಕು. ಮಳೆಗಾಲದಲ್ಲಿ ಹರಡುವ ರೋಗಗಳು ಮತ್ತು ನಿಯಂತ್ರಣ ಕ್ರಮಗಳ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಕೆಲಸ ಅಚ್ಚುಕಟ್ಟಾಗಿ ಆಗಬೇಕು ಡಿಎಚ್‌ಓ ಅವರಿಗೆ ತಿಳಿಸಿದ್ದಾರೆ.

ಸಾರ್ವಜನಿಕರಲ್ಲಿ ಮನವಿ: ಮಳೆಗಾಲದ ಸಂದರ್ಭದಲ್ಲಿ ಸಾರ್ವಜನಿಕರು ತಮ್ಮ ಆರೋಗ್ಯದತ್ತ ಹೆಚ್ಚಿನ ಕಾಳಜಿ ವಹಿಸಬೇಕು. ತಮ್ಮ ಮನೆ ಮತ್ತು ಸುತ್ತಲಿನ ಪರಿಸರವನ್ನು ಶುಚಿಯಾಗಿಟ್ಟುಕೊಳ್ಳಬೇಕು. ಮಳೆ ನೀರು ನಿಲ್ಲದಂತೆ ನೋಡಿಕೊಳ್ಳಬೇಕು.ಚರಂಡಿಗಳು, ಹಳೆಯ ಟೈರ್‌ಗಳು, ತೆಂಗಿನ ಚಿಪ್‌ಗಳಲ್ಲಿ, ತೊಟ್ಟಿಗಳಲ್ಲಿ ನೀರು ಬಹಳ ಕಾಲದವರೆಗೆ ಸಂಗ್ರಹಗೊಳ್ಳದಂತೆ ನೋಡಿಕೊಳ್ಳಬೇಕು. ಸಾಧ್ಯವಾದಷ್ಟು ಕಾಯಿಸಿದ ನೀರನ್ನು ಸೇವಿಸಬೇಕು. ಏನಾದರೂ ಆರೋಗ್ಯ ಸಮಸ್ಯೆಗಳು ಕಾಣಿಸಿದಲ್ಲಿ ತಕ್ಷಣ ಹತ್ತಿರದ ಆರೋಗ್ಯ ಕೇಂದ್ರಗಳಿಗೆ ತೆರಳಿ ಚಿಕಿತ್ಸೆ ಪಡೆಯಬೇಕು ಎಂದು ಶಾಸಕರು ಮನವಿ ಮಾಡಿದ್ದಾರೆ.

# ಹೂವು, ಔಷಧಿ ಸಸ್ಯಗಳಿಗೆ ಆದ್ಯತೆ ನೀಡಿ : ಗೆಹ್ಲೋಟ್

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.12–ದೇಶದ ಆರ್ಥಿಕತೆಯಲ್ಲಿತೋಟಗಾರಿಕೆಯಿಂದ ಹೆಚ್ಚಿನ ಜಿಡಿಪಿ ಬರುತ್ತಿದ್ದು, ಹೂವು ಮತ್ತು ಔಷಧಿ ಸಸ್ಯಗಳಿಗೆ ಹೆಚ್ಚಿನ ಆದ್ಯತೆ ನೀಡುವಂತೆ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಹೇಳಿದರು.



ತೋಟಗಾರಿಕೆ ವಿಶ್ವವಿದ್ಯಾಲಯದ ಉದ್ಯಾನಗಿರಿಯ ಮುಖ್ಯ ಪ್ರೇಕ್ಷಾಗೃಹದಲ್ಲಿ ಮಂಗಳವಾರ ಜರುಗಿದ 14ನೇ ಘಟಿಕೋತ್ಸವದಲ್ಲಿ ಪದವಿ ವಿದ್ಯಾರ್ಥಿಗಳಿಗೆ ಬಂಗಾರದ ಪದಕ ಪ್ರದಾನ ಮಾಡಿ ಮಾತನಾಡಿದ ಅವರು, ಭಾರತ ಇಂದು ಸೂಕ್ಷ್ಮ ಹಾಗೂ ಸುಂದರವಾದ ಹೂಗಳ ಉತ್ಪಾದನೆಗೆ ಜಾಗತಿಕ ಮನ್ನಣೆ ಪಡೆಯುತ್ತಿದೆ. ಕಾರಣ ರೈತರು ಇಂತಹ ಹೂಗಳ ಉತ್ಪಾದನೆ ಮಾಡಿ ಆರ್ಥಿಕವಾಗಿ ಪ್ರಗತಿ ಹೊಂದಬೇಕು. ಸೌಂದರ್ಯವರ್ಧಕ ಹಾಗೂ ಸುಹಾಸಿತ ಉತ್ಪನ್ನಗಳಿಗೆ ಹೆಚ್ಚಿನ ಬೇಡಿಕೆ ಇದ್ದು, ರೈತರು ಕೃಷಿ ಜೊತೆಗೆ ತೋಟಗಾರಿಕಾ ಬೆಳೆಗಳಲ್ಲಿ ಇವುಗಳಿಗೂ ಆದ್ಯತೆ ನೀಡಬೇಕು ಎಂದರು.

ಗ್ರಾಮೀಣ ಭಾಗದ ರೈತರಿಗೆ ತಂತ್ರಜ್ಞಾನ ಮಾಹಿತಿ ಇರುವದಿಲ್ಲ. ಕಾರಣ ವಿಜ್ಞಾನಿಗಳು ರೈತರಿಗೆ ಅಂತಹ ತಂತ್ರಜ್ಞಾನದ ಬಗ್ಗೆ ಮಾಹಿತಿ ನೀಡಿ ಅವರ ಉತ್ಪಾದನೆ ಹೆಚ್ಚಿಸುವ ಕಾರ್ಯವಾಗಬೇಕು. ಇಂದು ಘಟಿಕೋತ್ಸವದಲ್ಲಿ ಡಾಕ್ಟರೇಟ್ ಹಾಗೂ ಸ್ನಾತಕೋತ್ತರ ಪದವಿಗಳಲ್ಲಿ ಮಹಿಳೆಯರೇ ಹೆಚ್ಚಿನ ಬಂಗಾರ ಪದಕಗಳನ್ನು ಪಡೆದುಕೊಂಡಿರುವುದು ಸಂತಸದ ವಿಷಯವಾಗಿದೆ. ಅಲ್ಲದೇ ಸರಕಾರ ಮಹಿಳೆಯರಿಗೆ ನೀಡಿದ ಮೀಸಲಾತಿಯನ್ನು ಸದುಪಯೋಗವಾದ ಕ್ಷಣ ಇದಾಗಿದೆ ಎಂದು ಅವರು ಹೇಳಿದರು.

ಘಟಿಕೋತ್ಸವದ ಮುಖ್ಯ ಭಾಷಣಕಾರರಾಗಿ ಆಗಮಿಸಿದ್ದ ಹೈದರಾಬಾದನ ಅರೆ–ಶುಷ್ಕ ಉಷ್ಣವಲಯದ ಅಂತರರಾಷ್ಟ್ರೀಯ ಬೆಳೆಗಳ ಸಂಶೋಧನ ಸಂಸ್ಥೆಯ ಮಹಾ ನಿರ್ದೇಶಕ ಡಾ.ಹಿಮಾಂಶು ಪಾಠಕ್ ಮಾತನಾಡಿ, ತೋಟಗಾರಿಕೆ ಆರ್ಥಿಕ ಅಭಿವೃದ್ಧಿಯ ಇಂಜಿನ್ ಆಗಿದ್ದು, ಬೆಳೆ ವೈವಿಧ್ಯತೆಯನ್ನು ಸಕ್ರಿಯಗೊಳಿಸಿ ಕೃಷಿ–ಕೈಗಾರಿಕೆಗಳನ್ನು ಬೆಂಬಲಿಸಿ ಗ್ರಾಮೀಣ ಉದ್ಯಮಿಗಳನ್ನು ಸಬಲೀಕರಣಗೊಳಿಸುತ್ತದೆ. ಸುಸ್ಥಿರ ಕೃಷಿ ಪಾತ್ರದಲ್ಲಿ ತೋಟಗಾರಿಕೆ ಜಾಗತಿಕವಾಗಿ ಪ್ರಾಮುಖ್ಯತೆ ಪಡೆಯುತ್ತಿದ್ದು, ಭಾರತ ಹಣ್ಣು ಮತ್ತು ತರಕಾರಿಗಳ 2ನೇ ಅತಿ–ದೊಡ್ಡ ಉತ್ಪಾದಕ ರಾಷ್ಟ್ರವಾಗಿದೆ. ಕೃಷಿ ರಫ್ತಿನಲ್ಲಿ ಏಳನೇ ಸ್ಥಾನ ಪಡೆದಿದೆ. ತೋಟಗಾರಿಕೆಯಲ್ಲಿ ಹಸಿರು ಮನೆ ಪದ್ಧತಿಯು ವೇಗವಾಗಿ ಬೆಳೆಯುತ್ತಿದೆ. ಇದರ ಮಾರುಕಟ್ಟೆ ಗಾತ್ರವು 2024ರಲ್ಲಿ 33.4 ಬಿಲಿಯನ್ ಡಾಲರ್‌ದಿಂದ 2033ರ ವೇಳೆಗೆ 69.7 ಬಿಲಿಯನ್ ಡಾಲರ್‌ಗೆ ಹೆಚ್ಚಾಗುವ ನಿರೀಕ್ಷೆಯಿದೆ ಎಂದರು.

ಭಾರತದ ತೋಟಗಾರಿಕೆ ಆಂದೋಲನದಲ್ಲಿ ಕರ್ನಾಟಕ ಮುಂಚೂಣಿಯಲ್ಲಿದ್ದು, ರಾಷ್ಟ್ರೀಯ ತೋಟಗಾರಿಕೆ ಮಿಷನ್ ನಂತಹ ಕೇಂದ್ರಿಕೃತ ಉಪಕ್ರಮಗಳ ಮೂಲಕ ರಾಜ್ಯವು ವೈವಿದ್ಯಮಯ ಮತ್ತು ಸಂಮೃದ್ಧಿ ತೋಟಗಾರಿಕೆವಲಯವನ್ನು ಬೆಳೆಸಿದೆ. ಅಡಿಕೆ, ಕಾಫಿ, ತೆಂಗಿನಕಾಯಿ, ಅರಿಶಿಣ, ಏಲಕ್ಕಿ, ಶುಂಠಿ ಮತ್ತು ಕಾಳು ಮೆಣಸಿನಂತಹ ಹೆಚ್ಚಿನ ಮೌಲ್ಯದ ತೋಟಗಾರಿಕೆ ಬೆಳೆಗಳನ್ನು ಉತ್ಪಾದಿಸುತ್ತದೆ. ಮಾರ್ಚ 2025ರ ಹೊತ್ತಿಗೆ ಕರ್ನಾಟಕ ತೋಟಗಾರಿಕಾ ಪ್ರದೇಶವು 2.63 ಮಿಲಿಯನ್ ಹೆಕ್ಟೇರ್‌ಗಳನ್ನು ವ್ಯಾಪಿಸಿದೆ. ಧಾರವಾಡ, ಬೆಳಗಾವಿ, ಕೋಲಾರ, ವಿಜಯಪುರ ಮತ್ತು ಚಿಕ್ಕಮಗಳೂರು ಜಿಲ್ಲೆಗಳು ಮಾವು, ದ್ರಾಕ್ಷಿ, ಮಸಾಲೆ ಪದಾರ್ಥ ಮತ್ತು ತರಕಾರಿಗಳಿಗೆ ಹೆಸರುವಾಸಿಯಾಗಿದೆ ಎಂದು ಅವರು ಹೇಳಿದರು.

2008ರಲ್ಲಿ ಸ್ಥಾಪನೆಯಾದ ಬಾಗಲಕೋಟೆ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯವು ತೋಟಗಾರಿಕೆ ಶಿಕ್ಷಣ, ಸಂಶೋಧನೆ ಮತ್ತು ವಿಸ್ತರಣೆಯಲ್ಲಿ ರಾಷ್ಟ್ರೀಯ ನಾಯಕನಾಗಿ ಹೊರಹೊಮ್ಮಿದೆ. ಕೇವಲ 16 ವರ್ಷಗಳಲ್ಲಿ ವಿಶ್ವವಿದ್ಯಾಲಯವು ಪ್ರಭಾವಶಾಲಿ ಶೈಕ್ಷಣಿಕ ಮತ್ತು ಸಂಶೋಧನಾ ಬಂಡವಾಳವನ್ನು ವಿಸ್ತರಿಸಿದೆ. ಪದವಿ ಪಡೆದ ವಿದ್ಯಾರ್ಥಿಗಳು ಭವಿಷ್ಯ ಭಾರತದ ಹಸಿರುಗೊಳಿಸುವ ಜ್ಯೋತಿಧಾರಕರಾಗಿದ್ದಾರೆ. ಜಗತ್ತಿಗೆ ನಿಮ್ಮ ಶಕ್ತಿ, ನಿಮ್ಮ ಆಲೋಚನೆಗಳು ಮತ್ತು ನಿಮ್ಮ ಸಹಾನುಭೂತಿ ಅವಶ್ಯವಾಗಿವೆ. ನಿಮ್ಮ ಜ್ಞಾನವನ್ನು ವೈಯಕ್ತಿಕ ಯಶಸ್ಸಿಗೆ ಮಾತ್ರವಲ್ಲದೇ ರೈತರನ್ನು ಉನ್ನತೀಕರಿಸಲು, ಆಹಾರ ವ್ಯವಸ್ಥೆಗಳನ್ನು ಬಲಪಡಿಸಲು ಮತ್ತು ಪರಿಸರವನ್ನು ಪೋಷಿಸಲು ಮತ್ತು ಕಾಪಾಡಲು ಬಳಸಿಕೊಳ್ಳಬೇಕು ಎಂದರು.

ತೋಟಗಾರಿಕೆ ವಿವಿಯ ಕುಲಪತಿ ಡಾ.ವಿಷ್ಣುವರ್ಧನ ಸ್ವಾಗತಿಸಿ, ಪ್ರಗತಿ ವರದಿಯನ್ನು ಹೇಳಿದರು. ಕುಲಸಚಿವ ಮಹಾದೇವ ಮುರಗಿ, ಶಿಕ್ಷಣ ನಿರ್ದೇಶಕ ಡಾ.ಎನ್.ಕೆ.ಹೆಗಡೆ, ಆಡಳಿತ ಮಂಡಳಿಯ ನಿರ್ದೇಶಕರಾದ ಶಾಸಕ ಭೀಮಸೇನ ಚಿಮ್ಮನಕಟ್ಟಿ, ವಿಧಾನ ಪರಿಷತ್ ಶಾಸಕ ಹನಮಂತ ನಿರಾಣಿ, ಮಾಜಿ ಎಮ್.ಎಲ್.ಸಿ ಅರುಣ ಶಹಾಪೂರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಬೌದ್ಧಿಕ ,ಅನುಭಾವಿಕ ನೆಲೆ ಕಲ್ಯಾಣ : ಮಹಾಂತೇಶ ನವಲಕಲ್




ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:– ಜೂ 12 ಕನ್ನಡ ಸಾಹಿತ್ಯದಲ್ಲಿ ಅದರಲ್ಲೂ ವಚನಕಾರರಲ್ಲಿ ಕಲ್ಯಾಣ ಸಾಂಸ್ಕೃತಿಕ ವ್ಯಾಖ್ಯಾನ ಪಡೆದ ಊರು. ಅಕ್ಕ, ಅಲ್ಲಮ, ಬಸವಣ್ಣ ಸೇರಿ ಹಲವು ವಚನಕಾರರು ಕಲ್ಯಾಣದ ಪರಿಕಲ್ಪನೆ ಬೌದ್ಧಿಕ, ವೈಚಾರಿಕ, ಅನುಭಾವಿಕ ನೆಲೆಗಳಲ್ಲಿ ಕಟ್ಟಿಕೊಟ್ಟಿದ್ದಾರೆ ಎಂದು ಹಿರಿಯ ಕಥೆಗಾರ ಮಹಾಂತೇಶ ನವಲಕಲ್ ಹೇಳಿದರು.

ಇಲ್ಲಿನ ಶ್ರೀ ಬಸವೇಶ್ವರ ದೇವಸ್ಥಾನ ಪಂಚ ಕಮಿಟಿಯ ಶ್ರೀ ಬಸವೇಶ್ವರ ಪದವಿ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ಲೇಖಕರೊಂದಿಗೆ ಸಂವಾದ ಸಮಾರಂಭದವು ಸಸಿಗೆ ನೀರರೆದು ಉದ್ಘಾಟಿಸಿ ಮಾತನಾಡಿ ಕಲ್ಯಾಣದ ಮಹಾಮನೆ, ಅನುಭವ ಮಂಟಪ, ತ್ರಿಪುರಾಂತ ಈ ಎಲ್ಲ ಶಬ್ದಗಳು ಏಕ ಕಾಲದಲ್ಲಿ ಬೆರಗು ಹಾಗೂ ಸಂವೇದನೆಗಳು ಹುಟ್ಟಿಸುತ್ತವೆ ಎಂದರು.

ಬಹುದೊಡ್ಡಮಹಾರಾಜರಿದ್ದವರು ಇಲ್ಲಿ ಕಾಯಕ ಜೀವಿಗಳಾಗಿ, ಶಿವಶರಣರಾಗಿ ಕಲ್ಯಾಣದ ಬೀದಿಯಲ್ಲಿ ಸ್ವಾತಂತ್ರ್ಯದ ತಾತ್ವಿಕತೆ ಕಟ್ಟಿ ಕೊಟ್ಟಿದ್ದಾರೆ. ಲಿಂಗ ತಾರತಮ್ಯ ಹಾಗೂ ಜಾತಿಯತೆ ವಿರುದ್ಧ ದೊಡ್ಡ ದನಿಯಾದ ಬಸವಣ್ಣನವರು ಹನ್ನೆರಡನೇ ಶತಮಾನದಲ್ಲಿಯೇ ದುಡಿಯುವ ವರ್ಗದ ಸಮಾಜವನ್ನು ನಿರ್ಮಿಸಿದ್ದರು. ಕಾರ್ಲ್ ಮಾರ್ಕ್ಸ್ ನ ಪರಿಕಲ್ಪನೆ ತನ್ನ ಕಾಲದಲ್ಲಿಯೇ ಬಸವಣ್ಣ ಅನುಷ್ಠಾನಕ್ಕೆ ತಂದಿದ್ದರು ಎಂದರು. ಬೀದರ ವಿಶ್ವವಿದ್ಯಾಲಯದ ಬಿಎಸ್ಸಿ ನಾಲ್ಕನೇ ಸೆಮಿಸ್ಟರ್ ಪಠ್ಯಕ್ಕಿರುವ ಮಹಾಂತೇಶ ನವಲಕಲ್ ಅವರ 'ಬುದ್ಧ ಗಂಟೆಯ ಸದ್ದು' ಕತೆಯ ಕುರಿತು ವಿದ್ಯಾರ್ಥಿಗಳು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಉದಾರವಾದಿ ಮಾರುಕಟ್ಟೆ ಅನುಸರಿಸುವ ನೀತಿಯಿಂದ ಎಲ್ಲಕ್ಕಿಂತ ಹೆಚ್ಚಾಗಿ ಅಪಾಯ ಎದುರಾದದ್ದು ರೈತರಿಗೆ. ರೈತನ ಬದುಕು ಹಸನು ಮಾಡಲು ಬೇಕಾದ ಉಳುಮೆ ಬೀಜ, ಕೀಟನಾಶಕ, ರಸಗೊಬ್ಬರ ಮಾರುಕಟ್ಟೆ ತಂತ್ರಗಾರಿಕೆಯಿಂದ ಕೃಷಿಕನನ್ನು ಸಾವಿನ ಮನೆಗೆ ದೂಡುತ್ತಿವೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜು ಪ್ರಾಚಾರ್ಯರಾದ ಡಾ. ಭೀಮಾಶಂಕರ ಬಿರಾದಾರ ಮಾತನಾಡಿ ಭಾರತೀಯ ಸಾಮಾಜಿಕ ಹಾಗೂ ಸಾಂಸ್ಕೃತಿಕ ಸಂದರ್ಭದಲ್ಲಿ ನೆಲ, ನೀರು, ಕಾಡಿಗೆ ವಿಶಿಷ್ಟ ಸ್ಥಾನವಿದೆ. ಅವು ಎಲ್ಲರ ಸಹಜ ಜೀವನಕ್ಕೆ ಎಡೆ ಮಾಡಿಕೊಟ್ಟಿವೆ. ಭೂಮಿ ಅನ್ನ ಕೊಡುವ ಜೊತೆಗೆ ಎಲ್ಲ ಜೀವಿಗಳು ಜೀವಿಸುವ ತಾಣವಾಗಿದೆ. ಆಧುನಿಕ ಕಾಲಘಟ್ಟದಲ್ಲಿ, ಜಾಗತೀಕರಣದ ಸಂದರ್ಭದಲ್ಲಿ ನೆಲವನ್ನು ಸರಕಾಗಿ ಪರಿಗಣಿಸಲಾಗಿದೆ. ಉಳುಮೆ ಮಾಡುವವರು ನಶಿಸಿ ಹೋದರೆ ಸಹಜವಾಗಿ ಬಂಡವಾಳಶಾಹಿಗಳ ವಶಕ್ಕೆ ಭೂಮಿ ಹೋಗುವಂತೆ ಪ್ರಭುತ್ವಗಳು ತಂತ್ರಗಾರಿಕೆ ಹೆಣೆದಿರುತ್ತವೆ ಎಂದರು.

ನವಲಕಲ್ ಅವರ 'ಬುದ್ಧ ಗಂಟೆಯ ಸದ್ದು' ಕತೆ ಲಾಭದ ಲೆಕ್ಕಾಚಾರ ಇರುವ ಮಾರುಕಟ್ಟೆಗೆ ಮಾನವಿಯತೆಯ ಗುಣ ಇರುವುದಿಲ್ಲ ಎಂಬ ಅಂಶ ಬಿಂಬಿಸಿದೆ. ರೈತರ ಬದುಕು ಮಾರುಕಟ್ಟೆಯಲ್ಲಿ ಅವಮೌಲೀಕರಣಗೊಂಡ ಬಗೆ, ಮನುಷ್ಯನ ಮೂಲ ಪ್ರವೃತ್ತಿಯಾದ ಕಾಮವನ್ನು ಮಾರುಕಟ್ಟೆ ಬಳಸಿಕೊಳ್ಳುವ ವಿಧಾನ ಈ ಕತೆ ಧ್ವನಿಸುತ್ತದೆ ಎಂದರು. ಈ ಸಂದರ್ಭದಲ್ಲಿ

ಐಕ್ಯುಎಸಿ ಸಂಯೋಜಕ ಪವನ ಪಾಟೀಲ, ಗಂಗಾಧರ ಸಾಲಿಮಠ, ರೋಷನ್ ಬಿ ಯದಲಾಪುರ, ನೀಲಮ್ಮ ಮೇತ್ರೆ, ನಾಗರಾಜ ನಾಸೆ, ಕೃಷ್ಣ ಗೌಳಿ, ಸಾಯಿರಾಜ ಪಾಟೀಲ, ಎಂಡಿ ಜಬಿ, ಇಮ್ತಿಯಾಜ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಸ್ನೇಹಾ ರಾಜಪೂತ್ ಸ್ವಾಗತಿಸಿದರು. ಪೃಥ್ವಿ ಪಾಟೀಲ ನಿರೂಪಿಸಿದರು. ಮಹೇಶ್ವರಿ ಬಿರಾದಾರ ವಂದಿಸಿದರು.

# ನ್ಯೂಸ್ 81 ಕನ್ನಡ ವಾಹಿನಿಯ ಎರಡನೇ ವರ್ಷದ ವಾರ್ಷಿಕೋತ್ಸವ ಅದ್ದೂರಿ ಕಾರ್ಯಕ್ರಮ.!

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ನ್ಯೂಸ್ 81 ಕನ್ನಡ ನ್ಯೂಸ್ ವಾಹಿನಿಯ ಅದ್ದೂರಿ ಕಾರ್ಯಕ್ರಮವು ಇತ್ತೀಚೆಗೆ ಬೆಂಗಳೂರಿನಲ್ಲಿ ಮಲ್ಲಸಂದ್ರದ ಅಂಬೇಡ್ಕರ್ ಭವನದಲ್ಲಿ ವಿಜೃಂಭಣೆಯಿಂದ ನೆರವೇರಿತು. ಈ ಕಾರ್ಯಕ್ರಮವನ್ನು ದಾಸರಹಳ್ಳಿ ಕ್ಷೇತ್ರದ ಮಾನ್ಯ ಶಾಸಕ ಶ್ರೀ ಎಸ್. ಮುನಿರಾಜು ಅವರು ಉದ್ಘಾಟಿಸಿದರು ಮತ್ತು ಮಹತ್ವದ ಭಾಷಣ ನೀಡಿದರು.




ಕಾರ್ಯಕ್ರಮದಲ್ಲಿ ಮಠದ ಶ್ರೀ ಸ್ವಾಮಿಗಳು ಆಶೀರ್ವಚನ ನೀಡಿ, ನ್ಯೂಸ್ 81 ವಾಹಿನಿಯ ಪ್ರಗತಿಗೆ ಶುಭಹಾರೈಸಿದರು. ಚಿತ್ರರಂಗದ ಜನಪ್ರಿಯ ಕಲಾವಿದರಾದ " ನಟ ನಿರ್ಮಾಪಕ ಸ್ಟೈಲ್ ಶಿವು, ನ್ಯೂಸ್ 81 ವಾಹಿನಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರಶಾಂತ್ ಗೌಡರು, "ವೀರೇಶ್ ಟಕ್ಕಳಕಿ ಕೆಂಭಾವಿ" ನೇತ್ರ ಎಚ್‌ಂ ಅವರಿಗೆ ಕಾರ್ಯಕ್ರಮದಲ್ಲಿ ಭಾಗವಹಿಸಿದ ಅತಿಥಿಗಳು ಶುಭ ಕೋರಿದರು.

ಸಮಾರಂಭವು ವಿವಿಧ ಕ್ಷೇತ್ರಗಳ ಗಣ್ಯರು ಹಾಗೂ ಭಾರೀ ಸಂ–ಖ್ಯೆಯ ಮಧ್ಯೆ ಯಶಸ್ವಿಯಾಗಿ ಆಯೋಜನೆಯಾಯಿತು. ನ್ಯೂಸ್ 81 ಕನ್ನಡ ವಾಹಿನಿಯ ಈ ಪ್ರಯತ್ನವು ಸುದ್ದಿಮಾಧ್ಯಮ ಕ್ಷೇತ್ರದಲ್ಲಿ ಹೊಸ ಯುಗದ ಪ್ರಾರಂಭವೆನ್ನಿಸಬಹುದು. ಆಯ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ನ್ಯೂಸ್ 81 ಕನ್ನಡ ವಾಹಿನಿಯ ಎರಡನೇ ವಾರ್ಷಿಕೋತ್ಸವದ ಸಂಭ್ರಮದಲ್ಲಿ ಸನ್ಮಾನಿಸಲಾಯಿತು.

# ಒಣಮೆಣಸಿನಕಾಯಿ ಖರೀದಿ ಕೇಂದ್ರ ಸ್ಥಾಪನೆ: ಜಿಲ್ಲಾಧಿಕಾರಿ ನಿತೀಶ್ ಕೆ.

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 12–ಇಲ್ಲಿನ ಕೃಷಿ ಮಾರಾಟ ಇಲಾಖೆ 2024–25ನೇ ಸಾಲಿನ ಮಾರುಕಟ್ಟೆ ಮಧ್ಯೆ ಪ್ರವೇಶ ಯೋಜನೆಯ ಬೆಲೆ ವ್ಯತ್ಯಾಸ ಪಾವತಿ ಯೋಜನೆಯಡಿಯಲ್ಲಿ ಒಣಮೆಣಸಿನಕಾಯಿ ಖರೀದಿಸಲು ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ರೈತರ ನೋಂದಣಿ ಕಾಲಾವಧಿಯನ್ನು 15 ದಿನಗಳವರೆಗೆ ನಿಗದಿಪಡಿಲಾಗಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ತಿಳಿಸಿದ್ದಾರೆ.

ಒಣಮೆಣಸಿನಕಾಯಿ ಉತ್ಪನ್ನವನ್ನು ಪ್ರತಿ ಕ್ವಿಂಟಲಿಗೆ 10,589.20 ರೂ.ಗಳಂತೆ ಖರೀದಿಸಲು ಆದೇಶವಿದ್ದು, ಈ ಯೋಜನೆಯ ಅನುಷ್ಠಾನ ಅವಧಿಯು ಯುನಿಫೈಡ್ ಮಾರ್ಕೇಟ್ ಪ್ಲಾಟಪಾರ್ಮ್ (ಯು–ಎಂಪಿ0 (Unified Market Platform (UMP) ತಂತ್ರಾಂಶದಲ್ಲಿ ಒಣಮೆಣಸಿನಕಾಯಿಯ ಮೊದಲ ವಹಿವಾಟು ಆಗುವ ದಿನಾಂಕದಿಂದ ರಾಜ್ಯಾದ್ಯಂತ ಒಂದು ತಿಂಗಳ ಅವಧಿಯವರೆಗೆ ಮಾತ್ರ ಈ ಯೋಜನೆ ಚಾಲ್ತಿಯಲ್ಲಿರುತ್ತದೆ. ಈ ಯೋಜನೆಯಡಿ ಪ್ರತಿ ಎಕರೆಗೆ 15 ಕ್ವಿಂಟಾಲ್ ಇಳುವರಿಯಂತೆ ಪ್ರತಿ ರೈತ–ರಿಂದ ಗರಿಷ್ಠ 30 ಕ್ವಿಂಟಾಲ್ ಗೆ ಮಿತಿಗೊಳಿಸಿ ವ್ಯತ್ಯಾಸದ ಮೊತ್ತ ನೀಡಲಾಗುವುದು.

ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಿಗೆ ಸದರಿ ಯೋಜನೆಯಡಿಯಲ್ಲಿ ಮಾರಾಟ ಮಾಡಲು ಬರುವ ರೈತರ ನೋಂದಣಿ ಕಾರ್ಯವನ್ನು ಎನ್‌ಇಎಂಎಲ್ (ಓಜಒಐ) ತಂತ್ರಾಂಶದಲ್ಲಿ ಮಾಡಿ ನಂತರ ಒಣಮೆಣಸಿನಕಾಯಿ ಉತ್ಪನ್ನದ ಗೇಟ್ ಎಂಟ್ರಿಯನ್ನು ಯುಎಂಪಿ (ಗಒಕ) ತಂತ್ರಾಂಶದಡಿಯಲ್ಲಿ ದಾಖಲಿಸುವ ಕಾರ್ಯವನ್ನು ಆಯಾ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಕಾರ್ಯದರ್ಶಿಯವರು ಕಡ್ಡಾಯವಾಗಿ ನಿರ್ವಹಿಸುವುದು.

ಇ–ಆಡಳಿತ ಇಲಾಖೆಯ ಫ್ರೂಟ್ಸ್ (FRUITS) ತಂತ್ರಾಂಶದಲ್ಲಿ ರೈತರು ನೀಡಿರುವ ವಿವರಗಳನ್ನು ಭೂಮಿ, ಯುಐಡಿಎಐ (ಗಐಆಂಐ) ಮತ್ತು ಬೆಳೆ ಸಮೀಕ್ಷೆ ದತ್ತಾಂಶದೊಂದಿಗೆ ಹೊಂದಾಣಿಕೆ ಮಾಡಿ, ಅರ್ಹ ಫಲಾನುಭವಿಗಳ ಪಟ್ಟಿಯನ್ನು ಅಂತಿಮಗೊಳಿಸಿ (ಯುಎಂಪಿ) UMP ತಂತ್ರಾಂಶದ ಇ–ಟೆಂಡರ್ ಮೂಲಕ ಮಾರಾಟ ಪ್ರಕ್ರಿಯೆ ಕೈಗೊಳ್ಳಲಾಗುವುದು.

ಖರೀದಿ ಕೇಂದ್ರಗಳು: ರಾಯಚೂರಿನ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ಸಿಂಧನೂರು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ಲಿಂಗಸುಗೂರು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ಮಾನವಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ದೇವದುರ್ಗ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ಮಸ್ಕಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯಲ್ಲಿ ರೈತ ಬಾಂಧವರು ಆಧಾರ್ ಕಾರ್ಡ್, ಪಹಣಿಯೊಂದಿಗೆ ತಮ್ಮ ಹತ್ತಿರದ ಖರೀದಿ ಕೇಂದ್ರಗಳಲ್ಲಿ ನೋಂದಾಯಿಸಿ ಒಣಮೆಣಸಿನಕಾಯಿ ಮಾರಾಟ ಮಾಡಿ ಸರ್ಕಾರದ ಯೋಜನೆಯ ಸದುಪಯೋಗ ಪಡೆದುಕೊಳ್ಳುವಂತೆ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆರ್ಥಿಕವಾಗಿ ಬಡತನವಿರುವ ಮಕ್ಕಳು ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ:ನ್ಯಾಯಧೀಶ ಶ್ರೀನಿವಾಸ ನವಲೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜೂ.12–ಬಡವರು ಆರ್ಥಿಕ ಸಂಕಷ್ಟದಿಂದ ತಮ್ಮ ಮಕ್ಕಳ ಶಿಕ್ಷಣವನ್ನು ಅರ್ಧಕ್ಕೆ ಮೊಟಕುಗೊಳಿಸಿ ಸಣ್ಣವಯಸ್ಸಿನ ಮಕ್ಕಳನ್ನು ಬಾಲ ಕಾರ್ಮಿಕರನ್ನು ಮಾಡುತ್ತಿರುವುದು ತುಂಬಾ ವಿಷಾದನಿಯ ಸಂಗತಿಯಾಗಿದ್ದು ಅಧಿಕಾರಿಗಳು ಕಟ್ಟುನಿಟ್ಟಿನ ಕ್ರಮಕೈಗೊಳ್ಳಬೇಕು ಎಂದು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಿರಿಯ ಸಿವಿಲ್ ನ್ಯಾಯಧೀಶರಾದ ಶ್ರೀನಿವಾಸ ನವಲೆ ಅವರು ಹೇಳಿದರು.

ಗುರುವಾರದಂದು ಜಿಲ್ಲಾಡಳಿತ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿ, ಮಕ್ಕಳ ಸಹಾಯವಾಣಿ–1098/112 ವಿವಿಧ ಇಲಾಖೆಗಳು ಮತ್ತು ಸ್ವಯಂ ಸೇವಾ ಸಂಸ್ಥೆಗಳು ಇವರುಗಳ ಸಂಯುಕ್ತಾಶ್ರಯದಲ್ಲಿ ಅಪ್ಪ ಪಬ್ಲಿಕ ಶಾಲೆಯ ಸಭಾ ಮಂಟಪದಲ್ಲಿ ವಿಶ್ವ ಬಾಲ ಕಾರ್ಮಿಕ ವಿರೋಧಿ ದಿನದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ಬಹಳಷ್ಟು ಆರ್ಥಿಕವಾಗಿ ಹಿಂದುಳಿದ ಜನರಿದ್ದು, ಬಡತನವಿರುವ ಪೋಷಕರು ತಮ್ಮ ಮಕ್ಕಳು ಶಿಕ್ಷಣವನ್ನು ಕಲಿಯುವಂತಹ ವಯಸ್ಸಿನಲ್ಲಿ ದುಡಿಯಲು ಹಚ್ಚುತ್ತಿರುವುದು ಅತ್ಯಂತ ವಿಷಾಧನಿಯ ಸಂಗತಿ ಎಂದರು, ಇಂತಹ ಪದ್ಧತಿಯನ್ನು ನಿರ್ಮೂಲನೆ ಮಾಡಲು ಅಧಿಕಾರಿಗಳು ಶ್ರಮಿಸಬೇಕು ಎಂದರು.

ಬಾಲಕಾರ್ಮಿಕರ ಕುರಿತು ಅರಿವನ್ನು ಮೂಡಿಸುವ ಮುಖಾಂತರ ಜಿಲ್ಲೆಯನ್ನು ಸಂಪೂರ್ಣವಾಗಿ ಬಾಲ ಕಾರ್ಮಿಕ ಮುಕ್ತವಾಗಿ ಮಾಡಬೇಕು. ಈ ಹಿನ್ನಲೆಯಲ್ಲಿ ಸರ್ಕಾರ ಗುರುತಿಸಿರುವ ಹಾಗೂ ವಿಶೇಷ ಅಧಿಕಾರ ನೀಡಿರುವ 11 ಇಲಾಖೆಯ ಅಧಿಕಾರಿಗಳು ಪರಸ್ಪರ ಸಹಕಾರದಿಂದ ಪ್ರಾಮಾಣಿಕವಾಗಿ ಪ್ರಯತ್ನಿಸಿ ಜಿಲ್ಲೆಯನ್ನು ಸಂಪೂರ್ಣವಾಗಿ ಬಾಲಕಾರ್ಮಿಕ ಮುಕ್ತ ಮಾಡುವಲ್ಲಿ ಪ್ರತಿಯೊಬ್ಬ ಅಧಿಕಾರಿಗಳು ಶ್ರಮವಹಿಸಿ ಕಾರ್ಯ ನಿರ್ವಹಿಸಬೇಕೆಂದು ಹೇಳಿದರು.

ಸರ್ಕಾರ ಬಾಲಕಾರ್ಮಿಕತೆಯನ್ನು ಸಂಪೂರ್ಣವಾಗಿ ಮುಕ್ತವಾಗಿಸಲು 11 ಇಲಾಖೆಯ ಅಧಿಕಾರಿಗಳನ್ನು ಬಾಲಕಾರ್ಮಿಕರ ರಕ್ಷಣ ಘಟಕದ ವಿಶೇಷ ಅಧಿಕಾರಿಗಳನ್ನಾಗಿ ನೇಮಿಸಿದೆ. ಎಂದು ಹೇಳಿದರು.

ಸಾರ್ವಜನಿಕರು ಬಾಲಕಾರ್ಮಿಕತೆ ಕುರಿತು ಮಾಹಿತಿಯನ್ನು ನೀಡಿದ್ದಲ್ಲಿ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಬಾಲ ಕಾರ್ಮಿಕರನ್ನು ರಕ್ಷಿಸಿ ಮಾಲೀಕರ ವಿರುದ್ದ ಪ್ರಕರಣಗಳನ್ನು ದಾಖಲಿಸಿ ಕಟ್ಟು ನಿಟ್ಟಿನ ಕಾನೂನಿನ ಕ್ರಮ ಜರುಗಿಸಬೇಕೆಂದು ಅಧಿಕಾರಿಗಳಿಗೆ ತಿಳಿಸಿದ್ದರು.

ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅಧ್ಯಕ್ಷತೆ ವಹಿಸಿ ಮಾತನಾಡಿ, ಜಿಲ್ಲೆಯಲ್ಲಿ 1770 ದಾಳಿಗಳನ್ನು ಮಾಡಿ 41 ಎಫ್‌ಐಆರ್‌ಗಳನ್ನು ದಾಖಲಿಸಿ 47 ಬಾಲ ಕಾರ್ಮಿಕರನ್ನು ರಕ್ಷಿಸಿ ಅವರಿಗೆ ಪುನರ್ವಸತಿ ಕಲ್ಪಿಸಿ ಅವರ ಶಿಕ್ಷಣವನ್ನು ಮುಂದುವರೆಸಲು ಎಲ್ಲಾ ಅಧಿಕಾರಿಗಳ ಸಹಕಾರದೊಂದಿಗೆ ಅವಿರತವಾಗಿ ಶ್ರಮಿಸಿದ್ದೇವೆ ಎಂದು ಅವರು ಹೇಳಿದರು.

ಸುಮಾರು 15 ವರ್ಷಗಳ ಹಿಂದೆ ಶಿಕ್ಷಣವನ್ನು ಪಡೆಯಲು ಇಷ್ಟೊಂದು ಸೌಲಭ್ಯಗಳು ದೊರೆಯುತ್ತಿರಲ್ಲಿಲ್ಲ, ಪ್ರಸ್ತುತ್ತ ದಿನಗಳಲ್ಲಿ ಸರ್ಕಾರವು ಹಲವಾರು ಸವಲತ್ತುಗಳನ್ನು ನೀಡಿದರು ಬಹಳಷ್ಟು ಜನರು ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ ಇದಕ್ಕೆ ಕುಟುಂಬದ ಪೋಷಕರ ಅನಕ್ಷರತೆ ಮತ್ತು ಬಡತನ ಮುಖ್ಯ ಕಾರಣವಾಗಿದೆ ಎಂದು ತಿಳಿಸಿದರು.

ಪ್ರಜ್ಞಾವಂತ ನಾಗರೀಕರು ತಮ್ಮ ಜವಬ್ದಾರಿಯನ್ನು ಅರಿತು–ಕೊಂಡು ಬಾಲಕಾರ್ಮಿಕತೆಯನ್ನು ಸಂಪೂರ್ಣವಾಗಿ ಮುಕ್ತವಾಗಿಸಲು ಅಧಿಕಾರಿಗಳಿಗೆ ಸಹಾಯ ಮಾಡಬೇಕು ಹಾಗೂ ದೂರುಗಳು ಬಂದ ತಕ್ಷಣ ಅಧಿಕಾರಿಗಳು ಸ್ಥಳಗಳಿಗೆ ಭೇಟಿ ನೀಡಿ ಪ್ರಕರಣಗಳನ್ನು ದಾಖಲಿಸಿಕೊಂಡು ಬಾಲ ಕಾರ್ಮಿಕರನ್ನು ರಕ್ಷಿಸಿ ಅವರಿಗೆ ಪುನರ್ವಸತಿ ಕಲ್ಪಿಸಿ ಅವರ ಶಿಕ್ಷಣದಿಂದ ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಲು ಪ್ರತಿಯೊಬ್ಬ ಅಧಿಕಾರಿಗಳು ಜವಬ್ದಾರಿಯಿಂದ ಕಾರ್ಯನಿರ್ವಹಿಸಬೇಕೆಂದು ಹೇಳಿದರು.

ಮುಖ್ಯ ಅತಿಥಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಸೂರ್ಯಕಾಂತ ಮದಾನೆ ಮಾತನಾಡಿ ಪೋಷಕರು ತಮ್ಮ ಮಕ್ಕಳ ಉಜ್ವಲ ಭವಿಷ್ಯಕ್ಕಾಗಿ ಶಿಕ್ಷಣವನ್ನು ಕೊಡಿಸಬೇಕು, ಕಲಬುರಗಿ ಜಿಲ್ಲೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲೆ ಪದವಿ ಪೂರ್ವ ಸೇರಿಸಿಕೊಂಡು 5 ಲಕ್ಷ 28 ಸಾವಿರ ವಿದ್ಯಾರ್ಥಿಗಳು ಪ್ರವೇಶ ಪಡೆದಿದ್ದು, 3228 ಶಾಲೆಗಳಿಗೆ 24000 ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದಾರೆ ಎಂದರು.

ಮೇ. 29 ರಂದು ಶಾಲಾ ಕಾಲೇಜುಗಳು ಆರಂಭವಾದರೂ ಕೇವಲ 45 ರಷ್ಟು ಪ್ರತಿಶತ ಹಾಜರಾಗುತ್ತಿದ್ದಾರೆ ಇನ್ನೂ ಶೇಕಡ. 55 ರಷ್ಟು ಪ್ರತಿಶತ ಶಾಲೆಯಿಂದ ಹೊರಗುಳಿದಿದ್ದಾರೆ ಆ ಕಾರಣದಿಂದ ಶಿಕ್ಷಕರು ಶಾಲೆಗಳಲ್ಲಿ ಪಾಠ ಭೋಧನೆ ಜೊತೆಗೆ ಮರಳಿ ಶಾಲೆಗೆ ಕರೆತರುವ ಪ್ರಯತ್ನ ಮಾಡಬೇಕೆಂದು ಅವರು ತಿಳಿಸಿದರು.

ಸಂಪನ್ಮೂಲ ವ್ಯಕ್ತಿಗಳಾದ ಕಾನೂನು ಪರಿವೀಕ್ಷಣಾಧಿಕಾರಿ ಭರತೇಶ ಶೀಲವಂತ ಮಾತನಾಡಿ ಬಾಲಕಾರ್ಮಿಕರನ್ನು ಸಮಾಜದ ಮುಖ್ಯ ವಾಹಿನಿಗೆ ತರುವ ಉದ್ದೇಶದಿಂದ 1986 ರಲ್ಲಿ ಬಾಲಕಾರ್ಮಿಕ ನಿಷೇಧ ಕಾಯ್ದೆ ಜಾರಿಗೆ ತಂದು 14 ವರ್ಷದ ಒಳಗಿನ ಮಕ್ಕಳು ಅಪಾಯಕಾರಿ ಎನಿಸುವಂತಹ ಸ್ಥಳಗಳಲ್ಲಿ ಕಾರ್ಯನಿರ್ವಾಹಿಸುವುದು ಶಿಕ್ಷಾರ್ಹ ಅಪರಾಧವಾಗುತ್ತದೆ ಎಂದರು.

ಇದೇ ಸಂದರ್ಭದಲ್ಲಿ ಬಾಲಕಾರ್ಮಿಕ ವಿರೋದ್ಧ ದಿನಾಚರಣೆ ಅಂಗವಾಗಿ ಪ್ರಮಾಣ ವಚನವನ್ನು ಬೋಧಿಸಿದರು.

ಸೇಡಂ ತಾಲೂಕಿನ ಬಾಲಕ ಕಳೆದ ಐದು ವರ್ಷ ಹಿಂದೆ ಬಾಲಕಾರ್ಮಿಕನಾಗಿ ಕೆಲಸ ನಿರ್ವಹಿಸುತ್ತಿದ್ದು, ಬಾಲಕನನ್ನು ರಕ್ಷಸಿ ಮುಖ್ಯವಾಹಿನಿಗೆ ದಾಖಲಿಸಿ ಮಾಲಿಕನಿಂದ ರೂ. 20000 ದಂಡ ವಿಧಿಸಿ ಪುನರ್ ವಸತಿ ನಿಧಿ ಜಮೆ ಮಾಡಿ ಜೊತೆಗೆ ರೂ.15715 ಸರ್ಕಾರ ವತಿಯಿಂದ ಜಮೆ ಮಾಡಿ ಒಟ್ಟು 35715 ರೂ.ಗಳನ್ನು ಬಾಲಕನ ಶಿಕ್ಷಣಕ್ಕಾಗಿ ಚೆಕ್ ವಿತರಿಸಲಾಯಿತು.

ಇದೇ ಸಂದರ್ಭದಲ್ಲಿ ಬಾಲಕಾರ್ಮಿಕರ ರಕ್ಷಣೆಯಲ್ಲಿ ಸಹಕರಿಸಿದ ಪೋಲಿಸ್ ಇಲಾಖೆ ಶ್ರೀಮತಿ ನರ್ಮದಾ ಡಾನ ಬಾಸ್ಕೋ ಶಾಲೆಯ ಪ್ರತಿನಿಧಿ ಫಾದರ್ ಕೋರಿಕೋಸ್, ಉತ್ತರ ಕ್ಷೇತ್ರಶಿಕ್ಷಣಾಧಿಕಾರಿ ಸೋಮಶೇಖರ ಹಂಚಿನಾಳ ಅವರನ್ನು ಸನಮಾನಿಸಲಾಯಿತು ಹಾಗೂ ಡಾನ್ ಬಾಸ್ಕೋ ಶಾಲೆಯ ವಿದ್ಯಾರ್ಥಿಗಳಿಂದ ಕಿರು ನಾಟಕ ಪ್ರದರ್ಶನ ಏರ್ಪಡಿಸಲಾಗಿತ್ತು.

ವೇದಿಕೆ ಮೇಲೆ ಜಿಲ್ಲಾ ಮಕ್ಕಳ ಸಮೀತಿಯ ಅಧ್ಯಕ್ಷರಾದ ವಿಶ್ವರಾಧ್ಯ ಇಜೇರಿ, ಉಪ ಕಾರ್ಮಿಕ ಆಯುಕ್ತರಾದ ಡಾ॥ ವೆಂಕಟೇಶ ಎ.ಶಿಂದಿಹಟ್ಟಿ, ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಜಂಟನಿರ್ದೇಶಕಿ ಪ್ರೀತಿ ಚಂದ್ರಶೇಖರ ದೊಡ್ಡಮನಿ, ಆರ್.ಸಿ.ಹೆಚ್.ಅಧಿಕಾರಿ ಡಾ, ಸಿದ್ದು ಪಾಟೀಲ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಾದ ಮಂಜುಳಾ ವಿ. ಪಾಟೀಲ್, ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸಂಘದ ಸದಸ್ಯ ಕಾರ್ಯದರ್ಶಿ ಶಿವಕುಮಾರ ರೇಷ್ಮೆ, ಸಂಸ್ಕಾರ ಪ್ರತಿಷ್ಠಾನ ಸಂಸ್ಥೆಯ ನಿರ್ದೇಶಕರು ವಿಠ್ಠಲ್ ಚಿಕಣಿ, ಉಪಸ್ಥತರಿದ್ದರು ಪೋಲಿಸ್ ಇಲಾಖೆ ಅಧಿಕಾರಿಗಳು, ಹಾಗೂ ಶಾಲಾ ಕಾಲೇಜಿನ ಮಕ್ಕಳ ಭಾಗವಹಿಸಿದ್ದರು.

# ಹಾಡುಹಗಲೇ ರಸ್ತೆ ಅತಿಕ್ರಮಣಕ್ಕೆ ಯತ್ನ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಜೂ.12:ನಗರದ ಹೃದಯಭಾಗದಲ್ಲಿರುವ ಶರಣ ನಗರ ಬಡಾವಣೆಯಲ್ಲಿ ಹಾಡು ಹಗಲೇ ಪೋಲಿ ರೌಡಿಗಳು ರಸ್ತೆ ಅತಿಕ್ರಮಣಕ್ಕೆ ಯತ್ನ ನಡೆಸಿದ್ದಾರೆ. ಬಡಾವಣೆಯ ಎರಡನೆ ಕ್ರಾಸ್ ಸಿಸಿ ರಸ್ತೆ ಮೇಲೆ ತಮ್ಮ ಪ್ಲಾಟ್ ಇದೆ ಎಂದು ನಕಲಿ ದಾಖಲೆಗಳನ್ನು ಸೃಷ್ಟಿಸಿ ಕಟ್ಟಡ ನಿರ್ಮಾಣಕ್ಕೆ ಯತ್ನಿಸುತ್ತಿದ್ದಾರೆ. ರಸ್ತೆ ಜಾಗದಲ್ಲಿ ಅತಿಕ್ರಮಣ ಬಗ್ಗೆ ಬಡಾವಣೆಯ ನಿವಾಸಿಗಳು ಪ್ರಶ್ನಿಸಿದಾಗ ಜಗಳಕ್ಕೆ ಮುಂದಾಗಿ ಅಶಾಂತಿಯ ವಾತಾವರಣ ಸೃಷ್ಟಿಸುತ್ತಿದ್ದಾರೆ.

ಈ ಹಿಂದೆ ಕೂಡ ಭೂಗಳ್ಳರಿಂದ ಇದೇ ರೀತಿ ರಸ್ತೆ ಅತಿಕ್ರಮಣಕ್ಕೆ ಯತ್ನಿಸಿದ್ದರು ಆಗಿನ ಜಿಲ್ಲಾಧಿಕಾರಿ ಯಾಗಿದ್ದ ರಾಮಚಂದ್ರನ್ ಆರ್ ಅವರು ಬಡಾವಣೆಯ ನಿವಾಸಿಗಳ ಮನವಿಗೆ ಸ್ಪಂದಿಸಿ ಖುದ್ದಾಗಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ನಗರ ಸಭೆಯ ಆಯುಕ್ತರಿಗೆ ಅರ್ಧಕ್ಕೆ ನಿಂತ ಸಿಸಿ ರಸ್ತೆ ಕಾಮಗಾರಿ ಒಂದು ವಾರದ ಒಳಗಾಗಿ ಪೂರ್ಣಗೊಳಿಸಲು ಆದೇಶ ನೀಡಿದ್ದರು. ಅದಲ್ಲದೇ ನಂತರ ಬಂದಿದ್ದ ಹೆಚ್. ಆರ್ ಮಹಾದೇವ ಕೂಡ ನಗರಸಭೆಯ ಅಧಿಕಾರಿಗಳಿಗೆ ರಸ್ತೆ ನಿರ್ಮಾಣಕ್ಕೆ ಆದೇಶಿಸಿದ್ದರು. ಆದರೆ ಕೊರೊನಾದಿಂದಾಗಿ ಈ ರಸ್ತೆ ಕಾಮಗಾರಿ ಅರ್ಧಕ್ಕೆ ನಿಂತಿತು. ಈ ಹಿಂದಿನ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯಾಗಿದ್ದ ಚೆನ್ನಬಸವಣ್ಣ ಅವರು ಖುದ್ದಾಗಿ ಸ್ಥಳಕ್ಕೆ ಭೇಟಿ ನೀಡಿ ಪುಡಿ ರೌಡಿಗಳಿಗೆ ಅಟ್ರಾಸಿಟಿ ಹೆಸರಿನಲ್ಲಿ ಶಿಕ್ಷಿತ ಅಮಾಯಕ ನಿವಾಸಿಗಳಿಗೆ ಬೆದರಿಸಿ ಸುಲಿಗೆ ನಡೆಸಿದರೆ ಹುಶಾರು ಎಂದು ಖಡಕ್ ವಾರ್ನಿಂಗ್ ನೀಡಿದ್ದರು. ಅವರ ನಿರ್ದೇಶನದಂತೆ ಬಡಾವಣೆಯ ನಿವಾಸಿಗಳು ನ್ಯೂಟೌನ್ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದರು. ಅವರ ವರ್ಗಾವಣೆ ಆಗುತ್ತಿದ್ದಂತೆ ಈಗ ಮತ್ತೆ ಈ ಪೋಲಿ ರೌಡಿಗಳು ಅತಿಕ್ರಮಣಕ್ಕೆ ಯತ್ನಿಸುತ್ತಿದ್ದಾರೆ.

ಜಿಲ್ಲಾಡಳಿತ ಹಾಗೂ ಬೀದರ ನಗರಸಭೆ ಅಧಿಕಾರಿಗಳು ಕೂಡಲೇ ಎಚ್ಚೆತ್ತು ಈ ಪೋಲಿ ರೌಡಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಹಾಗೂ ಅರ್ಧಕ್ಕೆ ನಿಂತಿರುವ ಸಿಸಿ ರಸ್ತೆ ಕಾಮಗಾರಿ ಪೂರ್ಣಗೊಳಿಸಲು ಬಡಾವಣೆಯ ನಿವಾಸಿಗಳು ಆಗ್ರಹಿಸಿದ್ದಾರೆ.

# ಹಲವು ವರ್ಷಗಳಿಂದ ಜಿಲ್ಲೆಯಲ್ಲೇ ಠಿಕಾಣಿ ಹೂಡಿರುವ ಅಧಿಕಾರಿಗಳ ವರ್ಗಾವಣೆಗೆ ಮುಖ್ಯಮಂತ್ರಿಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬೀದರ.ಜೂ.12:ಹಲವು ವರ್ಷಗಳಿಂದ ಜಿಲ್ಲೆಯಲ್ಲೇ ಠಿಕಾಣಿ ಹೂಡಿರುವ ಅಧಿಕಾರಿ ಹಾಗೂ ಸಿಬ್ಬಂದಿಯನ್ನು ವರ್ಗಾವಣೆ ಮಾಡಬೇಕು ಎಂದು ಕಾಂಗ್ರೆಸ್ ಕಾರ್ಮಿಕ ವಿಭಾಗದ ರಾಜ್ಯ ಕಾರ್ಯದರ್ಶಿ ಜಾನಸನ್ ಘೋಡೆ ಮನವಿ ಮಾಡಿದ್ದಾರೆ.



ಬೆಂಗಳೂರಿನಲ್ಲಿ ಬುಧವಾರ ಈ ಕುರಿತು ಮುಖ್ಯಮಂತ್ರಿ, ಬೀದರ್ ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ಪೌರಾಡಳಿತ ಸಚಿವರಿಗೆ ಪ್ರತ್ಯೇಕ ಮನವಿ ಪತ್ರ ಸಲ್ಲಿಸಿದರು.


ವಿವಿಧ ಇಲಾಖೆಗಳ ಅಧಿಕಾರಿ ಹಾಗೂ ಸಿಬ್ಬಂದಿ ಸರ್ಕಾರದ ನಿಯಮಾನುಸಾರ ಅವಧಿ ಪೂರ್ಣಗೊಂಡರೂ ಹಲವು ವರ್ಷಗಳಿಂದ ಜಿಲ್ಲೆಯಲ್ಲೇ ಬೀಡು ಬಿಟ್ಟಿದ್ದು, ಭ್ರಷ್ಟಾಚಾರದಲ್ಲಿ ತೊಡಗಿದ್ದಾರೆ ಎಂದು ದೂರಿದರು.

ನಿಯಮಾನುಸಾರ ವರ್ಗಾವಣೆ ಅವಧಿ ಪೂರ್ಣಗೊಳ್ಳುವ ಹಂತದಲ್ಲಿ ಬೇರೆ ಇಲಾಖೆಗೆ ನಿಯೋಜನೆ ಮೇಲೆ ತೆರಳಿ, ನಂತರ ಮಾತೃ ಇಲಾಖೆಗೆ ಮರು ನಿಯೋಜನೆ ಹೊಂದುತ್ತಿದ್ದಾರೆ. ಮಾರ್ಗಸೂಚಿಯ ನ್ಯೂನ್ಯತೆಗಳನ್ನು ಬಳಸಿಕೊಂಡು ಮೇಲಧಿಕಾರಿಗಳ ಜತೆ ಶಾಮೀಲಾಗಿ ಸರ್ಕಾರದ ಕಣ್ಣಿಗೆ ಮಣ್ಣೆರೆಚುತ್ತಿದ್ದಾರೆ.

ಈ ವಿಷಯ ಜಿಲ್ಲಾಧಿಕಾರಿ ಅವರ ಗಮನದಲ್ಲಿದ್ದರೂ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಆಪಾದಿಸಿದರು.

ಅವಧಿ ಪೂರೈಸಿದ ಅಧಿಕಾರಿ ಹಾಗೂ ಸಿಬ್ಬಂದಿಯನ್ನು ಬೇರೆ ಜಿಲ್ಲೆಗೆ ವರ್ಗಾಯಿಸಿ ಸಾರ್ವಜನಿಕರ ಹಿತ ರಕ್ಷಿಸಬೇಕು ಎಂದು ಕೋರಿದರು. ಪ್ರಮುಖರಾದ ರತ್ನದೀಪ ಕಸ್ತೂರೆ, ರೋಹಿತ್ ಕಾಂಬಳೆ ಹಾಗೂ ಗುರುದಾಸ್ ಇದ್ದರು.

# ಖಾಸಗಿ ಶಾಲಾ, ಕಾಲೇಜು ಡೊನೇಷನ್ ಹಾವಳಿ ತಡೆಗೆ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 12 : ಜಿಲ್ಲೆಯಲ್ಲಿ ಖಾಸಗಿ ಶಾಲಾ, ಕಾಲೇಜುಗಳ ಡೊನೇಷನ್ ಹಾವಳಿ ತಡೆಗಟ್ಟಲು ಕ್ರಮ ಕೈಗೊಳ್ಳಬೇಕು ಎಂದು ನಮ್ಮ ಕರ್ನಾಟಕ ಸೇನೆ ಆಗ್ರಹಿಸಿದೆ.

ಈ ಕುರಿತು ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕರಿಗೆ ಬರೆದ ಮನವಿ ಪತ್ರವನ್ನು ಸೇನೆಯ ಜಿಲ್ಲಾ ಘಟಕದ ಪದಾಧಿಕಾರಿಗಳು ನಗರದಲ್ಲಿ ಬುಧವಾರ ಇಲಾಖೆಯ ಅಧಿಕಾರಿಗೆ ಸಲ್ಲಿಸಿದರು.

ಶುಲ್ಕದ ವಿಚಾರದಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳು ಶಿಕ್ಷಣ ಇಲಾಖೆಯ ನಿಯಮ ಗಾಳಿ ತೂರುತ್ತಿವೆ ಎಂದು ಸೇನೆಯ ಜಿಲ್ಲಾ ಘಟಕದ ಅಧ್ಯಕ್ಷ ಗಣೇಶ ಪಾಟೀಲ ಆರೋಪಿಸಿದರು.

ಬಸ್‌ಗಾಗಿ ವಿದ್ಯಾರ್ಥಿಗಳ ಪಾಲಕರಿಂದ ಪ್ರತ್ಯೇಕ ಶುಲ್ಕ ವಸೂಲಿ ಮಾಡುತ್ತಿವೆ. ಆದಾಗಿಯೂ ಬಸ್/ವ್ಯಾನ್‌ಗಳಲ್ಲಿ ಸೀಟು ಸಿಗದೆ ಮಕ್ಕಳು ಜೋತಾಡಿಕೊಂಡು ಹೋಗುವ ಪರಿಸ್ಥಿತಿ ಇದೆ ಎಂದು ದೂರಿದರು. ಶುಲ್ಕ ಪಾವತಿಸದ ವಿದ್ಯಾರ್ಥಿಗಳನ್ನು ಪೀಡಿಸುತ್ತಿವೆ. ಶಾಲಾ ಕಾಲೇಜುಗಳ ಶುಲ್ಕದ ಹೊರೆ ತಾಳದೆ ಬಡ ಹಾಗೂ ಮಧ್ಯಮ ವರ್ಗದ ಪಾಲಕರು ಆತ್ಮಹತ್ಯೆ ಮಾಡಿಕೊಂಡ ನಿದರ್ಶನಗಳಿವೆ ಎಂದು ತಿಳಿಸಿದರು. ಮಳೆಗಾಲದಲ್ಲಿ ಮಾತ್ರ ಮೇಲೇಳುವ ನಾಯಿ ಕೊಡೆಗಳಂತೆ ಖಾಸಗಿ ಶಾಲಾ, ಕಾಲೇಜುಗಳು ತಲೆ ಎತ್ತುತ್ತಿರುವುದು ಆಘಾತಕಾರಿ. ಖಾಸಗಿ ಶಾಲಾ, ಕಾಲೇಜು ನಡೆಸುವ ಸಂಸ್ಥೆಗಳು ಶಿಕ್ಷಣವನ್ನು ವ್ಯಾಪಾರವಾಗಿಸುತ್ತಿವೆ. ಇದಕ್ಕೆ ಕಡಿವಾಣ ಹಾಕಬೇಕಾಗಿದೆ. ಆದರೆ, ಶಿಕ್ಷಣ ಇಲಾಖೆ ಮೌನವಾಗಿರುವುದನ್ನು ಗಮನಿಸಿದರೆ ಇಲಾಖೆ ಖಾಸಗಿ, ಶಾಲಾ ಕಾಲೇಜುಗಳೊಂದಿಗೆ ಶಾಮೀಲಾದಂತೆ ಮೇಲ್ನೋಟಕ್ಕೆ ಕಂಡು ಬರುತ್ತಿದೆ ಎಂದು ಆರೋಪಿಸಿದರು. ಸರ್ಕಾರದ ಮಾನದಂಡಗಳನ್ನು ಅನುಸರಿಸದ ಶಾಲಾ, ಕಾಲೇಜುಗಳನ್ನು ಮುಲಾಜಿಲ್ಲದೆ ಮುಚ್ಚಿಸಬೇಕು. ಇಲ್ಲವಾದಲ್ಲಿ ಶಿಕ್ಷಣ ಇಲಾಖೆ ಕಚೇರಿ ಎದುರು ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದರು. ಸೇನೆಯ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ಸಂಜು ಯಾದವ್, ಸಂಘಟನಾ ಕಾರ್ಯದರ್ಶಿಗಳಾದ ಜಿತೆ–ೕಂದ್ರ ರಾಠೋಡ್, ಬೀದರ್ ತಾಲ್ಲೂಕು ಘಟಕದ ಅಧ್ಯಕ್ಷ ಅನಿಲ್ ರಾಜಗೀರಾ, ನಗರ ಘಟಕದ ಅಧ್ಯಕ್ಷ ಸಂತೋಷ್ ಪಾಟೀಲ, ಸಂತೋಷ ಮಳಚಾಪುರೆ, ಮಂಜುನಾಥ ಪಾಟೀಲ, ರಾಮಶೆಟ್ಟಿ ಹುಣಜೆ ಇದ್ದರು.

# ಕಬ್ಬು ಸರಬರಾಜು ಮಾಡಿರುವ ರೈತರ ಖಾತೆಗೆ ಶೀಘ್ರ ಹಣ ಜಮೆ ಮಾಡದಿದ್ದರೆ ಬೀದಿಗಿಳಿದು ಉಗ್ರ ಹೋರಾಟ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 12 : ಜಿಲ್ಲೆಯ ರೈತರು ಕಾರ್ಖಾನೆಗಳಿಗೆ ಕಬ್ಬು ಸರಬರಾಜು ಮಾಡಿ ಸುಮಾರು 6–7 ತಿಂಗಳು ಗತಿಸಿದರೂ ಇಲ್ಲಿಯವರೆಗೆ ಕಬ್ಬು ಸರಬರಾಜು ಮಾಡಿರುವ ರೈತರ ಖಾತೆಗೆ ಹಣ ಜಮೆ ಮಾಡಿರುವುದಿಲ್ಲ. ಜಿಲ್ಲಾ ರೈತ ಸಂಘದ ವತಿಯಿಂದ ತಮಗೆ, ಮಾನ್ಯ ಉಸ್ತುವಾರಿ ಸಚಿವರಿಗೆ, ಮಾನ್ಯ ಮುಖ್ಯಮಂತ್ರಿಗಳಿಗೆ ಹಲವಾರು ಸಲ ಭೇಟಿಯಾಗಿ ಮನವಿ ಪತ್ರಗಳು ಕೊಟ್ಟರೂ ಪ್ರಯೋಜನವಾಗಿಲ್ಲ. ತಾವುಗಳು ಕಾರ್ಖಾನೆಗಳಲ್ಲಿನ ಸಕ್ಕರೆ ಜಪ್ತಿ ಮಾಡಿದ್ದೀರಿ. ಆದರೆ ಇಲ್ಲಿಯವರೆಗೆ ರೈತರಿಗೆ ಅನುಕೂಲವಾಗಿಲ್ಲ. ಈವಾಗ ಮುಂಗಾರು ಹಂಗಾಮಿನ ಬಿತ್ತು ಸಮಯ ಇರುವುದರಿಂದ ರೈತರಿಗೆ ಬಿತ್ತುವ ಬೀಜ, ಗೊಬ್ಬರ, ಕೃಷಿಯಲ್ಲಿ ಉಳುಮೆ ಮಾಡಲು ಖರ್ಚು, ರೈತರ ಮಕ್ಕಳಿಗೆ ಶಾಲಾ ಕಾಲೇಜುಗಳ ಪ್ರವೇಶ ಶುಲ್ಕ, ಪಠ್ಯ ಪುಸ್ತಕಗಳ ಖರ್ಚು, ಮದುವೆ ಸಮಾರಂಭಗಳು ಹೀಗೆ ಇನ್ನಿತರ ಖರ್ಚು ವೆಚ್ಚಗಳು ಇರುತ್ತವೆ. ಆದ–ರೆ ಜಿಲ್ಲೆಯಲ್ಲಿ ಜಿಲ್ಲಾಡಳಿತ ಹಾಗೂ ಸರ್ಕಾರಗಳಾಗಲೀ, ಚುನಾಯಿತ ಪ್ರತಿನಿಧಿಗಳಾಗಲೀ, ಅಧಿಕಾರಿಗಳಾಗಲೀ ಯಾರಿಗೂ ರೈತರ ಕಾಳಜಿ ಇಲ್ಲದಿರುವುದು ಬಹಳ ವಿಷಾದದ ಸಂಗತಿ. ಅಂತೂ ಜಿಲ್ಲೆಯ ರೈತರು ತಮ್ಮಲ್ಲಿ ಕೇಳುತ್ತಿರುವುದು ಭೀಕ್ಷೆ ಅಲ್ಲ, ಅವರ ಹಕ್ಕು. ಆದಕಾರಣ ಶೀಘ್ರದಲ್ಲಿ ಈ ಕೆಳಕಂಡ ಕಬ್ಬಿಣ ಕಾರ್ಖಾನೆಗಳ ವಿಷಯದಲ್ಲಿ ಗಂಭೀರವಾಗಿ ಪರಿಗಣಿಸಿ, ರೈತರಿಗೆ ದೊರೆಯಬೇಕಾದ ಹಣ ಶೀಘ್ರದಲ್ಲಿ ಅವರ ಖಾತೆಗಳಿಗೆ ಜಮೆ ಮಾಡಿಸಬೇಕು.

ಒತ್ತಾಯಗಳು: ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಈಶ್ವರ ಖಂಡ್ರೆಯವರ ನೇತೃತ್ವದ ಸಭೆಯಲ್ಲಿ ಪ್ರತಿ ಟನ್ ಕಬ್ಬಿಗೆ ರೂ. 2700/– ನಿಗದಿಯಂತೆ ಎಲ್ಲಾ ರೈತರ ಖಾತೆಗೆ ಜಮೆ ಮಾಡಬೇಕು. ಭಾಲ್ಕೇಶ್ವರ, ನಾರಂಜಾ ಮತ್ತು ಬಿ.ಕೆ.ಎಸ್.ಕೆ. ಕಾರ್ಖಾನೆಯವರು ಕಾರ್ಖಾನೆಗೆ ಕಬ್ಬು ಸರಬರಾಜು ಮಾಡಿರುವ ಕೆಲವೇ ರೈತರ ಖಾತೆಗಳಿಗೆ ಹಣ ಜಮೆ ಮಾಡಿರುತ್ತಾರೆ. ಆದರೆ ಇನ್ನೂ ಬಹಳಷ್ಟು ರೈತರ ಬಿಲ್ಲು ಬಾಕಿ ಇರುತ್ತದೆ. ಅದನ್ನು ಶೀಘ್ರದಲ್ಲಿ ಜಮೆ ಮಾಡಿಸಬೇಕು. ಮಹಾತ್ಮಾ ಗಾಂಧಿ ಸಹಕಾರ ಸಕ್ಕರೆ ಕಾರ್ಖಾನೆಯವರೂ ಕೂಡ ಬೆಲೆ ನಿಗದಿ ಪ್ರಕಾರ ಪ್ರತಿ ಟನ್ ಕಬ್ಬಿಗೆ ಇನ್ನೂ ರೂ. 50/– ಕೊಡಬೇಕು, ಅದನ್ನು ಶೀಘ್ರದಲ್ಲಿ ತಾವುಗಳು ಕೊಡಿಸಬೇಕು. ನಾರಂಜಾ ಹಾಗೂ ಭಾಲ್ಕೇಶ್ವರ ಸಹಕಾರ ಸಕ್ಕರೆ ಕಾರ್ಖಾನೆಯ ಸಕ್ಕರೆ ತಮ್ಮ ಅಧೀನದಕ್ಕೆ ತೆಗೆದುಕೊಂಡು, ಇವತ್ತಿಗೆ ಸುಮಾರು ಒಂದು ತಿಂಗಳಾದರೂ ಕೂಡ ತಮಗೆ ತಮ್ಮ ಅಧೀನದಲ್ಲಿದ್ದ ಸಕ್ಕರೆ ಮಾರಾಟ ಮಾಡಿ, ರೈತರ ಹಣ ಪಾವತಿ ಮಾಡಲು ಸಾಧ್ಯವಾಗಿಲ್ಲ. ಆದಕಾರಣ ಅತೀ ಶೀಘ್ರದಲ್ಲಿ ಸಕ್ಕರೆ ಮಾರಾಟ ಮಾಡಿ, ರೈತರ ಬಿಲ್ಲು ಪಾವತಿ ಮಾಡಬೇಕು.

ಇಲ್ಲದಿದ್ದಲ್ಲಿ ಮುಂಬರುವ ದಿನಗಳಲ್ಲಿ ಬೀದಿಗಿಳಿದು ಉಗ್ರ ಹೋರಾಟ ಮಾಡಲಾಗುವುದು. ಯಾವುದೇ ಅಹಿತಕರ ಘಟನೆಗೆ ಜಿಲ್ಲಾಡಳಿತವೇ ಜವಾಬ್ದಾರರು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ತಮ್ಮಲ್ಲಿ ಒತ್ತಾಯಿಸಿ ಇಂದು ನಗರದ ಅಂಬೇಡ್ಕರ್ ವೃತ್ತದಿಂದ ಜಿಲ್ಲಾಧಿಕಾರಿಗಳ ಕಚೇರಿವರೆಗೆ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷರಾದ ಸಿದ್ರಾಮಪ್ಪಾ ಆಣದೂರೆ, ಜಿಲ್ಲಾ ಪ್ರ.ಕಾರ್ಯದರ್ಶಿ ದಯಾನಂದ ಸ್ವಾಮಿ ಸಿರ್ಸಿ, ಶ್ರೀಮಂತ ಬಿರಾದಾರ, ಶಂಕ್ರೆಪ್ಪಾ ಪಾರಾ, ಶೇಷರಾವ ಕಣಜಿ, ಚಂದ್ರಶೇಖರ ಜಮಖಂಡಿ, ಬಾಬುರಾವ ಜೋಳದಾಬಕಾ, ಸುಭಾಷ ರಗಟೆ, ನಾಗಯ್ಯಾ ಸ್ವಾಮಿ, ಪ್ರವೀಣ ಕುಲಕರ್ಣಿ, ಪ್ರಕಾಶ ಬಾವಗೆ, ಸತೀಶ ನನ್ನೂರೆ, ರೇವಣಸಿದ್ದಪ್ಪ ಯರಬಾಗ, ಮಲ್ಲಿಕಾರ್ಜುನ ಬಿರಾದಾರ, ಸುಮಂತ ಗ್ರಾಮಲೆ, ವಿಠಲ ಪಾಟೀಲ, ಧೂಳಪ್ಪಾ ಆಣದೂರ, ಮಲ್ಲಿಕಾರ್ಜುನ ಚಕ್ಕಿ, ವಿಶ್ವನಾಥ ಧರಣಿ, ಬಸಪ್ಪಾ ಆಲೂರ, ರಾಜಕುಮಾರ ಪಾಟೀಲ ಸೇರಿದಂತೆ ಅನೇಕ ರೈತ ಮುಖಂಡರು ಉಪಸ್ಥಿತರಿದ್ದರು.

# ಜವಾಬ್ದಾರಿ ಸಮರ್ಥವಾಗಿ ನಿರ್ವಹಿಸಿ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜೂ.12:ಕೇಂದ್ರಸರಕಾರ ವಹಿಸಿರುವ ಜವಾಬ್ದಾರಿಯನ್ನು ಎಲ್ಲ ಸದಸ್ಯರು ಸಮರ್ಥವಾಗಿ ನಿರ್ವಹಿಸಬೇಕು ಎಂದು ಮಾಜಿ ಶಾಸಕ ಪ್ರಕಾಶ ಖಂಡ್ರೆ ಹೇಳಿದರು. ಪಟ್ಟಣದ ತಮ್ಮ ಗೃಹ ಕಚೇರಿಯಲ್ಲಿ ಬುಧವಾರ ಭಾಲ್ಕಿ ರೈಲ್ವೆ ಸ್ಟೇಷನ್ ಕೇಂದ್ರದ ಸುಧಾರಣಾ ಸಮಿತಿಯ ನೂತನ ಸದಸ್ಯರನ್ನು ಸನ್ಮಾನಿಸಿ ಅವರು ಮಾತನಾಡಿದರು.



ಪಟ್ಟಣದ ರೈಲ್ವೆ ನಿಲ್ದಾಣದ ಅಭಿವೃದ್ಧಿ ಸೇರಿ ಅಗತ್ಯ ಸೌಕರ್ಯ ಒದಗಿಸುವುದರ ಜತೆಗೆ ವಿವಿಧ ರೈಲು ವಿಸ್ತರಣೆ ಸೇರಿದಂತೆ ಮುಂತಾದ ಅಭಿವೃದ್ಧಿ ಕೆಲಸಗಳಿಗೆ ಶ್ರಮಿಸಿ ಕೇಂದ್ರ ಸರಕಾರಕ್ಕೆ ಒಳ್ಳೆಯ ಹೆಸರು ತಂದುಕೊಡಬೇಕು ಎಂದು ತಿಳಿಸಿದರು. ನೂತನ ಸದಸ್ಯರು ಮಾತನಾಡಿ, ಮಾಜಿ ಶಾಸಕ ಪ್ರಕಾಶ ಖಂಡ್ರೆ ಅವರ ನಿರಂತರ ಪರಿಶ್ರಮದಿಂದ ನಾವುಗಳು ರೈಲ್ವೆ ಸುಧಾರಣೆ ಸಮಿತಿಗೆ ಸದಸ್ಯರಾಗಿ ಆಯ್ಕೆಗೊಂಡಿದ್ದೇವೆ. ಉತ್ತಮವಾಗಿ ಕಾರ್ಯನಿರ್ವಹಿಸಿ ಅವರ ವಿಶ್ವಾಸವನ್ನು ಉಳಿಸಿಕೊಳ್ಳುವ ಪ್ರಯತ್ನ ಮಾಡುತ್ತೇವೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ತಾಲೂಕು ಬಿಜೆಪಿ ಮಾಜಿ ಅಧ್ಯಕ್ಷ ಗೋವಿಂದರಾವ ಬಿರಾದಾರ್, ಹಿರಿಯ ಮುಖಂಡ ಬಾಬುರಾವ್ ಧೂಪೆ ಸೇರಿದಂತೆ ಹಲವರು ಇದ್ದರು. ಸನ್ಮಾನ : ಸಿಕಿಂದ್ರಾಬಾದ್ ವಿಭಾಗೀಯ ಭಾಲ್ಕಿ ರೈಲ್ವೆ ಸ್ಟೇಷನ್ ಕೇಂದ್ರದ ಸುಧಾರಣಾ ಸಮಿತಿಯ ನೂತನ ಸದಸ್ಯರಾಗಿ ಆಯ್ಕೆಯಾಗಿರುವ ಉತ್ತಮ ಪುರಿ, ಸತೀಶ ನಾಯಕ, ಆನಂದ ಜಾಧವ, ದಿಲೀಪ ತೇಲಂಗ ಮತ್ತು ಶಾಹುರಾಜ ಪವಾರ ಅವರನ್ನು ಮಾಜಿ ಶಾಸಕ ಪ್ರಕಾಶ ಖಂಡ್ರೆ ಸನ್ಮಾನಿಸಿ, ಅಭಿನಂದಿಸಿದರು.

# ಆಯುಷ್ಯದ ಆನಂದ ಪಡೆಯದಿದ್ದರೆ ಜೀವನವೇ ವ್ಯರ್ಥ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜೂ.12:ಮಹಾಶರಣ ಅಂಬಿಗರ ಚೌಡಯ್ಯನವರು ನಿರ್ಭಿಡೆ, ಡಂಬದ ವೈರಿ ಎನಿಸಿಕೊಂಡರು. ಇವರ ಕಾಯಕ ದೋಣಿ ನಡೆಸುವುದು. ತನ್ನ ಹೆಸರೆ ವಚನದ ಅಂಕಿತನಾಮ ಇಟ್ಟುಕೊಂಡ ವೀರಶರಣ ಇವರು. ಚೌಡಯ್ಯನವರು ಕೇವಲ ದೋಣಿ ದಾಟಿಸುವ ಅಂಬಿಗ ವೃತ್ತಿ ಮಾಡುವ ಚೌಡಯ್ಯನಲ್ಲ, ದೋಣಿ ನಡೆಸುತ್ತ ಶಿವಯೋಗ ಸಾಧನೆ ಮಾಡುತ್ತ ಲಿಂಗಾಂಗ ಸಾಮರಸ್ಯದ ಸುಖ ನೀಡುವ ಮಹಾಗುರು ಆಗಿದ್ದರು ಎಂದು ಬಸವಕಲ್ಯಾಣ ಅನುಭವ ಮಂಟಪ ಟ್ರಸ್ಟ್ನ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹೇಳಿದರು. ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ ಬುಧವಾರ ಆಯೋಜಿಸಿದ್ದ 487ನೆಯ ಶಿವಾನುಭವ ಗೋಷ್ಠಿ ಮತ್ತು ಅಂಬಿಗರ ಚೌಡಯ್ಯನವರ ಸ್ಮರಣೋತ್ಸವ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು. ಜೀವನದಲ್ಲಿ ಅವಕಾಶಗಳು ಸಿಗುವುದಿಲ್ಲ. ಅವಕಾಶ ಸಿಕ್ಕಾಗ ಬಳಸಿಕೊಳ್ಳುವ ಕಲೆಯು ನಮಗೆ ಬೇಕು. ಸಿಕ್ಕ ಅವಕಾಶ ನಾವು ಬಳಸಿಕೊಂಡಾಗ ನಮ್ಮ ಜೀವನ ಭವ್ಯವಾಗುತ್ತದೆ. ಅವಕಾಶ ಎಂದೂ ಕಳೆದುಕೊಳ್ಳಬಾರದು. ಇದನ್ನೆ ಅಂಬಿಗರ ಚೌಡಯ್ಯನವರು ಗಾಳಿ ಬಿಟ್ಟಾಗ ತೂರಿಕೊಳ್ಳಿರಯ್ಯಾ ಗಾಳಿ ನಿನ್ನಾಧೀನವಲ್ಲಯ್ಯಾ ನಾಳೆ ತೂರಿಹೆನೆಂದರೆ ಇಲ್ಲವಯ್ಯ ಶಿವಶರಣ ಎಂಬುದೊಂದು ಗಾಳಿ ಹಡದಲ್ಲಿ ಬೇಗ ತೂ–ರೆಂದ ಅಂಬಿಗರ ಚೌಡಯ್ಯ ಎಂದು ಹೇಳಿದ್ದಾರೆ.




ಒಕ್ಕಲಿಗ ರಾಶಿಯ ವೇಳೆ ಗಾಳಿ ಬಿಟ್ಟಾಗ ತೂರಿಕೊಳ್ಳತ್ತಾನೆ. ಆಮೇಲೆ ಗಾಳಿ ನೀ ಬಾ ಎಂದರೂ ಬರುವುದಿಲ್ಲ. ಗಾಳಿ ಬಿಟ್ಟಾಗ ಬೇಗ ಬೇಗ ತೂರಿ–ಕೊಂಡು ರಾಶಿ ಮಾಡಿಕೊಳ್ಳುವ ಹಾಗೆ ದೇವರು ಕೊಟ್ಟ ಉಸಿರು ಇರುವಾಗಲೆ ಸಾಧನೆ ಮಾಡುತ್ತ ಶಿವಸುಖ ಅನುಭವಿಸಬೇಕು. ಲಿಂಗಾನಂದದ ಆನಂದ ಪಡೆಯಬೇಕು.

ದೇವರು ಕೊಟ್ಟ ಆಯುಷ್ಯ ಇದ್ದಾಗ ಆನಂದ ಪಡೆಯದಿದ್ದರೆ ಜೀವನವೇ ವ್ಯರ್ಥ. ಜೀವನ ಶಾಶ್ವತವಲ್ಲ. ಯಾವಾಗ ಕರೆ ಬರುತ್ತದೊ ಗೊತ್ತಿಲ್ಲ. ಅದಕ್ಕೂ ಮುಂಚೆ ನಿತ್ಯ ಲಿಂಗಾರ್ಚನೆ, ಲಿಂಗಾರ್ಪಣೆ, ಲಿಂಗಾನುಭವದೊಂದಿಗೆ ಆನಂದ ಪಡೆಯಬೇಕೆಂಬುದೆ ಅಂಬಿಗರ ಚೌಡಯ್ಯನವರ ಸಂದೇಶವಾಗಿದೆ ಎಂದು ತಿಳಿಸಿದರು.

ಪೀಠಾಧಿಪತಿ ಗುರುಬಸವ ಪಟ್ಟದ್ದೇವರು, ಪ್ರಭುಲಿಂಗ ಸ್ವಾಮೀಜಿ ಸಮ್ಮುಖ ವಹಿಸಿದ್ದರು. ಜಗನ್ನಾಥ

ಜಮಾದಾರ್ ಕಾರ್ಯಕ್ರಮ ಉದ್ಘಾಟಿಸಿದರು. ತಾಲೂಕು ನಿವೃತ್ತ ಸರಕಾರಿ ನೌಕರರ ಸಂಘದ ಅಧ್ಯಕ್ಷ ಬಸವರಾಜ ಮರೆ ಅನುಭಾವ ನೀಡಿದರು. ಸನ್ಮಾನ :ಇದೇವೇಳೆ ಪ್ರತಾಪಸಿಂಗ್ ಠಾಕೂರ ಹಲಸಿ ಅವರನ್ನು ಶ್ರೀಮಠದ ಪರವಾಗಿ ಸನ್ಮಾನಸಿಲಾಯಿತು. ಜಿಲ್ಲಾ ರೈತ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನಸ್ವಾಮಿ, ಉಪಾಧ್ಯಕ್ಷ ಕಾಶಿನಾಥ ಭೂರೆ, ಭಾವರಾವ ನೆಲವಾಡೆ, ವಿಠಲರಾವ ಮೇತ್ರೆ, ಸೋಮನಾಥ ಏಣಕೂರು, ಶಾಂತಮ್ಮ ಮೂಲಗೆ ಹಜನಾಳ, ಅನ್ನಪೂರ್ಣ ಬಿರಾದಾರ ಬಾಜೋಳಗಾ, ಅರವಿಂದ ಜಮಾದಾರ, ಅಶೋಕ ಅಂಬಿಗಾರ, ಸಂತೋಷ ನಾಟೀಕರ್, ಶಿವಕುಮಾರ ಜಲ್ದೆ, ಶಿವಾಜಿರಾವ ಸಿಂಧೆ, ಶ್ರೀದೇವಿ ಲಾಲಪ್ಪ ಕಂದಗೂಳೆ ಸೇರಿದಂತೆ ಮುಂತಾದವರು ಇದ್ದರು. ದೀಪಕ ಠಮಕೆ ನಿರೂಪಿಸಿ, ವಂದಿಸಿದರು.

## 5 ಲಕ್ಷ ಮೌಲ್ಯದ ಚಿನ್ನಾಭರಣ ಹಾಗೂ ಹಣವಿದ್ದ ಪ್ರಯಾಣಿಕರ ಬ್ಯಾಗ್ ಹಿಂತಿರುಗಿಸಿದ ಆಟೋ ಚಾಲಕನಿಗೆ ಪೊಲೀಸರಿಂದ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಗುರುವಾರನಗರದಲ್ಲಿ ಆಟೋದಲ್ಲಿ ಪ್ರಯಾಣಿಸುತ್ತಿದ್ದ ಮುಸ್ಲಿಂದಂಪತಿಗಳುಅವಸರದಲ್ಲಿ 5 ಲಕ್ಷ ರೂ. ಮೌಲ್ಯದ ಚಿನ್ನಾಭರಣಗಳು ಹಾಗೂ 5 ಸಾವಿರಹಣವಿರುವ ಬ್ಯಾಗ್‌ನ್ನು ಆಟೋದಲ್ಲಿಬಿಟ್ಟುತೆರಳಿದ್ದರು, ಇದನ್ನುಗಮನಿಸಿದ ತಾಲ್ಲೂಕಿನ ಹತ್ತಿಕುಣಿ ಗ್ರಾಮದ ಆಟೋ ಚಾಲಕ ಚಂದಪ್ಪ ವರ್ಕನಳ್ಳಿ ಅವರು ಪ್ರಾಮಾಣಿಕವಾಗಿ ಬ್ಯಾಗ್‌ನ್ನು ತೆಗೆದುಕೊಂಡು ಗಾಂಧಿವೃತ್ತದಲ್ಲಿರುವ ನಗರ ಪೊಲೀಸ್ ಠಾಣೆಗೆ ತೆರಳಿ ಪೊಲೀಸರ ಸಮ್ಮುಖದಲ್ಲಿ ವಾರಸುದಾರರಿಗೆಮರಳಿ ನೀಡಿದ ಅವರ ಪ್ರಾಮಾಣಿಕತೆಯನ್ನು ಕಂಡು ನಗರ ಅಪರ ವಿಭಾಗದ ಪೊಲೀಸರು ಆತನನ್ನುಸನ್ಮಾನಿಸಿ, ಗೌರವಿಸಿ ಕಳುಹಿಸಿರುವ ಘಟನೆ ಜರುಗಿದೆ.

ಎಂದಿನಂತೆ ಚಂದಪ್ಪವರ್ಕನಳ್ಳಿ ಹತ್ತಿಕುಣಿಯಿಂದ ಯಾದಗಿರಿಗೆ ಆಟೋ ಚಲಾಯಿಸಿಕೊಂಡು ಯಾದಗಿರಿಗೆ ತೆರಳಿ, ಸಂಜೆ 7 ಗಂಟೆಗೆ ಮರಳಿ ಹತ್ತಿಕುಣಿ ಸ್ವಗ್ರಾಮಕ್ಕೆ ಮರಳುತ್ತಿದ್ದ, ಬೆಳಿಗ್ಗೆ 8.30ಕ್ಕೆ ಚಿತ್ತಾಪೂರ ಕ್ರಾಸ್ ನೇತಾಜಿ ವೃತ್ತದಲ್ಲಿ ತನ್ನ ಆಟೋದಲ್ಲಿ ಮುಸ್ಲಿಂದಂಪತಿಗಳುಹತ್ತಿದರು.

ಹತ್ತಿಕುಣಿ ಕ್ರಾಸ್ ಹತ್ತಿರವಿರುವ ತರಕಾರಿ ಮಾರುಕಟ್ಟೆ ಬಳಿ ಅವಸರದಲ್ಲಿ ನೆನಪು ಹಾರಿ ತಾವು ಕುಳಿತಿದ್ದ ಆಟೋದಲ್ಲಿ ಸೀಟ್ ಮೇಲ್ಭಾಗದಲ್ಲಿ ಬೊಲ್ಟೆ ನೇತಾಕಿದ ಬ್ಯಾಗ್‌ನ್ನು ಮರೆತು ಮನೆಗೆ ತೆರಳಿದ್ದರು.

ಆ ಸಮಯದಲ್ಲಿ ಬ್ಯಾಗನ್ನು ಗಮನಿಸದೇ ಗಾಂಧಿವೃತ್ತದಿಂದ ಹಳೇ ಬಸ್ ಸ್ಟಾಂಡ್ – ಹೊಸ ಬಸ್ ಸ್ಟಾಂಡ್ 2 ಭಾರಿ ಇತರ ಪ್ರಯಾಣಿಕರ ಹತ್ತಿಸಿಕೊಂಡು ಸಂಚಾರ ಮಾಡಿದ್ದಾನೆ, ಪ್ರಯಾಣಿಕರು ಇಳಿಯುವ ಸಮಯದಲ್ಲಿ ಆಟೋದಲ್ಲಿ ನೇತಾಡುತ್ತಿರುವ ಬ್ಯಾಗ್‌ನ್ನು ಗಮನಿಸಿದನು.

ತಕ್ಷಣ ಆಟೋವನ್ನು ತೆಗೆದು-ಕೊಂಡು ಆ ಮುಸ್ಲಿಂದಂಪತಿಗಳು ಇಳಿಸಿರುವ ತರಕಾರಿ ಮಾರುಕಟ್ಟೆ ಹತ್ತಿರ ಬಂದು ಆಟೋ ನಿಲ್ಲಿಸಿ, ಅವರಿಗಾಗಿ ಹುಡುಕಾಡಿದನು, ಅವರು ಕಾಣಿಸದ ಪರಿಣಾಮ ಚಾಲಕ ಚಂದಪ್ಪ ವರ್ಕನಳ್ಳಿ ನೇರವಾಗಿ ನಗರ ಪೊಲೀಸ್ ಠಾಣೆಗೆಒಪ್ಪಿಸಲುನಿರ್ಧರಿಸಿಅಲ್ಲಿಗೆ ತೆರಳಿದ,ಅದೇಸಮಯದಲ್ಲಿಯೇ ಬ್ಯಾಗ್ ಕಳೆದುಕೊಂಡು ಮುಸ್ಲಿಂ ದಂಪತಿಗಳುಠಾಣೆಮುಂಭಾಗದಲ್ಲಿ ನಿಂತಿದ್ದರು,ಆಟೋದಿಂದ ಇಳಿದು ಅವರನ್ನು ಭೇಟಿಯಾಗಿ, ಬ್ಯಾಗ್ ನಿಮ್ಮದೇ ಇದೆ, ನೆನಪು ಹಾರಿ ಆಟೋದಲ್ಲಿಬಿಟ್ಟಿದ್ದೀರಿ,ಪೊಲೀಸರ ಎದುರೆ ನಿಮಗೆ ನೀಡುತ್ತೇನೆ ಎಂದು ಒಳ ಪ್ರವೇಶಿಸಿದರು.

ಅಪರಾಧ ವಿಭಾಗದ ಪಿಎಸ್‌ಐ ಭೀಮರಾಯ ಬಂಕಲಗಿ ಹಾಗೂ ಸಿಬ್ಬಂದಿಗಳನ್ನು ಭೇಟಿಯಾಗಿ ಘಟನೆಬಗ್ಗೆ ಪ್ರಾಮಾಣಿಕ ಮಾಹಿತಿ ನೀಡಿ, ಅವರ ಸಮ್ಮುಖದಲ್ಲಿಯೇ ಚಿನ್ನಾಭರಣ, 5 ಸಾವಿರ ರೂ. ನಗದು ಇರುವ ಬ್ಯಾಗ್‌ನ್ನು ವಾರಸುದಾರರಿಗೆ ಮರಳಿ ನೀಡಲಾಯಿತು.

ಆಟೋಚಾಲಕನ ಕಾರ್ಯವನ್ನು ಶ್ಲಾಘಿಸಿದ ಪಿಎಸ್‌ಐ ಭೀಮರಾಯ ಬಂಕಲಗಿ, ಎಎಸ್‌ಐ ಬಸವಂತರಡ್ಡಿ ಹಾಗೂ ಸಿಬ್ಬಂದಿಗಳು ಆಟೋ ಚಾಲಕರ ಸಂಘದ ಮುಖಂಡ ಸಾಂಗ್ಲಿಯಾನ ಸಮ್ಮುಖದಲ್ಲಿ ಚಾಲಕ ಚಂದಪ್ಪ ಅವರನ್ನು ಸನ್ಮಾನಿಸಿದರು.

ಮರಳಿ ಬ್ಯಾಗ್ ಪಡೆದ ದಂಪತಿಗಳು ಕೂಡ ಕೃತಜ್ಞತೆ ಸಲ್ಲಿಸಿ, ಸಂತಸದಿಂದ ಮನೆಗೆ ಮರಳಿದರು.

## ಗ್ರಾಮದಲ್ಲಿ ಹದಗೆಟ್ಟ ಪರಿಸರ, ಕಸ ವಿಲೇವಾರಿ ಮಾಡುವ ವಾಹನ ಎಲ್ಲಿ..?






ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ತಾಲ್ಲೂಕಿನ ಹತ್ತಿಕುಣಿ ಗ್ರಾಮದಲ್ಲಿ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿ ನಿರ್ಲಕ್ಷದಿಂದ ಪರಿಸರ ಮಾಲಿನ್ಯ ದಿನ–ದಿನಕ್ಕೆ ಹದಗೆಡುತ್ತಿದೆ, ಸಾಂಕ್ರಾಮಿಕ ರೋಗ ಹರಡುವ ಭೀತಿ ಜನರಲ್ಲಿ ಕಾಡುತ್ತಿದೆ, ಸರ್ಕಾರ ಸ್ವಚ್ಛ ಭಾರತ ಮಿಷನ್ ಅಡಿಯಲ್ಲಿ ಪ್ರತಿ ಗ್ರಾಮ ಪಂಚಾಯತಗೆ ತ್ಯಾಜ್ಯ ವಸ್ತುಗಳ ವಿಲೇವಾರಿಗೆ ವಾಹನ ನೀಡಿದ್ದು, ಆದರೆ ಈ ಗ್ರಾಮದಲ್ಲಿ ಮಾತ್ರ ಕಳೆದ 2 ವರ್ಷದಿಂದ ಕಾರ್ಯ ನಿರ್ವಹಿಸದೇ ಪರಿಣಾಮ ಜನರು ತಮ್ಮ ದೈನಂದಿನ ಕಸ ವಿಲೇವಾರಿ ಮಾಡಲು ತೊಂದರೆ ಅನುಭವಿಸುತ್ತಿದ್ದಾರೆ,

ಗ್ರಾಮದಲ್ಲಿ ಪರಿಸರ ಮಾಲಿನ್ಯ ಹೆಚ್ಚಾಗಿದೆ, ಸೂಕ್ತ ಚರಂಡಿಗಳು, ರಸ್ತೆಗಳು ಇಲ್ಲ ಎಂದು ಗ್ರಾಮಸ್ಥರು ಕೆಲ ದಿನಗಳ ಹಿಂದೆ ಜಿ.ಪಂ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಲವೀಶ ಒರಾಡಿಯಾ ಅವರಿಗೆ ದೂರು ನೀಡಿದ ಪರಿಣಾಮ ಸೋಮವಾರ ಗ್ರಾಮಕ್ಕೆ ಭೇಟಿ ನೀಡಿದ ಅವರು ಪಿಡಿಒ ನಿಂಗಣ್ಣ ಕಣಮೇಶ್ವರ ಹಾಗೂ ಅಧ್ಯಕ್ಷರ ಪತಿ ಬಿಳ್ವಾರ ಅವರಿಗೆ, ಸಿಬ್ಬಂಧಿಗಳಿಗೆ ಸ್ವಚ್ಚತೆಗೆ ಮೊದಲು ಆದ್ಯತೆ ನೀಡಿ ಎಂದು ಸೂಚಿಸಿದ ಸಂದರ್ಭದಲ್ಲಿ ಗ್ರಾಮಸ್ಥರು ಸರ್ ಪಂಚಾಯತಗೆ ಕಸ ವಿಲೇವಾರಿ ಮಾಡಲು ಸರ್ಕಾರ ನೀಡಿರುವ ವಾಹನ 2 ವರ್ಷದಿಂದ ಕಾಣಿಸುತ್ತಿಲ್ಲ, ಅದು ಎಲ್ಲಿ ಎಂದು ಪ್ರಶ್ನಿಸಿದಾಗ ಮದ್ಯೆ ಪ್ರವೇಶಿಸಿದ ಪಿಡಿಒ, ಸರ್ ಇವರು ಸುಮ್ಮನೇ ನನ್ನ ಮೇಲೆ ಆರೋಪ ಮಾಡುತ್ತಿದ್ದಾರೆ, ವಾಹನ ತನ್ನ ಕಾರ್ಯ ನಿರ್ವಹಿಸುತ್ತಿದೆ ಎಂದು ತಪ್ಪು ಮಾಹಿತಿ ನೀಡಿದರು.

ನೆರೆಯ ಅಲ್ಲಿಪೂರ ಗ್ರಾಮದಲ್ಲಿ ಸರಿಯಾಗಿ ಪಂಚಾಯತನವರು ದಿನಾಲೂ ಕಸ ವಿಲೇವಾರಿ ಮಾಡುತ್ತಾರೆ, ಆದರೆ ಹತ್ತಿಕುಣಿಯಲ್ಲಿ ತೆರಿಗೆ ಸಂಗ್ರಹಿಸುವ ಪಂಚಾಯತನವರು ಜನರಿಗೆ ಕಸ ವಿಲೇವಾರಿ ಮಾಡಲು ವಾಹನ ಬಳಕೆ ಮಾಡಿಕೊಂಡಿಲ್ಲ, ಪರಿಣಾಮ ಗ್ರಾಮದ ಮುಖ್ಯ ರಸ್ತೆಯಲ್ಲಿ ಹತ್ತಾರು ಹೊಟಲ್‌ಗಳಿವೆ, ಸಾಕಷ್ಟು ಜನರು ಕೈ ಬಂಡಿಯಲ್ಲಿ ಹಾಗೂ ಡಬ್ಬಿಗಳನ್ನು ಇಟ್ಟುಕೊಂಡು ಕಾಯಿಪಲ್ಲೆ ಮಾರಾಟ ಮಾಡುತ್ತಾರೆ, ದಿನಾಲೂ ಸಂಜೆ ಸಂಗ್ರಹವಾಗುವ ತ್ಯಾಜ್ಯ ವಸ್ತುಗಳನ್ನು ನಾವೂ ಎಲ್ಲಿ ಹಾಕಬೇಕು, ಇದರಿಂದ ಎಲ್ಲರೂ ನಮ್ಮನ್ನು ದೂರುತ್ತಿದ್ದಾರೆ, ಎಂದು ಕಾಯಿಪಲ್ಲೆ, ಹಣ್ಣು ವ್ಯಾಪಾರಸ್ಥ ಹೊನ್ನಪ್ಪ ತೆಗ್ಗನಳ್ಳಿ ತಮ್ಮ ಬೇಸರ ವ್ಯಕ್ತಪಡಿಸಿದ್ದಾರೆ,

ಆದರೆ ವಾಸ್ತವಿಕವಾಗಿ ಸರ್ಕಾರ ನೀಡಿರುವ ವಾಹನ ಕೇವಲ 15 ದಿನಗಳ ಕಾಲ ಕಾರ್ಯ ನಿರ್ವಹಿಸಿದೆ, ಪಂಚಾಯತನವರು ಸರಿಯಾಗಿ ವಾಹನ ಚಾಲಕ ನೇಮಕ ಮಾಡಿಕೊಳ್ಳದ ಪರಿಣಾಮ ಆ ವಾಹನ ಇಂದು ಬಳಕೆ ಮಾಡದೇ ಕೆಟ್ಟು ನಿಂತಿದೆ, ಈ ಕುರಿತು ಪಂಚಾಯತ ಅಧ್ಯಕ್ಷರ ಜೊತೆ ಪ್ರಸ್ತಾಪಿಸಿದಾಗ ಆ ಪಿಡಿಒ ನನ್ನ ಮಾತು ಕೇಳುತ್ತಿಲ್ಲ, ನಾನು ಕಳೆದ 20 ತಿಂಗಳಿನಿಂದ ಹತ್ತಾರು ಭಾರಿ ಆ ವಾಹನ ದುರಸ್ಥಿ ಮಾಡಿಸು, ತಾತ್ಕಾಲಿಕ ಚಾಲಕರನ್ನು ನೇಮಕ ಮಾಡಿಕೊಂಡು ಕಸ ವಿಲೇವಾರಿ ಮಾಡಬೇಕು ಎಂದು ತಿಳಿಸಿದೆ, ಅದಕ್ಕೆ ಅವರಿಂದ ಆ ಕಾರ್ಯ ಅನುಷ್ಟಾನಗೊಂಡಿಲ್ಲ ಎಂದು ಬೇಸರ ವ್ಯಕ್ತಪಡಿಸಿ, ಗ್ರಾಮದಲ್ಲಿ ಹದಗೆಟ್ಟಿರುವ ಪರಿಸರ ಬಗ್ಗೆ ಜನರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ, ಇಂದೇ ಆ ವಾಹನವನ್ನು ಯಾದಗಿರಿಗೆ ತರುವ ಮೂಲಕ ದುರಸ್ಥಿಗೊಳಿಸಿ, ಚಾಲಕನನ್ನು ನೇಮಿಸಿ, ಮಳೆಗಾಲ ಮುಗಿಯುವ ವರೆಗೆ ತ್ಯಾಜ್ಯ ವಸ್ತುಗಳ ವಿಲೇವಾರಿಗೆ ಕ್ರಮ ಕೈಗೊಳ್ಳುತ್ತೇನೆ ಎಂದು ತಿಳಿಸಿದರು.

## ವ್ಯಕ್ತಿ ಕಾಣೆ: ಪತ್ತೆಗೆ ಸಹಕರಿಸಲು ಮನವಿ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಅಳವಂಡಿ ಪೊಲೀಸ್ ಠಾಣಾ ವ್ಯಾಪ್ತಿಯ ಬೆಟಗೇರಿ ನಿವಾಸಿ ಶರಣಬಸವ ಅಂದಪ್ಪ ಮೆಣಸಿನಕಾಯಿ ಎಂಬ 47 ವರ್ಷದ ವ್ಯಕ್ತಿಯು ಜೂನ್ 07 ರಿಂದ ಕಾಣೆಯಾಗಿದ್ದು, ಈವರೆಗೂ ಪತ್ತೆಯಾಗಿರುವುದಿಲ್ಲ. ಈ ಕುರಿತು ಅಳವಂಡಿ ಪೊಲೀಸ್ ಠಾಣೆಯಲ್ಲಿ ಗುನ್ನೆನಂ.55/2025 ಕಲಂ ಮನುಷ್ಯ ಕಾಣೆ ಅಡಿ ಪ್ರಕರಣ ದಾಖಲಾಗಿದೆ.

**ಕಾಣೆಯಾದ ವ್ಯಕ್ತಿಯ ಚಹರೆ:**

ವ್ಯಕ್ತಿಯು 5.30 ಅಡಿ ಎತ್ತರ, ಸಾಧಾರಣ ಮೈಕಟ್ಟು, ಗೋಧಿ ಮೈಬಣ್ಣ ಹೊಂದಿದ್ದು, ಕಾಣೆ-ಯಾದಾಗ ತಿಳಿ ಗುಲಾಬಿ ಬಣ್ಣದ ಅಂಗಿ ಮತ್ತು ಕಪ್ಪು ಬಣ್ಣ ಪ್ಯಾಂಟ್ ಧರಿಸಿದ್ದರು. ಕನ್ನಡ ಭಾಷೆ ಮಾತನಾಡುತ್ತಾರೆ.

ಮೇಲ್ಕಂಡ ಚಹರೆಯ ವ್ಯಕ್ತಿ ಕುರಿತು ಯಾರಿಗಾದರೂ ಮಾಹಿತಿ ಇದ್ದಲ್ಲಿ ಅಥವಾ ದೊರೆತಲ್ಲಿ ಕೊಪ್ಪಳ ಎಸ್‌ಪಿ:08539-230111, ಡಿವೈಎಸ್‌ಪಿ:08539-230342, ಸಿಪಿಐ(ಗ್ರಾ): 08539-231333, ಪಿಎಸ್‌ಐ ಅಳವಂಡಿ: 08539-285233, ಮೊ.ಸಂ.9480803747, ಜಿಲ್ಲಾ ಕಂಟ್ರೋಲ್ ರೂಂ.08539-230222, 100 ಗೆ ಸಂಪರ್ಕಿಸಿ ಮಾಹಿತಿ ನೀಡಬಹುದು ಎಂದು ಅಳವಂಡಿ ಪೊಲೀಸ್ ಠಾಣೆ ಪ್ರಕಟಣೆ ಕೋರಿದೆ.

ಬಾಲನ್ಯಾಯ ಕಾಯ್ದೆ–2015 (ಮಕ್ಕಳ ರಕ್ಷಣೆ ಮತ್ತು ಪಾಲನೆ) ಮತ್ತು ಬಾಲ್ಯ ವಿವಾಹ ನಿಷೇಧ ಕಾಯ್ದೆ–2006ರ ಮತ್ತು ಪೋಕ್ಸೋ–2012ರ ಕಾಯ್ದೆಯ ತಿದ್ದುಪಡಿ ಕಾಯ್ದೆಯ ಪರಿಚಯ

## ಹೆಣ್ಣು ಭ್ರೂಣ ಹತ್ಯೆಗೆ ಕಾರಣವಾಗುವ ಲಿಂಗ ನಿರ್ಧರಣೆಯ ದುರ್ಬಳಕೆಯನ್ನು ತಡೆಗಟ್ಟುತ್ತದೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜೂನ್ 12– : ಹೆಣ್ಣು ಭ್ರೂಣ ಹತ್ಯೆಗೆ ಕಾರಣವಾಗುವ ಲಿಂಗ ನಿರ್ಧರಣೆಯದುರ್ಬಳಕೆಯನ್ನುತಡೆಗಟ್ಟುತ್ತದೆ. ಇತ್ತೀಚಿನ ದಿನಗಳಲ್ಲಿ ಲಿಂಗ ನಿರ್ಧರಣೆ–ಯ ಮಾಡುವ (ಗರ್ಭಪೂರ್ವ ಮತ್ತು ನಂತರದಲ್ಲಿ) ತಂತ್ರಜ್ಞಾನವು ಸಾಕಷ್ಟು ಮುಂದುವರಿದಿರುವ ಕಾರಣದಿಂದ ಪರಿಣಾಮಕಾರಿ ಅನುಷ್ಟಾನಕ್ಕೆತೊಡಕಾಗುತ್ತಿದ್ದ ಕಾರಣದಿಂದ ಮೂಲ ಕಾಯ್ದೆ ಮತ್ತು ನಿಯಮಾವಳಿಗಳಿಗೆ ತಿದ್ದುಪಡಿ ತಂದು ಪ್ರಸ್ತುತ ಈ ಕಾಯ್ದೆಯನ್ನು "ಗರ್ಭಪೂರ್ವ ಮತ್ತು ಪ್ರಸವ ಪೂರ್ವ ಲಿಂಗಪತ್ತೆ ಮಾಡುವತಂತ್ರದುರ್ಬಳಕೆ ತಡೆಕಾಯ್ದೆ" ಕುರಿತು ಗೌರವಾನ್ವಿತ ಯಾದಗಿರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿಗಳು ಶ್ರೀಯುತ ಮರಿಯಪ್ಪ ಅವರು ಹೇಳಿದರು.

ಯಾದಗಿರಿ ನಗರದ ಸರಕಾರಿ ಪ್ರೌಢ ಶಾಲೆ ಸ್ಟೇಷನ್ ಬಜಾರ ಇಂದು ಶಾಲಾ ಮಕ್ಕಳಿಗೆ ಯಾದಗಿರಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸಂಯುಕ್ತಾಶ್ರಯದಲ್ಲಿ ಶಾಲಾ ಮಕ್ಕಳಿಗೆ, ಬಾಲ್ಯ ವಿವಾಹ ನಿಷೇಧ ಕಾಯ್ದೆ–2006, ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ತಡೆ ಕಾಯ್ದೆ–2012, ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ–2015ರ ಕುರಿತು, ಮಕ್ಕಳಿಗೆ ಕಾನೂನಿನ ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬಾಲನ್ಯಾಯ ಕಾಯ್ದೆ–2015 (ಮಕ್ಕಳ ರಕ್ಷಣೆ ಮತ್ತು ಪಾಲನೆ) ಮತ್ತು ಬಾಲ್ಯ ವಿವಾಹ ನಿಷೇಧ ಕಾಯ್ದೆ–2006ರ ಮತ್ತು ಪೋಕ್ಸೋ–2012ರ ಕಾಯ್ದೆಯ ತಿದ್ದುಪಡಿ ಕಾಯ್ದೆಯ ಪರಿಚಯ. ವಿಶ್ವ ಸಂಸ್ಥೆಯ ಮಕ್ಕಳ ಹಕ್ಕುಗಳ ಒಡಂಬಡಿಕೆ 1989 ಬಗ್ಗೆ, ಮಕ್ಕಳ ಹಕ್ಕುಗಳು ಬಾಲನ್ಯಾಯ ಕಾಯ್ದೆಯ ಹಿನ್ನಲ್ಲೆ, ಸರ್ಕಾರದ ಅನುಮೋದನೆ, ಉದ್ದೇಶಗಳು, ಕಾಯಿದೆಯ ರಚನೆ, ಬಾಲ ನ್ಯಾಯ ಮಂಡಳಿ ಪ್ರಮುಖ ಅಂಶಗಳು, ಬಾಲ ನ್ಯಾಯಮಂಡಳಿಗೆ ಇರುವ ಅಧಿಕಾರ ಮತ್ತು ಆದೇಶ ಬಗ್ಗೆ, ವಿಶೇಷ ಬಾಲ ಪೊಲೀಸ್ ಘಟಕ ಎಸ್.ಜೆ.ಪಿ.ಯು ಬಗ್ಗೆ, ಮಕ್ಕಳಿಗಿರುವ ಪುನರ್ವಸತಿ ಕೇಂದ್ರಗಳ ಬಗ್ಗೆ, ಮಕ್ಕಳ ಕಲ್ಯಾಣ ಸಮಿತಿಗಳು ಎಲ್ಲಿ, ಯಾವಾಗ, ಹೇಗೆ ಕಾರ್ಯನಿರ್ವಹಿಸುತ್ತವೆ, ಮಕ್ಕಳ ಕಲ್ಯಾಣ ಸಮಿತಿಯನ್ನು ಹಾಗೂ ಮಕ್ಕಳ ಸಹಾಯವಾಣಿ–1098ನ್ನು ಸಂಪರ್ಕಿಸುವಲ್ಲಿ ಸಾರ್ವಜನಿಕರು ತಿಳಿದಿರಬೇಕಾದ, ಅನುಸರಿಸಬೇಕಾದ ಅಂಶಗಳ ಬಗ್ಗೆ ತಿಳಿಸಿದರು.

ಮಕ್ಕಳ ಪ್ರಮುಖ ಹಕ್ಕುಗಳ ಸಮೋಹಗಳಾದ : ಜೀವಿಸುವ ಹಕ್ಕು, ರಕ್ಷಣೆ ಹೊಂದುವ ಹಕ್ಕು, ಅಭಿವೃದ್ಧಿ ಹೊಂದುವ ಹಕ್ಕು, ಭಾಗವಹಿಸುವ ಹಕ್ಕು, ಕುರಿತು ತರಬೇತಿ ಶಿಬಿರಾರ್ಥಿಗಳಿಗೆ ಅರ್ಥವಾಗುವ ಸರಳ ಭಾಷೆಯಲ್ಲಿ ವಿವರ ನೀಡಿದರು.

ಪಿಸಿ ಮತ್ತು ಪಿಎನ್‌ಡಿಟಿ ಕಾಯ್ದೆಯ ಕುರಿತು : ಈ ಕಾಯ್ದೆಯು ಗರ್ಭ ಪೂರ್ವ ಮತ್ತು ಪ್ರಸವ ಪೂರ್ವದಲ್ಲಿ ಲಿಂಗಪತ್ತೆ ಮಾಡುವುದನ್ನು ನಿಷೇಧಿಸುತ್ತದೆ. ಪ್ರಸವ ಪೂರ್ವದಲ್ಲಿ ಆರೋಗ್ಯದ ಕಾರಣಗಳಿಗೆ ಅಂದರೆ ವರ್ಣತಂತುಗಳ ವೈಪರಿತ್ಯಗಳು ಅಥವಾ ಇನ್ನಿತರ ಆರೋಗ್ಯ ಸಂಬಂಧಿ ವೈಪರಿತ್ಯಗಳು ಅಥವಾ ಮೆಟಾಬಾಲಿಕ್ ಡಿಸಾರ್ಡರ್ ಅಥವಾ ಕೆಲವು ಅಜನ್ಮ ವಿಕೃತತೆ ಅಥವಾ ಲಿಂಗ ಸಂಬಂಧಿ ವೈಪರೀತ್ಯಗಳಿಗಾಗಿ ಈ ಪರೀಕ್ಷೆಯನ್ನು ಸಿಂಧುಗೊಳಿಸುತ್ತದೆ ಮತ್ತು ಹೆಣ್ಣು ಭ್ರೂಣ ಹತ್ಯೆಗೆಕಾರಣವಾಗುವ ಲಿಂಗ ನಿರ್ಧರಣೆ–ಯ ದುರ್ಬಳಕೆಯನ್ನು ತಡೆಗಟ್ಟುತ್ತದೆ. ಇತ್ತೀಚಿನ ದಿನಗಳಲ್ಲಿ ಲಿಂಗ ನಿರ್ಧರಣೆ–ಯ ಮಾಡುವ (ಗರ್ಭಪೂರ್ವ ಮತ್ತು ನಂತರದಲ್ಲಿ) ತಂತ್ರಜ್ಞಾನವು ಸಾಕಷ್ಟು ಮುಂದುವರಿದಿರುವ ಕಾರಣದಿಂದ ಪರಿಣಾಮಕಾರಿ ಅನುಷ್ಟಾನಕ್ಕೆ ತೆ–ಾಡಕಾಗುತ್ತಿದ್ದ ಕಾರಣದಿಂದ ಮೂಲ ಕಾಯ್ದೆ ಮತ್ತು ನಿಯಮಾವಳಿಗಳಿಗೆ ತಿದ್ದುಪಡಿ ತಂದು ಪ್ರಸ್ತುತ ಈ ಕಾಯ್ದೆಯನ್ನು "ಗರ್ಭಪೂರ್ವ ಮತ್ತು ಪ್ರಸವ ಪೂರ್ವ ಲಿಂಗಪತ್ತೆ ಮಾಡುವತಂತ್ರ ದುರ್ಬಳಕೆ ತಡೆಕಾಯ್ದೆ" ಎಂದು ಕರೆಯಲಾಯಿತು ಎಂದು ಹೇಳಿದರು. ಮಕ್ಕಳ ರಕ್ಷಣಾ ಯೋಜನೆಯ ಮಾಹಿತಿ, POCSO ಕಾಯ್ದೆ–2012, PC-PNDT act, Child line, Child Rights ಮಾಹಿತಿ, ಬಾಲ್ಯ ವಿವಾಹ ನಿಷೇಧ ಕಾಯ್ದೆಯ, ಸಾಮೂಹಿಕ ಬಾಲ್ಯ ವಿವಾಹದ ವಿಧಿ ವಿಧಾನಗಳ, ಕಾರ್ಯಕ್ರಮದ ಪಟ್ಟಿ ಕಾರ್ಯ ವಿಧಾನದ ಬಗ್ಗೆ ಮಾಹಿತಿ ನೀಡಿದರು.

ಯಾದಗಿರಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಶ್ರೀಮತಿ ನಿರ್ಮಲಾ ಸುರಪುರ ಮಾತನಾಡಿ, ಮಕ್ಕಳ ಮೇಲೆ ನಡೆಯುವ ಶೋಷಣೆ ಮತ್ತು ದೌರ್ಜನ್ಯ ತಡೆಯಲು ಬಾಲ ನ್ಯಾಯಕಾಯ್ದೆ ಜಾರಿಗೊಳಿಸಲಾಗಿದೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕೇಂದ್ರ ಪುರಸ್ಕೃತ, ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ಯೋಜನೆಯಡಿ ಮಿಷನ್ ವಾತ್ಸಲ್ಯ ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಕಾರ್ಯನಿರ್ವಸುತ್ತಿದೆ. ಜಿಲ್ಲಾ ಮಕ್ಕಳ ರಕ್ಷಣಾ ಘಟಕವು ಸಂಕಷ್ಟ ಪರಿಸ್ಥಿತಿಯಲ್ಲಿರುವ ಅನಾಥ, ನಿರ್ಗತಿಕ, ದೌರ್ಜನ್ಯಕ್ಕೀಡದ ದುರುಪಯೋಗ ಮಾಡುತ್ತಿರುವ ಪೋಷಕ ಹಾಗೂ ಕುಟುಂಬಗಳಲ್ಲಿರುವ ಮಕ್ಕಳ ಬಾಲಕಾರ್ಮಿಕರ, ಕಾನೂನು ಸಂಘರ್ಷಕ್ಕೆ ಒಳಪಟ್ಟ ಮಕ್ಕಳ ಹಾಗೂ ಇತರ ಎಲ್ಲಾ ತರಹದ ಸಮಸ್ಯೆಗೊಳಪಟ್ಟ ಮಕ್ಕಳ ಪಾಲನೆ, ಪೋಷಣೆ, ರಕ್ಷಣೆ ಹಾಗೂ ಪುನರ್ವಸತಿಗಾಗಿ ಕಾರ್ಯನಿರ್ವಸುತ್ತಿದೆ, ಜಿಲ್ಲೆಯ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳಿಗೆ ಬಾಲ್ಯ ವಿವಾಹ ನಿಷೇಧ ಕಾಯ್ದೆ ಹಾಗೂ ಪೋಕ್ಸೋ ಕಾಯ್ದೆ ಬಾಲ ನ್ಯಾಯ ಕಾಯ್ದೆ–2015ರ ಕುರಿತು ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು. ಯಾವುದೇ ವ್ಯಕ್ತಿಯು ಯಾವುದೇ ತೆರನಾದ ಚಿಕಿತ್ಸಾಲಯಗಳನ್ನು ಅತ್ಯಾಧುನಿಕ ಯಂತ್ರೋಪಕರಣಗಳಾದ ಅಲ್ಟ್ರಾಸೋನೋಗ್ರಫಿ, ಇಮೇಜ್, ಸ್ಕ್ಯಾನರ್ ಅಥವಾ ಭ್ರೂಣದಲ್ಲಿ ಲಿಂಗಪತ್ತೆ ಮಾಡುವ ಯಾವುದೆ ತರನಾದ ಯಂತ್ರೋಪಕರಣಗಳನ್ನು ಸ್ಥಾಪಿಸಬೇಕೆಂದರೆ ಆ ಕೇಂದ್ರ ಕಡ್ಡಯವಾಗಿ ನೋಂದಣಿಯಾಗತಕ್ಕದು. ಕೆಳಕಂಡ ಸಂದರ್ಭಗಳನ್ನು ಹೊರತುಪಡಿಸಿ ಪ್ರಸವ ಪೂರ್ವ ಪರೀಕ್ಷೆಯನ್ನು ನಿಷೇಧಿಸಿದೆ. ವರ್ಣತಂತುಗಳ ವೈಪರೀತ್ಯಗಳು. ಜೆನಿಟಿಕ್ ಮೆಟ್ಬಾಲಿಕ್ ಡಿಸೀಸ್. ಹುಟ್ಟಿನಿಂದ ಬಂದ ಲಿಂಗ ಸಂಬಂಧಿ ಕಾಯಿಲೆಗಳು. ಈ ರೀತಿಯಾದ ಸಕಾರಣಗಳಿಲ್ಲದೇ ಭ್ರೂಣ ಹತ್ಯೆಮಾಡಿದ್ದರೇ ವೈದ್ಯಾಧಿಕಾರಿಗಳಿಗೆ ಮತ್ತು ಆ ಕುಟುಂಬದ ಸದಸ್ಯರಿಗೂ ದಂಡ ಮತ್ತು ಶಿಕ್ಷೆಯನ್ನು ವಿಧಿಸಲಾಗುವುದುಎಂದು ಸವಿವರವಾದ ಮಾಹಿತಿ ನೀಡಿದರು.

ಸಾಂಸ್ಥಿಕ ಸೇವೆಗಳಾದ: ಬಾಲಮಂದಿರ (Juvenile Home), ವೀಕ್ಷಣಾಲಾಯ (Observation Home), ವಸತಿ ಗೃಹ (Shelter Home) ವಿಶೇಷ ಗೃಹ (Special Home), ವಿಶೇಷ ಅಗತ್ಯವುಳ್ಳ ಮಕ್ಕಳಿಗೆ ಸೇವೆ. ಅಸಾಂಸ್ಥಿಕ ಸೇವೆಗಳಾದ ಯೋಜಕತ್ವಯೋಜನೆ, ದತ್ತು ಸೇವೆ, ಪಾಲಾನಾರೈಕೆ (Foster Care), ತೊಟ್ಟಿಲು ಮಗು ಯೋಜನೆ, ಉಪಕಾರಯೋಜನೆ, ವಿಶೇಶ ಪಾಲನಾ ಯೋಜನೆ, ಅನುಪಾಲನಾ ಸೇವೆ (After Care), ಕಾನೂನಿನ ಅರಿವು–ನೆರವು ಬಾಲ ನ್ಯಾಯ ಮಂಡಳಿ : ಬಾಲ ನ್ಯಾಯ ಕಾಯ್ದೆ2015 ಕಲಂ 04 ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ರಾಜ್ಯ ಸರ್ಕಾರ ಪ್ರತಿ ಜಿಲ್ಲೆಗಳಲ್ಲಿ ಬಾಲನ್ಯಾಯ ಮಂಡಳಿಗಳನ್ನು ರಚಿಸಲಾಗಿದೆ. ಬಾಲನ್ಯಾಯ ಮಂಡಳಿಯಲ್ಲಿ ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳು ಅಥವಾ ಮೆಟ್ರೋ ಪಾಲಿಟನ್ ಮ್ಯಾಜಿಸ್ಟ್ರೇಟ್ ಇವರು ಅಧ್ಯಕ್ಷರಾಗಿರುತ್ತಾರೆ. ಹಾಗೂ ಸರ್ಕಾರದಿಂದ ನಾಮನಿರ್ದೇಶಿತಗೊಂಡ ಇಬ್ಬರು ಸಮಾಜ ಕಾರ್ಯಕರ್ತರು ಇರುತ್ತಾರೆ. ಯಾದಗಿರಿ ಜಿಲ್ಲೆಯಲ್ಲಿ ಪ್ರತಿ ಶುಕ್ರವಾರ ಬೆಳಿಗ್ಗೆ 10 ಗಂಟೆಗೆ ಬಾಲಕಿಯರ ಬಾಲ ಮಂದಿರದಲ್ಲಿ ಬಾಲನ್ಯಾಯ ಮಂಡಳಿ ಸಭೆ ನಡೆಯುತ್ತದೆ ಎಂದು ಹೇಳಿದರು.

ಬಾಲ ನ್ಯಾಯ ಕಾಯ್ದೆ 2015 ಪರಿಚ್ಛೇದ 4 ರಿಂದ 28 ಬಾಲನ್ಯಾಯ ಮಂಡಳಿ ಬಗ್ಗೆ : ಮಕ್ಕಳ ನ್ಯಾಯ ಮಂಡಲಿಯರಚನೆ, ಕಲಂ 4. ಕಾನೂನಿ ನೊಡನೆ ಸಂಘರ್ಷದಲ್ಲಿರುವ ಮಕ್ಕಳನ್ನು ವಶಕ್ಕೆ ತೆಗೆದುಕೊಳ್ಳುವುದು ಮತ್ತು ನಿಯಂತ್ರಣ, ಕಲಂ:10,11, ಮಕ್ಕಳ ಕಲ್ಯಾಣ ಸಮಿತಿ (ಸಿಡಬ್ಲೂಸಿ) ಪಾಲನೆ ಮತ್ತುರಕ್ಷಣೆಅವಶ್ಯಕತೆಇರುವ ಮಗುವಿಗೆ ಸಂಬಂಧಪಟ್ಟಂತೆಅಂತಹ ಸಮಿತಿಗಳಿಗೆ ಜೆ.ಜೆ. ಕಾಯ್ದೆ–2015 29ರ ಅಧಿನಿಯಮದಅಡಿಯಲ್ಲಿ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸುವದಕ್ಕಾಗಿ ಮತ್ತು ವಿಧಿಸಲಾದ ಕರ್ತವ್ಯಗಳನ್ನು ನಿರ್ವಹಿಸುವದಕ್ಕಾಗಿ ಸರಕಾರಿರಾಜ್ಯ ಪತ್ರದಲ್ಲಿಅಧಿಸೂಚನೆಯ ಮೂಲಕ ಬಾಲ ನ್ಯಾಯ(ಮಕ್ಕಳ ಪಾಲನೆ ಮತ್ತುರಕ್ಷಣೆ) ತಿದ್ದುಪಡಿಅಧಿನಿಯಮಬಾಲ್ಯ ವಿವಾಹ ನಿಷೇಧಕಾಯ್ದೆ–2006ರ ಅಡಿಯಲ್ಲಿ ಪ್ರತಿಜಿಲ್ಲೆಯಲ್ಲಿಬಾಲ್ಯ ವಿವಾಹ ನಿಷೇಧ ಅಧಿಕಾರಿಗಳನ್ನು ನೇಮಿಸಿ ಜಿಲ್ಲಾ ಮಟ್ಟದಲ್ಲಿತಾಲೂಕ ಮಟ್ಟದಲ್ಲಿ ಮತ್ತುಗ್ರಾಮ ಮಟ್ಟದಲ್ಲಿ ಸಮಿತಿಯನ್ನು ರಚಿಸಲಾಗಿದೆ ಎಂದು ತಿಳಿಸಿದರು.

ಸಮಿತಿಯು ಪಾಲನೆ ಮತ್ತು ರಕ್ಷಣೆ ಅವಶ್ಯಕತೆ ಇರುವ ಅನಾಥ, ನಿರ್ಗತಿಕ, ಏಕ ಪೋಷಕ, ಪರಿತ್ಯಕ್ತ, ಬಿಟ್ಟುಕೊಟ್ಟ ಮಕ್ಕಳನ್ನು ಮಕ್ಕಳ ಕಲ್ಯಾಣ ಸಮಿತಿಯ ಮುಂದೆ ಹಾಜರು ಪಡಿಸಲಾಗುತ್ತದೆ, ಸಮಿತಿಯಲ್ಲಿ ಒಬ್ಬ ಅಧ್ಯಕ್ಷರು ಮತ್ತು 4 ಸದಸ್ಯರುಇರುತ್ತಾರೆ. ಇವರಲಿ ಒಬ್ಬರು ಮಹಿಳೆ ಯರಾಗಿರುತ್ತಾರೆ ಮತ್ತು ಒಬ್ಬರು ಮಕ್ಕಳಿಗೆ ಸಂಬಂಧಪಟ್ಟ ವಿಷಯಗಳಲ್ಲಿ ಪರಿಣಿತಿ ಹೊಂದಿದವರಾಗಿರುತ್ತಾರೆ.

ಮಕ್ಕಳ ಕಲ್ಯಾಣ ಸಮಿತಿಯು ಮಕ್ಕಳ ಪಾಲನೆ ರಕ್ಷಣೆಉಪಚಾರ, ಅಭಿವೃದ್ಧಿ ಮತ್ತು ಪುನರ ವಸತಿಗೆ ಸಂಬಂಧಿಸಿದ ಮೂಲಭೂತ ಅಗತ್ಯತೆಗಳನ್ನು ಒದಗಿಸುವ ಮತ್ತು ಮಾನವ ಹಕ್ಕುಗಳ ರಕ್ಷಣೆಗೆ ಸಂಬಂಧಿಸಿದ ಪ್ರಕರಣ ವಿಲೇ ಮಾಡುವ ಅಧಿಕಾರ ಹೊಂದಿರುತ್ತಾರೆ. ಯಾದಗಿರಿ ಜಿಲ್ಲೆಯಲ್ಲಿ ಪ್ರತಿ ತಿಂಗಳು 20 ಸಭೆಗಳನ್ನು ಬೆಳಿಗ್ಗೆ 10 ಗಂಟೆಗೆ ಬಾಲಕಿಯರ, ಬಾಲಕರ ಬಾಲ ಮಂದಿರದಲ್ಲಿ ಮಕ್ಕಳ ಕಲ್ಯಾಣ ಸಮಿತಿ ಸಭೆ ನಡೆಯುತ್ತದೆ ಎಂದು ಹೇಳಿದರು.

ಮಕ್ಕಳ ರಕ್ಷಣೆಯಲ್ಲಿ ಮಕ್ಕಳ ಕಲ್ಯಾಣ ಸಮಿತಿ ಮತ್ತು ಬಾಲನ್ಯಾಯ ಮಂಡಳಿಯ, ಯಾವ ರೀತಿ ಪಾತ್ರ ನಿರ್ವಹಿಸುತ್ತಿವೆ ಎನ್ನುವದು ತಿಳಿಸಿದರು. ನಂತರ ಮಕ್ಕಳ ಹಕ್ಕುಗಳು ನಡೆದು ಬಂದದಾರಿಯನ್ನು ವಿವರಿಸುತ್ತಾ, ಭಾರತದಲ್ಲಿ ಮಕ್ಕಳ ಸ್ಥಿತಿಗತಿ ಅದರಲ್ಲಿ ಎಷ್ಟು ಮಕ್ಕಳ ಸಂಕಷ್ಟದಲ್ಲಿ ಸಿಲುಕಿದ್ದಾರೆ, ದೇಶದಲ್ಲೆ ಎಷ್ಟು ಲಿಂಗ ಅನುಪಾತ ಮತ್ತು ತಾರತಮ್ಯ ಮತ್ತು ಮರಣ ಹೊಂದುತ್ತಿವೆ ಎಂದರು.

ಯಾದಗಿರಿ ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕರ ಕಛೇರಿ ವಿಷಯ ನಿರೀಕ್ಷಕರು ಹನಮಂತ ಎಸ್.ಐ, ಮಾತನಾಡಿದರು, ಬಾಲ್ಯ ವಿವಾಹ ಕಾಯ್ದೆ, ಬಾಲ ಕಾರ್ಮಿಕ ನಿಷೇಧ ಕಾಯ್ದೆ ಮತ್ತು ಶಿಕ್ಷಣದ ಮಹತ್ವ ಹಾಗೂ ಮಕ್ಕಳ ಹಕ್ಕಗಳ ಕಾಯ್ದೆ, ಬಾಲ್ಯವಿವಾಹ ನಿಷೇಧಕಾಯ್ದೆ–2006 ಕುರಿತು, ಬಾಲ್ಯವಿವಾಹ ಎಂದರೇನು, ಬಾಲ್ಯ ವಿವಾಹ ನಡೆಯುವ ವಿಧಗಳು, ಬಾಲ್ಯ ವಿವಾಹಕ್ಕೆ ಕಾರಣಗಳು, ಬಾಲ್ಯ ವಿವಾಹದಿಂದಾಗುವ ದುಷ್ಪರಿಣಾಮಗಳು, ಬಾಲ್ಯವಿವಾಹದಿಂದ ಮುಂದಿನ ಪೀಳಿಗೆಯು ಎದುರಿಸುವಂತಹ ತೊಂದರೆಗಳ ಬಗ್ಗೆ ವಿವರಿಸಿದರು ನಂತರ ಬಾಲ್ಯವಿವಾಹದ ನಿಷೇಧ ಕಾಯ್ದೆ–2006 ರಕಾಯ್ದೆಯಲ್ಲಿ ಬಾಲ್ಯವಿವಾಹ ಪ್ರಕರಣದಲ್ಲಿ ಯಾರು ಯಾರು ತಪ್ಪಿತಸ್ಥರು, ಬಾಲ್ಯವಿವಾಹದ ನಿಷೇಧಾದಿಕಾರಿಗಳು ಯಾರುಯಾರು ಹಾಗೂ ಅವರ ಪಾತ್ರದ ಬಗ್ಗೆ ಸಂಕ್ಷಿಪ್ತವಾಗಿ ಮನದಟ್ಟಾಗುವಂತೆ ವಿವರಿಸಿದರು. ಬಾಲ್ಯ ವಿವಾಹನಿಷೇದಕಾಯ್ದೆಯಲ್ಲಿನ್ಯಾಯಾಲಯದ ಮುಂದೆ ಬಂದಂತಹ ಪ್ರಕರಣಗಳನ್ನು ಯಾವರೀತಿ ಪರಿಹರಿಸಬೇಕು, ಅದಕ್ಕೆ ಪರಿಹಾರ, ಜೀವನಾಂಶ ಪಡೆಯಲು ಅರ್ಹರಾದ ವ್ಯಕ್ತಿಗಳು, ಯಾರನ್ನು ಜವಬ್ದಾರನ್ನಾಗಿಮಾಡಬಹುದು, ಬಾಲ್ಯವಿವಾಹ ನಿಯಂತ್ರಣ ಕುರಿತು ಮತ್ತು ಅವಶ್ಯಕ ದಾಖಲಾತಿಗಳನ್ನು ಪರಿಶೀಲಿಸುವುದು, ಬಾಲ್ಯವಿವಾಹ ನಿಷೇದ ಕಾಯ್ದೆಯಂತೆ ತಪ್ಪಿತಸ್ಥರ ವಿರುದ್ದ ಯಾವ ರೀತಿಯಲ್ಲಿ ಶಿಕ್ಷೆ ಹಾಗೂ ದಂಡದ ಬಗ್ಗೆ ಕಾಯ್ದೆಯಲ್ಲಿ ವಿಧಿಸಬಹುದಾಗಿದೆ ಎಂದು ತಿಳಿಸಿದರು.

ಯಾದಗಿರಿ ಸರಕಾರಿ ಪ್ರೌಢ ಶಾಲೆ ಸ್ಟೇಷನ್ ಬಜಾರ ಪ್ರಭಾರಿ ಮುಖ್ಯಗುರುಗಳು ಶ್ರೀಮತಿ ಜಯಶ್ರೀ ಅವರು ಮಾತನಾಡಿ, ಬಾಲ ಕಾರ್ಮಿಕ ನಿಷೇಧ ಕಾಯ್ದೆ ಕುರಿತು, ಬಾಲ ಕಾರ್ಮಿಕ ಎಂದರೇನು, ಬಾಲ ಕಾರ್ಮಿಕ ವಿಧಗಳು, ಬಾಲ ಕಾರ್ಮಿಕ ಕಾರಣಗಳು, ಬಾಲ ಕಾರ್ಮಿಕದಿಂದಾಗುವ ದುಷ್ಪರಿಣಾಮಗಳು, ಬಾಲ ಕಾರ್ಮಿಕರನ್ನು ದುಡಿಸಿಕೊಳ್ಳುವ ಮಾಲಿಕರಿಗೆ ವಿಧಿಸುವದಂಡ ಮತ್ತು ಶಿಕ್ಷೆಯನ್ನು ಕುರಿತು ಮಾಹಿತಿ ನೀಡಿದರು


ಈ ಸಂದರ್ಭದಲ್ಲಿ, ಶಾಲಾ ಮಕ್ಕಳು ಸೇರಿ ಒಟ್ಟು 80 ಜನ ಮಕ್ಕಳು ಭಾಗವಹಿಸಿದ್ದರು. ಇನ್ನಿತರರು ಉಪಸ್ಥಿತರಿದ್ದರು. ಯಾದಗಿರಿ ಜಿಲ್ಲಾ ಮ್ಕಕಳ ರಕ್ಷಣಾ ಘಟಕ (ಸಾಂಸ್ಥೀಕ) ರಕ್ಷಣಾಧಿಕಾರಿ ಗೋವಿಂದ ರಾಠೋಡ್ ಅರಿವು ಕಾರ್ಯಕ್ರಮದ ವಂದನಾರ್ಪಣೆ ನಿರೂಪಿಸಿದರು.

## ಶ್ರೀಶಿವಸಂಗಮೇಶ್ವರ ಶಿವಾಚಾರ್ಯರ ಪುಣ್ಯಸ್ಮರಣೆ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಕುಕನೂರ ತಾಲೂಕಿನ ಬೆದವಟ್ಟಿಗ್ರಾಮದ ಶ್ರೀಶೈಲ ಪೀಠದ ಶ್ರೀಮಠದ ಪೂಜ್ಯರಾದ ಶ್ರೀ ಶಿವ ಸಂಗಮೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು 28 ಮೇ 2025 ರಂದು ಲಿಂಗೈಕ್ಯರಾಗಿದ್ದು ಅವರ ಪ್ರಥಮ ಪುಣ್ಯಸ್ಮರಣೋತ್ಸವ ಕಾರ್ಯಕ್ರಮವನ್ನು ಜೂನ್ 15 ರಂದು ರವಿವಾರ ಬೆಳಿಗ್ಗೆ ಕುಕನೂರು ಪಟ್ಟಣದ ಮುಂಡರಗಿ ಶ್ರೀಅನ್ನದಾನೇಶ್ವರಶಾಖಾಮಠದಲ್ಲಿ ಕೊಪ್ಪಳ ಜಿಲ್ಲೆಯ ಮಠಾಧೀಶರ ಒಕ್ಕೂಟದ ವತಿಯಿಂದ ಆಯೋಜಿಸಲಾಗಿದೆ ಎಂದು ಪಟ್ಟಣದ ಹಿರಿಯರಾದ ವೀರಯ್ಯ ತೋಂಟದಾರ್ಯಮಠ ಹೇಳಿದರು.

ಪಟ್ಟಣದ ಮುಂಡರಗಿ ಶ್ರೀ ಅನ್ನದಾನೇಶ್ವರ ಮಠದಲ್ಲಿ ವರದಿಗಾರರೊಂದಿಗೆ ವೀರಯ್ಯ ತೋಟದಾರ್ಯಮಠ ಮಾತನಾಡುತ್ತಾ ಶ್ರೀಗಳು ಈ ಭಾಗದ ನಡೆದಾಡುವ ದೇವರಾಗಿದ್ದು, ಅನೇಕ ಕಡೆಗಳಲ್ಲಿ ಧರ್ಮ ಜಾಗೃತಿ ಕಾರ್ಯವನ್ನು ಮಾಡಿದ ಮಹಾನ್ ಪುರುಷರಾಗಿದ್ದಾರೆ ಭಕ್ತರನ್ನು ಆಧ್ಯಾತ್ಮದ ಕಡೆಗೆ ಕ–



ರೆದೊಯ್ಯುತ್ತಿದ್ದ ಅವರ ಮಾರ್ಗಗಳು ಅನನ್ಯವಾಗಿದ್ದು ಎಲ್ಲಾ ವರ್ಗದ ಭಕ್ತರನ್ನು ಸಮಾನವಾಗಿ ಕಾಣುತ್ತಾ ಧಾರ್ಮಿಕ ಕ್ಷೇತ್ರ ಬೆಳವಣಿಗೆಗೆ ಪ್ರಮುಖ ಪಾತ್ರ ವಹಿಸುತ್ತಿದ್ದರು. ಶ್ರೀಗಳ ಶಿವ ಗಣರಾಧನೆಯನ್ನು ಜೂನ್ ಒಂದರಂದು ಶ್ರೀಶೈಲ ಜಗದ್ಗುರುಗಳ ಉಪಸ್ಥಿತಿಯಲ್ಲಿ ನೆರವೇರಿಸಿದ್ದು ಈಗ ಶ್ರೀ ಶಿವಸಂಗಮೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳ ಪ್ರಥಮ ಪುಣ್ಯ ಸ್ಮರಣೋತ್ಸವವನ್ನು ಜೂನ್ 15ರಂದು ಕುಕನೂರು ಪಟ್ಟಣದ ಅನ್ನದಾನೇಶ್ವರ ಶಾಖಾಮಠದಲ್ಲಿ ಆಯೋಜಿಸಲಾಗಿದ್ದು ಅಂದು ಬೆಳಿಗ್ಗೆ ಎಂಟು ಗಂಟೆಗೆ ಪ್ರಮುಖ ಬೀದಿಗಳಲ್ಲಿ ಪೂಜ್ಯರ ಭಾವಚಿತ್ರ ಮೆರವಣಿಗೆ ನಂತರ ಧರ್ಮಸಭೆ ಹಾಗೂ ಅನ್ನ ಸಂತರ್ಪಣೆ ಸೇರಿದಂತೆ ಅನೇಕ ಧಾರ್ಮಿಕ ಕಾರ್ಯಕ್ರಮಗಳು ಜರುಗಲಿದ್ದು ಭಕ್ತರು ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಪುನೀತರಾಗಬೇಕು ಎಂದು ಮಠಾಧೀಶರ ಒಕ್ಕೂಟದಿಂದ ಅಪ್ಪಣೆ ಮಾಡಲಾಗಿದ್ದು ಪ್ರತಿಯೊಬ್ಬ ಭಕ್ತ ವರ್ಗದವರು ಈ ಧಾರ್ಮಿಕ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬೇಕು ಎಂದು ತಿಳಿಸಿದರು.

## ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿದ್ದ ವ್ಯಕ್ತಿ ಬಂಧನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.9–ನಗರದ ದೇವಾನಗರ ಕ್ರಾಸ್ ಹತ್ತಿರ ಅಕ್ರಮವಾಗಿ ಮದ್ಯ ಮಾರಾಟ ಮಾಡಲಾಗುತ್ತಿದೆ ಎಂಬ ಮಾಹಿತಿ ಮೇಲೆ ಸ್ಟೇಷನ್ ಬಜಾರ್ ಪೊಲೀಸ್ ಠಾಣೆ–ಯ ಎಎಸ್‌ಐ ಅನೀಲಕುಮಾರ



ಹಾಗೂ ಸಿಬ್ಬಂದಿಗಳಾದ ಪ್ರಭಾಕರ, ಯಲ್ಲಪ್ಪ ಅವರು ದಾಳಿ ನಡೆಸಿ ಬನಶಂಕರಿ ನಗರದ ಕರಬಸಯ್ಯ ಗುತ್ತೇದಾರ (54) ಎಂಬಾತನನ್ನು ಬಂಧಿಸಿ 2 ಸಾವಿರ ರೂ.ಮೌಲ್ಯದ ಮದ್ಯ ಜಪ್ತಿ ಮಾಡಿದ್ದಾರೆ. ಸ್ಟೇಷನ್ ಬಜಾರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಬಳ್ಳಾರಿಯಲ್ಲಿ 'ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ'; ಗಮನ ಸೆಳೆದ ಜಾಗೃತಿ ಜಾಥಾ

## ಬಾಲಕಾರ್ಮಿಕ ಪದ್ಧತಿ ತೊಡೆದಾಕಲು ಒಗ್ಗೂಡಬೇಕು: ನ್ಯಾ.ರಾಜೇಶ್ ಎನ್.ಹೊಸಮನೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.12–ಸಮಾಜದಲ್ಲಿ ಬಾಲಕಾರ್ಮಿಕ ಪದ್ಧತಿಯನ್ನು ಸಂಪೂರ್ಣವಾಗಿ ತೊಡೆದುಹಾಕಲು ಅಧಿಕಾರಿಗಳು, ಪೋಷಕರು ಹಾಗೂ ಇತರೆ ಸಂಘ–ಸಂಸ್ಥೆಗಳು ಒಗ್ಗೂಡಬೇಕಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಹೇಳಿದರು.




ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕಾರ್ಮಿಕ ಇಲಾಖೆ, ಪೊಲೀಸ್ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನೆ, ಜಿಲ್ಲಾ ವಕೀಲರ ಸಂಘ, ವಿವಿಧ ಇಲಾಖೆಗಳು ಮತ್ತು ಇತರೆ ಸಂಘ–ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಗುರುವಾರ ಏರ್ಪಡಿಸಿದ್ದ 'ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ದೇಶದಲ್ಲಿ ಬಾಲಕಾರ್ಮಿಕ ಪದ್ಧತಿ ನಿಷೇಧಿಸಲಾಗಿದ್ದು, ಇಂದಿಗೂ ಬಡತನವೆನ್ನುವುದು ಅನೇಕ ಮಕ್ಕಳನ್ನು ದುಡಿಯುವಂತೆ ಮಾಡುತ್ತಿದೆ. ಬಡತನ, ಪೋಷಕರ ನಿರ್ಲಕ್ಷದ ಕಾರಣ ವಿಶ್ವದಾದ್ಯಂತ 16 ಕೋಟಿ ಮಕ್ಕಳು ಬಾಲ ಕಾರ್ಮಿಕರಾಗಿ ದುಡಿಯುತ್ತಲೇ ಇದ್ದಾರೆ. ಈ ಅನಿಷ್ಠ ಪದ್ಧತಿಯನ್ನು ಹೋಗಲಾಡಿಸಲು ಮಕ್ಕಳಿಗೆ ಶಿಕ್ಷಣ ನೀಡಬೇಕು ಎಂದು ತಿಳಿಸಿದರು.

ಮಕ್ಕಳ ಬಾಲ್ಯವನ್ನು ಕಸಿದುಕೊಳ್ಳುತ್ತಿರುವ ಬಾಲಕಾರ್ಮಿಕತನವನ್ನು ತೊಡೆದು ಹಾಕಲು ಕೇವಲ ಸರ್ಕಾರಗಳಿಂದ ಮಾತ್ರ ಸಾಧ್ಯವಾಗದು. ಇದ–ಕ್ಕೆ ಅಧಿಕಾರಿಗಳು, ಪೋಷಕರು, ಸಾರ್ವಜನಿಕರು ಹಾಗೂ ಇತರೆ ಸಂಘ–ಸಂಸ್ಥೆಗಳು ಒಗ್ಗೂಡಿ ಕಾರ್ಯಾಚರಣೆ ನಡೆಸಬೇಕಿದೆ ಎಂದು ಅವರು ಅಭಿಪ್ರಾಯಪಟ್ಟರು.

ಪ್ರತಿಯೊಬ್ಬರೂ ಶಿಕ್ಷಣಕ್ಕೆ ಮಹತ್ವ ನೀಡಬೇಕು. ಶಿಕ್ಷಣದಿಂದಲೇ ಮಾತ್ರ ಬಡತನ ನಿರ್ಮೂಲನೆ ಮಾಡಲು ಸಾಧ್ಯ. 14 ವರ್ಷದೊಳಗಿನ ಮಕ್ಕಳಿಗೆ ಉಚಿತ ಮತ್ತು ಕಡ್ಡಾಯ ಶಿಕ್ಷಣ ಇದೆ. ಸರ್ಕಾರಗಳು ಶಿಕ್ಷಣ–ಕ್ಕೆ ಒತ್ತು ಮತ್ತು ಪ್ರೋತ್ಸಾಹ ನೀಡುತ್ತಿದೆ. ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಪ್ರಸ್ತುತದಲ್ಲಿ ಮೊಬೈಲ್ ಸಾಧನವು ಮಕ್ಕಳ ಬೆಳವಣಿಗೆಗೆ ಅಡ್ಡಿಪಡಿಸುತ್ತಿದೆ. ಉತ್ತಮ ಮಾಹಿತಿ ಹೊಂದಲು ಬಳಸಿಕೊಂಡು ಗುಣಮಟ್ಟದ ಶಿಕ್ಷಣ ಪಡೆಯುವ ಮೂಲಕ ಸಮಾಜದ ಸತ್ಪ್ರಜೆಯಾಗಿ ಹೊರಹೊಮ್ಮಬೇಕು ಎಂದು ನ್ಯಾಯಾಧೀಶರು ಹುರಿದುಂಬಿಸಿದರು.

ವಿದ್ಯಾರ್ಥಿಗಳು ತಮ್ಮ ಸುತ್ತ–ಮುತ್ತಲಿನ ನೆರೆಹೊರೆಯ ನಿಮ್ಮ ಸ್ನೇಹಿತರು ಹಾಗೂ ಬೇರೆ ಯಾರಾದರೂ ಬಾಲಕಾರ್ಮಿಕ ಪದ್ಧತಿಯಲ್ಲಿ ತೊಡಗಿಕೊಂಡಿದ್ದಲ್ಲಿ ಜಾಗೃತಿ ಮೂಡಿಸಬೇಕು ಎಂದು ಕಿವಿಮಾತು ಹೇಳಿದರು.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, 'ಪ್ರಗತಿ ಸ್ಪಷ್ಟವಾಗಿದ್ದು, ಆದರೆ ಇನ್ನೂ ಹೆಚ್ಚಿನದನ್ನು ಮಾಡಬೇಕಿದೆ: ಪ್ರಯತ್ನಗಳನ್ನು ವೇಗಗೊಳಿಸೋಣ' ಎಂಬ ಈ ವರ್ಷದ ಘೋಷವಾಕ್ಯದಂತೆ ರಾಷ್ಟ್ರ ಕಟ್ಟುವಲ್ಲಿ ಮಕ್ಕಳ ಪಾತ್ರ ಪ್ರಮುಖವಾಗಿದ್ದು, ಅಂತಹ ಮಕ್ಕಳು ಬಾಲಕಾರ್ಮಿಕ ಪದ್ಧತಿಯಲ್ಲಿ ತೊಡಗಿಸಿಕೊಂಡು ಶಿಕ್ಷಣದಿಂದ ವಂಚಿತರಾಗಿದ್ದಲ್ಲಿ ಕಾರ್ಮಿಕ, ಪೊಲೀಸ್ ಅಧಿಕಾರಿಗಳಿಗೆ ಮಾಹಿತಿ ನೀಡಬೇಕು ಎಂದು ಹೇಳಿದರು.

ಇದಕ್ಕೂ ಮುನ್ನ ಅಪರ ಜಿಲ್ಲಾಧಿಕಾರಿಯವರು 'ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ' ಅಂಗವಾಗಿ ಪ್ರತಿಜ್ಞಾವಿಧಿ ಭೋದಿಸಿದರು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ನವೀನ್ ಕುಮಾರ್ ಅವರು ಮಾತನಾಡಿ, ಹದಿನಾಲ್ಕು ವರ್ಷದೊಳಗಿನ ವಯಸ್ಸಿನ ಮಕ್ಕಳನ್ನು ದುಡಿಸಿಕೊಳ್ಳುವುದು ಕಾನೂನು ಬಾಹಿರ. ತಮ್ಮ ಸುತ್ತ–ಮುತ್ತಲಿನಲ್ಲಿ ದುಡಿಯುವ ಮಕ್ಕಳು, ಕಿಶೋರರು ಕಂಡುಬಂದಲ್ಲಿ ಸಹಾಯವಾಣಿ ಸಂಖ್ಯೆ 1098 ಅಥವಾ 112 ಗೆ ಕರೆಮಾಡಿ ಮಾಹಿತಿ ನೀಡಬಹುದು ಎಂದು ಹೇಳಿದರು.

ಸಂಪನ್ಮೂಲ ವ್ಯಕ್ತಿಯಾಗಿ ವಕೀಲರು ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಮಾಜಿ ಸದಸ್ಯರಾದ ತ್ರಿವೇಣಿ ಪತ್ತಾರ್ ಅವರು ಭಾಗವಹಿಸಿ 'ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ' ಕುರಿತು ವಿಶೇಷ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಚಿಗುರು ಕಲಾ ತಂಡದ ಹುಲುಗಪ್ಪ ಅವರಿಂದ 'ಶಾಲೆಯಿಂದ ಹೊರಗುಳಿದ ಮಗು'ವಿನ ಕುರಿತು ಗಾಯನ ಪ್ರಸ್ತುತ ಪಡಿಸಿದರು.

ಈ ಸಂದರ್ಭದಲ್ಲಿ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರಾದ ವಿಜಯಲಕ್ಷ್ಮೀ ಮೈದೂರು, ಬಳ್ಳಾರಿ ಉಪ ವಿಭಾಗ ಕಾರ್ಮಿಕ ಅಧಿಕಾರಿ ಸಿದ್ದಪ್ಪ ಜಿ.ಖೈನೂರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವಿಜಯ್ ಕುಮಾರ್, ಅಧಿಕಾರಿ ರಾಮಕೃಷ್ಣ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಎಳೆನಾಗಪ್ಪ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಪಿ.ರಾಮಬ್ರಹ್ಮಂ, ಕಾರ್ಯದರ್ಶಿ ಸಿ.ಎ ಗುರುಬಸವರಾಜ್, ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ಎ.ಮೌನೇಶ್, ಕಾರ್ಮಿಕ ನಿರೀಕ್ಷಕರಾದ ಪರಶುರಾಮ್, ರಮೇಶ್ ಸೇರಿದಂತೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು, ಅಂಗನವಾಡಿ ಕಾರ್ಯಕರ್ತೆಯರು ಮತ್ತು ವಿವಿಧ ಶಾಲಾ–ಕಾಲೇಜು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

*ಜಾಗೃತಿ ಜಾಥ:*

ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಜಾಥಾವು ಜನಸಾಮಾನ್ಯರಲ್ಲಿ ಅರಿವು ಮೂಡಿಸಲು ವಿವಿಧ ಘೋಷಣೆಗಳ ಫಲಕಗಳನ್ನು ಹಿಡಿದು ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿದ್ದು ವಿಶೇಷವಾಗಿತ್ತು.

ಜಾಥಾವು ಹಳೆ ಜಿಲ್ಲಾಧಿಕಾರಿಗಳ ಕಚೇರಿ ಆವರಣದಿಂದ ಆರಂಭವಾಗಿ ಗಡಿಗಿ ಚೆನ್ನಪ್ಪ ವೃತ್ತ–ಬೆಂಗಳೂರು ರಸ್ತೆ–ತೇರು ಬೀದಿ ಮೂಲಕ ಹೆಚ್.ಆರ್. ಗವಿಯಪ್ಪ ವೃತ್ತ ಮಾರ್ಗವಾಗಿ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದವರೆಗೆ ತಲುಪಿ ಯಶಸ್ವಿಗೊಂಡಿತು.

# ತೋಟಗಾರಿಕೆ ಇಲಾಖೆ: ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

ಬಳ್ಳಾರಿ,ಜೂ.12–ತೋಟಗಾರಿಕೆ ಇಲಾಖೆ ವತಿಯಿಂದ 2025–26 ನೇ ಸಾಲಿನ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ವಿವಿಧ ಘಟಕಗಳಿಗೆ ಸಹಾಯಧನ ನೀಡಲು ಉದ್ದೇಶಿಸಲಾಗಿದ್ದು, ಅರ್ಹ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ.

ಮಣ್ಣು ಮತ್ತು ನೀರಿನ ಸಂರಕ್ಷಣೆ ಕಾರ್ಯಕ್ರಮಗಳಾದ ಬದು ನಿರ್ಮಾಣ, ಕೃಷಿಹೊಂಡ, ಕಾಮಗಾರಿಗಳಿಗೆ ಸಹಾಯಧನ. ತೋಟಗಾರಿಕೆ ಬೆಳೆಗಳ ಪ್ರದೇಶ ವಿಸ್ತರಣೆ ಕಾರ್ಯಕ್ರಮದಡಿ ಸಪೋಟ, ದಾಳಿಂಬೆ, ಪೇರಲ, ಮಾವು, ಡ್ರ್ಯಾಯಗನ್ ಹಣ್ಣು, ತೆಂಗು, ತಾಳೆ ಹಾಗೂ ಇತರೆ ತೋಟಗಾರಿಕೆ ಬೆಳೆಗಳನ್ನು ಬೆಳೆಯಲು ಸಹಾಯಧನ ನೀಡಲಾಗುತ್ತದೆ.

ಈ ಯೋಜನೆಯಡಿ ಕೂಲಿ ಮತ್ತು ಸಾಮಾಗ್ರಿ ವೆಚ್ಚವನ್ನು ಆನ್‌ಲೈನ್ ಮೂಲಕ ಪಾವತಿಸುವ ವ್ಯವಸ್ಥೆಯಿದ್ದು, ಆಸಕ್ತ ರೈತರು ಅಗತ್ಯ ದಾಖಲಾತಿಗಳಾದ ಪಹಣಿ, ಆಧಾರ್ ಕಾರ್ಡ್, ಉದ್ಯೋಗ ಚೀಟಿ, ಬಿಪಿಎಲ್ ಪಡಿತರ ಚೀಟಿ ಜೆರಾಕ್ಸ್ ಪ್ರತಿ ಅಥವಾ ಎಸ್.ಸಿ ಮತ್ತು ಎಸ್.ಟಿ ಜಾತಿ ಪ್ರಮಾಣ ಪ್ರತಿ ಜೆರಾಕ್ಸ್ ಅಥವಾ ಸಣ್ಣ ರೈತರ ಪ್ರಮಾಣ ಪತ್ರ ಹಾಗೂ ಇತರೆ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಹೋಬಳಿಯ ಸಹಾಯಕ ತೋಟಗಾರಿಕೆ ಅಧಿಕಾರಿ ಅಥವಾ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇ–ರಿಯ ದೂ.08392–278177 ಗೆ ಸಂಪರ್ಕಿಸಬಹುದು ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಕೋಶಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 12: ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸ್ಥಾಪಿಸಿರುವ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಕೋಶದಲ್ಲಿ ಕಾರ್ಯನಿರ್ವಹಿಸಲು ಗುತ್ತಿಗೆ ಆಧಾರದ ಮೇಲೆ ನಿವೃತ್ತ ಸರಕಾರಿ ಅಧಿಕಾರಿಗಳನ್ನು ನೇಮಕ್ಕೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ತಿಳಿಸಿದ್ದಾರೆ.

### ಶಹಾಪುರ ಸಾಮಾಜಿಕ ಅರಣ್ಯದಲ್ಲಿ ಭ್ರಷ್ಟಾಚಾರ ಆರೋಪ:

# ತನಿಖೆ ಆರಂಭ, ಸ್ಥಳ ಪರಿಶೀಲನೆ ವೇಳೆ ಲೋಪಗಳು ಬಹಿರಂಗ



(ವರದಿ:ಮಲ್ಲಿಕಾರ್ಜುನ ಎಂ)

ಮಲ್ಲಮ್ಮ ನುಡಿ ವಾರ್ತೆ

ಶಹಾಪುರ ಜೂನ್ 12: ಶಹಾಪುರದ ಸಾಮಾಜಿಕ ಅರಣ್ಯ ವಲಯ ಕಚೇರಿಯಲ್ಲಿ ನಡೆದಿರುವ ಬೃಹತ್ ಪ್ರಮಾಣದ ಭ್ರಷ್ಟಾಚಾರದ ಆರೋಪಗಳ ಕುರಿತು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ನೇಮಿಸಿದ ವಿಚಾರಣಾಧಿಕಾರಿಯಿಂದ ತನಿಖೆ ಆರಂಭಗೊಂಡಿದೆ. ಸರ್ ಎಂ. ವಿಶ್ವೇಶ್ವರಯ್ಯ ಕಟ್ಟಡ ಕಾರ್ಮಿಕರ ಸಂಘವು ಮಾಜಿ ಅರಣ್ಯ ಅಧಿಕಾರಿಗಳಾದ ಜಯಶ್ರೀ, ಉಪಾಳಪ್ಪ, ಸಂಜೀವ್ ಪವಾರ್ ಹಾಗೂ ಅರಣ್ಯ ರಕ್ಷಕ ಸಿದ್ರಾಮ್ ವಿರುದ್ಧ ಈ ಹಿಂದೆ ಭ್ರಷ್ಟಾಚಾರದ ಆರೋಪಗಳನ್ನು ಮಾಡಿ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನೆ ನಡೆಸಿತ್ತು.

ನಿನ್ನೆ ಶಹಾಪುರಕ್ಕೆ ಆಗಮಿಸಿದ ತನಿಖಾಧಿಕಾರಿಯು ಸಾಮಾಜಿಕ ಅರಣ್ಯಾಧಿಕಾರಿಗಳ ಕಾರ್ಯಾಲಯದಲ್ಲಿ ದೂರುದಾರರ ಸಮ್ಮುಖದಲ್ಲಿ ಕಡತಗಳ ಪರಿಶೀಲನೆ ನಡೆಸಿದರು. ಈ ವೇಳೆ, ಸಂಘಟನೆಯು ಆರೋಪಿಸಿದ್ದ ಹಲವು ಅಂಶಗಳು ಕಡತ ಪರಿಶೀಲನೆಯಿಂದ ದೃಢಪಟ್ಟಿವೆ ಎಂದು ಮೂಲಗಳು ತಿಳಿಸಿವೆ.

**ಸ್ಥಳ ಪರಿಶೀಲನೆ: ಗಿಡಗಳು ಒಣಗಿವೆ, ನಿಯಮಗಳ ಉಲ್ಲಂಘನೆ!**

ಕಡತ ಪರಿಶೀಲನೆಯ ನಂತರ, ಕಾಮಗಾರಿಗಳ ಸ್ಥಳ ಪರಿಶೀಲನೆಗೆ ದೂರುದಾರರು, ಅರಣ್ಯ ಅಧಿಕಾರಿ ಸಂಜೀವ್ ಪವಾರ್ ಮತ್ತು ಸಿಬ್ಬಂದಿಯೊಂದಿಗೆ ತನಿಖಾ ತಂಡ ತೆರಳಿತು.

ಹತ್ತಿಗೂಡೂರು ಮತ್ತು ಶಂಕರಬಂಡಿ ಅರಣ್ಯ ವಲಯಗಳಲ್ಲಿನ ಕಾಮಗಾರಿಗಳನ್ನು ಪರಿಶೀಲಿಸಲಾಯಿತು. ಪರಿಶೀಲನೆ ವೇಳೆ, ಆರೋಪದಂತೆ ಹಲವು ಗಿಡಗಳು ಒಣಗಿರುವುದು, ಅರಣ್ಯ ಇಲಾಖೆಯ ನಿಯಮಗಳ ಉಲ್ಲಂಘನೆ ಮತ್ತು ಮರಗಳ ಸಂರಕ್ಷಣೆ ಹಾಗೂ ನಿರ್ವಹಣೆಯಲ್ಲಿ ಸ್ಪಷ್ಟ ಲೋಪಗಳು ಕಂಡುಬಂದಿವೆ.

ತನಿಖಾಧಿಕಾರಿ–ದೂರುದಾರರ ನಡುವೆ ವಾಗ್ವಾದ ತನಿಖಾ ವಿಧಾನಕ್ಕೆ ಸಂಬಂಧಿಸಿದಂತೆ, ದೂರುದಾರರು ಮತ್ತು ತನಿಖಾಧಿಕಾರಿಗಳ ನಡುವೆ ವಾಗ್ವಾದವೂ ನಡೆಯಿತು. ಈ ಸಂದರ್ಭದಲ್ಲಿ ಸರ್ ಎಂ. ವಿಶ್ವೇಶ್ವರಯ್ಯ ಕಟ್ಟಡ ಕಾರ್ಮಿಕರ ಸಂಘದ ಅಧ್ಯಕ್ಷ ಪ್ರದೀಪ್ ಅಣಬಿ, ಸಾಮಾಜಿಕ ಹೋರಾಟಗಾರ ಸಿದ್ದು ಮುಂಡಾಸ್, ಡಾ. ಜಿ. ಪರಮೇಶ್ವರ ಅಭಿಮಾನಿ ಬಳಗದ ಮೌನೇಶ ಬೀರನೂರು ಸೇರಿದಂತೆ ಹಲವು ಮುಖಂಡರು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

ಈ ತನಿಖೆಯಿಂದ ಸತ್ಯಾಂಶ ಹೊರಬೀಳಲಿದೆಯೇ ಮತ್ತು ತಪ್ಪಿತಸ್ಥರಿಗೆ ಶಿಕ್ಷೆಯಾಗಲಿದೆಯೇ ಎಂಬುದನ್ನು ಕಾದು ನೋಡಬೇಕಿದೆ.

# ಜೂ.24 ರಂದು ವಾಕ್ ಇನ್ ಇಂಟರ್‌ವ್ಯೂ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.12–ತಾಲ್ಲೂಕಿನ ಕೊಳಗಲ್ಲು ಗ್ರಾಮದ ಏಕಲವ್ಯ ಮಾದರಿ ವಸತಿ ಶಾಲೆಯಲ್ಲಿ ವಿವಿಧ ಹುದ್ದೆಗಳಿಗೆ ಅತಿಥಿ ಶಿಕ್ಷಕರನ್ನು ನೇಮಿಸಿಕೊಳ್ಳಲು ಜೂ.24 ರಂದು ಬೆಳಿಗ್ಗೆ 09 ಗಂಟೆಗೆ ಇದೇ ಶಾಲೆಯಲ್ಲಿ ವಾಕ್ ಇನ್ ಇಂಟರ್ ವ್ಯೂ ಏರ್ಪಡಿಸಲಾಗಿದೆ.

ಅರ್ಹ ಅನುಭವವುಳ್ಳ 21ರಿಂದ 60 ವರ್ಷ ವಯೋಮಿತಿಯೊಳಗಿನ ನವೋದಯ, ಕೇಂದ್ರೀಯ ವಿದ್ಯಾಲಯ ಶಾಲೆಗಳಲ್ಲಿ ಉಪನ್ಯಾಸ ಮಾಡಿದ ಅನುಭವವುಳ್ಳ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

**ಹುದ್ದೆ:**

ಜೀವಶಾಸ್ತ್ರ ಶಿಕ್ಷಕ–01, ಇಂಗ್ಲೀಷ್ ಶಿಕ್ಷಕ–01, ದೈಹಿಕ ಶಿಕ್ಷಕ(ಮಹಿಳೆ)–02 ಮತ್ತು ವಸತಿ ನಿಲಯಪಾಲಕ–01.

ಆಸಕ್ತ ಅಭ್ಯರ್ಥಿಗಳು ತಮ್ಮ ಮೂಲ ಶೈಕ್ಷಣಿಕ ದಾಖಲೆಗಳೊಂದಿಗೆ ನಿಗಧಿಪಡಿಸಿದ ದಿನದಂದು ಸಂದರ್ಶನಕ್ಕೆ ಹಾಜರಾಗಬಹುದು. ಹಾಜರಾದ ಅಭ್ಯರ್ಥಿಗಳಿಗೆ ಯಾವುದೇ ಭತ್ಯೆ ನೀಡಲಾಗುವುದಿಲ್ಲ ಎಂದು ಕೊಳಗಲ್ಲು ಗ್ರಾಮದ ಏಕಲವ್ಯ ಮಾದರಿ ವಸತಿ ಶಾಲೆಯ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹತ್ತು ದಿನಗಳ ಉದ್ಯಮಶೀಲತಾಭಿವೃದ್ಧಿ ತರಬೇತಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಜೂನ್.12– ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ, ಕರ್ನಾಟಕ ಸರ್ಕಾರ ಇವರ ಪ್ರಾಯೋಜಕತ್ವದಲ್ಲಿ, ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್), ಬೀದರ ಇವರು ಸ್ವಯಂ ಉದ್ಯೋಗ ಪ್ರಾರಂಭಿಸಲು ಆಸಕ್ತಿಯುಳ್ಳ ಎಲ್ಲಾ ವರ್ಗದವರಿಗೆ ಪುರುಷರು ಹಾಗು ಮಹಿಳೆಯರಿಗೆ ಹತ್ತು ದಿನಗಳ ಉದ್ಯಮಶೀಲತಾಭಿವೃದ್ಧಿ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಜಂಟಿ ನಿರ್ದೇಶಕರು ಸಿಡಾಕ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ತರಬೇತಿದಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಅನುಸರಿಸಬೇಕಾದ ಕ್ರಮಗಳು, ಸರ್ಕಾರದ ಸ್ವಂತ ಉದ್ಯೋಗ ಯೋಜನೆಗಳು, ಬ್ಯಾಂಕಿನ ವ್ಯವಹಾರ, ಉದ್ಯಮಗಳನ್ನು ಪ್ರಾರಂಭಿಸಲು ಸಾಲ ಸೌಲಭ್ಯಕ್ಕಾಗಿ ಇರುವ ಸರ್ಕಾರದ ಯೋಜನೆಗಳು ಮತ್ತು ಯೋಜನೆ ವರದಿ ತಯಾರಿಸು ಕುರಿತು ಮಾರುಕಟ್ಟೆ ಸಮೀಕ್ಷ ಹಾಗು ಜಿ ಎಸ್ ಟಿ ಮತ್ತು ತೆರಿಗೆ ಹಾಗು ಇತ್ಯಾದಿ ವಿಷಯಗಳ ಕುರಿತು ತರಬೇತಿಯಲ್ಲಿ ಮಾಹಿತಿಯನ್ನು ನೀಡಲಾಗುವುದು, ಕಾರಣ 18 ವರ್ಷ ದಿಂದ 50 ವರ್ಷ ವಯೋಮಿತಿಯ ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾಗಿರುವ ಅಭ್ಯರ್ಥಿಗಳು ದಿನಾಂಕ: 21–06–2025 ರೊಳಗಾಗಿ ತಮ್ಮ ಹೆಸರು ನೊಂದಾಯಿಸಿಕೊಂಡು ತರಬೇತಿಯಲ್ಲಿ ಭಾಗವಹಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: 9743012315 ಗೆ ಸಂಪರ್ಕಿಸಬಹುದು ಅವರು ತಿಳಿಸಿದ್ದಾರೆ.

# ಶಕ್ತಿನಗರ ವ್ಯಾಪ್ತಿಯಲ್ಲಿ ಇಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 12–: ತಾಲೂಕಿನ ಶಕ್ತಿನಗರ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ–ವಿಭಾಗದ ವ್ಯಾಪ್ತಿಗೆ ಬರುವ 110/11 ಕೆವಿ ಶಕ್ತಿನಗರ ಮತ್ತು ಚಿಕ್ಕಸೂಗೂರು ಉಪ–ಕೇಂದ್ರಗಳಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡ ಪ್ರಯುಕ್ತ ಜೂನ್ 13ರ ಬೆಳ್ಳಿಗ್ಗೆ 9 ಗಂಟೆಯಿಂದ ಮಧ್ಯಾಹ್ನ 3 ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ವಿದ್ಯುತ್ ಗ್ರಾಹಕರು ಸಹಕರಿಸುವಂತೆ ಶಕ್ತಿನಗರ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ–ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾನೂನು ಪದವೀಧರರ ತರಬೇತಿ ಭತ್ಯೆಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.12–ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2025–26 ನೇ ಸಾಲಿನ ಕಾನೂನು ತರಬೇತಿ ಭತ್ಯೆಗಾಗಿ ಅರ್ಹ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ತಿಳಿಸಿದ್ದಾರೆ.

ಅರ್ಜಿ ಸಲ್ಲಿಸಲು ಜು.10 ಕೊನೆಯ ದಿನ.

**ನಿಬಂಧನೆಗಳು:**

ಅಭ್ಯರ್ಥಿಯು ಬಳ್ಳಾರಿ ಜಿಲ್ಲೆಯವರಾಗಿರಬೇಕು. ಪ್ರವರ್ಗ–1, ಪ್ರವರ್ಗ–2(ಎ), ಪ್ರವರ್ಗ–3(ಎ) ಮತ್ತು ಪ್ರವರ್ಗ–3(ಬಿ) ಗೆ ಸೇರಿದವರಾಗಿರಬೇಕು. ಶೇಕಡವಾರು ಪ್ರವರ್ಗ–1 ರಲ್ಲಿ 2 ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ಉಳಿದ ವರ್ಗಗಳಲ್ಲಿ ನಿಯಮಾನುಸಾರ 8 ಅಭ್ಯರ್ಥಿಗಳು ಸೇರಿ ಒಟ್ಟು 10 ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು.

ಅಭ್ಯರ್ಥಿಯು ಬಾರ್ ಕೌನ್ಸಿಲ್‌ನಲ್ಲಿ ಹೆಸರು ನೋಂದಾಯಿಸಿರಬೇಕು. ತರಬೇತಿಗೆ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕಕ್ಕೆ ಹಿಂದೆ 2 ವರ್ಷಗಳೊಳಗಾಗಿ ಕಾನೂನು ಪದವಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಕಾನೂನು ತರಬೇತಿಯು 4 ವರ್ಷಗಳ ಅವಧಿಯಾಗಿದ್ದು, ಮಾಸಿಕ 4 ಸಾವಿರ ರೂ.ಗಳ ತರಬೇತಿ ಭತ್ಯೆ ನೀಡಲಾಗುವುದು.

ಕಾನೂನು ತರಬೇತಿಗೆ ಬಳ್ಳಾರಿ ಜಿಲ್ಲೆಯಿಂದ 10 ಅಭ್ಯರ್ಥಿಗಳನ್ನು ಮಾತ್ರ ಆಯ್ಕೆ ಮಾಡಲಾಗುವುದು. ಪ್ರವರ್ಗ–1 ರಲ್ಲಿ ಶೇ.15 ರಷ್ಟು 2 ಅಭ್ಯರ್ಥಿಗಳು, ಪ್ರವರ್ಗ–2(ಎ) ಶೇ.53 ರಷ್ಟು 5 ಅಭ್ಯರ್ಥಿಗಳು, ಪ್ರವರ್ಗ–3(ಎ) ಶೇ.15ರಷ್ಟು 1 ಅಭ್ಯರ್ಥಿ, ಪ್ರವರ್ಗ–3(ಬಿ) ಶೇ.17 ರಷ್ಟು 2 ಅಭ್ಯರ್ಥಿಗಳು ಸೇರಿ ಒಟ್ಟು 10 ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು.

ಹಿಂದುಳಿದ ವರ್ಗಗಳ ಪ್ರವರ್ಗ–1, ಪ್ರವರ್ಗ–2ಎ, 3ಎ ಹಾಗೂ 3ಬಿ ಅಭ್ಯರ್ಥಿಗಳಿಗೆ 38 ವರ್ಷ ಗರಿಷ್ಠ ವಯೋಮಿತಿ (ಅರ್ಜಿ ಸಲ್ಲಿಸಲು ಇರುವ ಕೊನೆಯ ದಿನಾಂಕಕ್ಕೆ) ಇರುತ್ತದೆ. ತರಬೇತಿಯ ಅವಧಿಯ ಮಧ್ಯಭಾಗದಲ್ಲಿ ಅಭ್ಯರ್ಥಿಯು ತರಬೇತಿಗೆ ಗೈರು ಹಾಜರಾದಲ್ಲಿ ಪಡೆಯಲಾಗಿರುವ ತರಬೇತಿ ಭತ್ಯೆಯ ಹಣವನ್ನು ಬಡ್ಡಿಯೊಂದಿಗೆ ಪಾವತಿಸಬೇಕಾಗುವುದು.

ವಾರ್ಷಿಕ ಆದಾಯ ಮಿತಿ ಪ್ರವರ್ಗ–1ರ ಅಭ್ಯರ್ಥಿಗಳಿಗೆ ರೂ.3.50 ಲಕ್ಷ, ಪ್ರವರ್ಗ–2ಎ, 3ಎ ಮತ್ತು 3ಬಿ ರೂ.2.50 ಲಕ್ಷಗಳ ವಾರ್ಷಿಕ ಆದಾಯದ ಮಿತಿಯನ್ನು ನಿಗದಿಪಡಿಸಲಾಗಿದೆ.

ಆಯ್ಕೆಯಾದ ಅಭ್ಯರ್ಥಿಗಳನ್ನು ಜಿಲ್ಲಾ ಸಮಿತಿಯು ಜಿಲ್ಲಾ ಪಬ್ಲಿಕ್ ಪ್ರಾಸಿಕ್ಯೂಟರ್/ಸರ್ಕಾರಿ ವಕೀಲರು ಅಥವಾ ಕನಿಷ್ಠ 15 ವರ್ಷಗಳ ವೃತ್ತಿಯಲ್ಲಿ ಅನುಭವ ಹೊಂದಿರುವ ವಕೀಲರ ಅಧೀನದಲ್ಲಿ ತರಬೇತಿ ಪಡೆಯುವುದು.

ಅಭ್ಯರ್ಥಿಗಳನ್ನು ಜಿಲ್ಲಾ ಮಟ್ಟದ ಆಯ್ಕೆ ಸಮಿತಿಯಿಂದ ಸಂದರ್ಶನದ ಮೂಲಕ ಆಯ್ಕೆ ಮಾಡಲಾಗುವುದು.

**ಬೇಕಾದ ದಾಖಲೆ:**


ಅಭ್ಯರ್ಥಿಗಳು ಅರ್ಜಿಯ ಜೊತೆಗೆ ಎಸ್.ಎಸ್.ಎಲ್.ಸಿ. ಅಂಕಪಟ್ಟಿ ಅಥವಾ ಶಾಲಾ ವರ್ಗಾವಣೆ ಪ್ರಮಾಣ ಪತ್ರ ಮತ್ತು ಪದವಿ ಹಾಗೂ ಕಾನೂನು ಪದವಿಗಳಲ್ಲಿ ಪಡೆದ ಅಂಕಪಟ್ಟಿ ಪ್ರಮಾಣ ಪತ್ರದ ದೃಢೀಕರಣ ಪ್ರತಿಗಳನ್ನು ಲಗತ್ತಿಸುವುದು.

ಹೆಚ್ಚಿನ ವಿವರಗಳಿಗಾಗಿ ತಿತಿತಿ. ಛಿಚಿಟಟಚಿಡಿ.ಟಿಛಿ.ಟಿ ವೆಬ್‌ಸೈಟ್‌ಗೆ ಭೇಟಿ ನೀಡಬಹುದು.

ಹೆಚ್ಚಿನ ಮಾಹಿತಿಗಾಗಿ ನಗರದ ಜೋಳದರಾಶಿ ದೊಡ್ಡನಗೌಡ ರಂಗಮಂದಿರ ಹತ್ತಿರದ ಡಿ.ದೇವರಾಜ ಅರಸು ಭವನದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳ ಕಚೇರಿ ಅಥವಾ ದೂ.08392–275751 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಳ್ಳಾರಿಯಿಂದ ಚಿಕ್ಕಜಾಜೂರುಗೆ ಜೋಡು ರೈಲ್ವೆ ಮಾರ್ಗಕ್ಕೆ ಅನುಮೋದನೆ

ಮಲ್ಲಮ್ಮ ನುಡಿ ವಾರ್ತೆ



ಬಳ್ಳಾರಿ:ಜೂ,12– ಪ್ರಧಾನಿ ಮೋದಿ ಅವರು ನಿನ್ನೆ ನಡೆಸಿದ ಸರ್ಕಾ ಸಚಿವ ಸಂಪುಟ ಸಭೆಯಲ್ಲಿ ಬಹು ದಿನಗಳ ಬೇಡಿಕೆಯಾಗಿದ್ದ ಬಳ್ಳಾರಿ ಮತ್ತು ಚಿಕ್ಕಜಾಜೂರು ನಡುವಿನ 180 ಕಿಲೋಮೀಟರ್ ಜೋಡು ರೈಲ್ವೆ ಮಾರ್ಗಕ್ಕೆ ನಿನ್ನೆ ಅನುಮೋದನೆ ನೀಡಿದೆ.

ಪ್ರಧಾನ ಮಂತ್ರಿ ನರೇಂದ್ರ ಮೋದಿ ಹಾಗೂ ರೈಲ್ವೆ ಮಂತ್ರಿಗಳಾದ ಅಶ್ವಿನ್ ವೈಷ್ಣವ, ವಿ. ಸೋಮಣ್ಣನವರು ಆಸ್ತೆ ತೆ–ೂೇರಿಸಿ ಇದಕ್ಕೆ ಅನುಮೋದನೆ ದೊರಕಿಸಿಕೊಟ್ಟಿದ್ದಾರೆ

ಜಾಫರ್ ಷರೀಫ್ ಅವರು ರೈಲ್ವೆ ಮಂತ್ರಿಗಳಾಗಿದ್ದಾಗ ರಚನೆಯಾದ ಬ್ರಾಡ್ ಗೇಜ್ ಮಾರ್ಗದಲ್ಲಿ ಬಳ್ಳಾರಿಯಿಂದ ಚಿಕ್ಕಜಾಜೂರು ಮುಖೇನ ಕೇವಲ ಗೂಡ್ಸ್ ರೈಲುಗಳು ಮಾತ್ರ ಸಂಚರಿಸುತ್ತಿದ್ದವು. ನಂತರ

ಪ್ರಯಾಣಿಕರ ರೈಲುಗಳಿಗೆ ಅವಕಾಶ ಇಲ್ಲದಿರುವುದನ್ನು ವಿರೋಧಿಸಿ ಈ ಮಾರ್ಗದಲ್ಲಿ ಪ್ರಯಾಣಿಕರ ರೈಲುಗಳಿಗಾಗಿ ಒತ್ತಾಯಿಸಿ ರೈಲ್ವೇ ಕ್ರಿಯಾ ಸಮಿತಿ ಕರ್ನಾಟಕದ ಹೈಕೋರ್ಟ್‌ನಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಮೂಲಕ ದಾವೆ ಹೂಡಿ ರೈಲ್ವೆ ಇಲಾಖೆಗೆ ನೀಡಿದ ನ್ಯಾಯಾಲಯದ ಸೂಚನೆಯಂತೆ

ಈ ಮಾರ್ಗದಲ್ಲಿ ಪ್ರಯಾಣಿಕರ ರೈಲುಗಳು ಸಂಚರಿಸುತ್ತಿವೆ. ಈ ಮಾರ್ಗದಲ್ಲಿ ಇನ್ನೂ ಹೆಚ್ಚು ರೈಲುಗಳು ಓಡಾಡಬೇಕಾದರೆ ಜೋಡು ಮಾರ್ಗದ ಅವಶ್ಯಕತೆ ಇತ್ತು. ಈಗ ಒಂದೇ ಮಾರ್ಗ ಇರುವುದರಿಂದ ಪ್ರಯಾಣಿಕರ ರೈಲುಗಳು ಸಾಕಷ್ಟು ತಡವಾಗಿ ಸಂಚರಿಸುತ್ತಿದ್ದವು ಎಂದು ಕರ್ನಾಟಕ ರಾಜ್ಯ ರೈಲ್ವೆ ಕ್ರಿಯಾ ಸಮಿತಿಯ ಅಧ್ಯಕ್ಷ ಮಹೇಶ್ವರಸ್ವಾಮಿ ತಿಳಿಸಿದ್ದಾರೆ.

# ಇಂದು ಮತ್ತು ನಾಳೆ ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಜೂನ್.12– ಚಿದ್ರಿ ಉಪ ಕೇಂದ್ರದಿಂದ ಸರಬರಾಜು ಆಗುವ ಫೀಡರನ ಮೇಲೆ ತುರ್ತು ಕಾರ್ಯ ಇರುವುದರಿಂದ 11ಕೆವಿ ಫೀಡರಗಳಾದ 11ಕೆವಿ ಗುಂಪಾ, ಮೈಲೂರ್, ನಿಸರ್ಗಾ, ಬಸವನಗರ, ಕೆಇಬಿ ಕ್ವಾಟರ್ಸ ಫೀಡರನಲ್ಲಿ ಬರುವ ಗುಂಪಾ, ಚಿಟ್ಟಾ ರೋಡ, ಅಮಲಾಪೂರ ರೋಡ, ನಿಸರ್ಗಾ ಲೇಔಟ್, ಕೆಇಬಿ ಕಾಲೋನಿ, ಹಳೆಯ ಮೈಲೂರ್, ಸಿದ್ದಾರಮಯ್ಯಾ ಲೇಔಟ್, ಗಾಂಧಿನಗರ, ವಿದ್ಯಾನಗರ, ಬಿದ್ರಿ ಕಾಲೋನಿ, ಸಯಿ ನಗರ, ಕುಂಬಾರವಾಡ, ಗಣೇಶ ನಗರ, ಮೃತಂಜ್ಯಯ ನಗರ, ಗುಂಪಾ ರಿಂಗ ರೋಡ, ಬಸವನಗರ ಟೀಚರ್ಸ ಕಾಲೋನಿ, ಶ್ರೀನಗರ, ಸಂಗಮೇಶ್ವರ ಕಾಲೋನಿ ಅಗ್ರಿಕಲ್ಚರ್ ಕಾಲೋನಿಗಳಲ್ಲಿ ದಿನಾಂಕ: 13–06–2025 ಹಾಗೂ 14–06–2025 ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 3 ಗಂಟೆಯವರೆಎಗೆ ವಿದ್ಯುತ್ ಸಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ.

ಕಾರಣ ವಿದ್ಯುತ್ ಗ್ರಾಹಕರು ಸಹಕರಿಸಬೇಕೆಂದು ಬೀದರ ವಿಭಾಗದ ಜೇಸ್ಕಾಂ ಕಾರ್ಯನಿರ್ವಾಹಕ ಇಂಜಿನೀಯರರು (ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶ್ವ ಬಾಲ ಕಾರ್ಮಿಕ ವಿರೋಧಿ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ;ಚಿತ್ತಾಪುರ; ಜೂ.12:ಪಟ್ಟಣದ ಸರ್ಕಾರಿ ಪ್ರೌಢ ಶಾಲೆ ಆವರಣದಲ್ಲಿ ವಿಶ್ವ ಬಾಲ ಕಾರ್ಮಿಕ ವಿರೋಧಿ ದಿನಾ ಆಚರಣೆ ಮಾಡಲಾಯಿತು.

ಇದೇ ವೇಳೆ ಕನ್ನಡ ಪಂಡಿತ ಅಯ್ಯಾಳಿಯವರು ಪ್ರತಿಜ್ಞಾವಿಧಿಯನ್ನು ವಿಧಿಸಿದರು.

ಶಾಲೆಯ ಎಲ್ಲಾ ಶಿಕ್ಷಕರು ಪ್ರತಿಜ್ಞಾವಿಧಿಯನ್ನು ಸ್ವೀಕರಿಸಿದರು. ಈ ಸಂದರ್ಭದಲ್ಲಿ ಶಾಲೆಯ ಮುಖ್ಯಗುರು ಕಾಶಿರಾಯ ಕಲಾಲ್, ಶಿಕ್ಷಕರಾದ ಡಾ. ರಾಜಕುಮಾರ್, ರಮೇಶ ಸಾಲೋಟಗಿ, ಕಲೀಮ್ ಅಭಿದ್ ಎಂ ಎ, ರವಿ ಬಿಕೆ, ರಾಜಶೇಖರ್ ನಾಲ್ವಾರ್, ಫರ್ಜಾನ ಬೇಗಂ, ಸಬಿಹಾ ಯಾಸ್ಮಿನ್, ಅನೀಸ್ ಫಾತೀಮಾ, ವಿಜಯಲಕ್ಷ್ಮೀ, ಅತಿಥಿ ಶಿಕ್ಷಕಿ ಸನಾ ಸುಭಾನಾ ಇದ್ದರು.

## ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ಹುದ್ದೆ ಆಕಾಂಕ್ಷಿಗಳಿಗೆ ಎಚ್ಚರಿಕೆ


ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕೊಪ್ಪಳ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನೆ ವ್ಯಾಪ್ತಿಯಲ್ಲಿ ಬರುವ 09 ಅಂಗನವಾಡಿ ಕಾರ್ಯಕರ್ತೆ-ಯರ ಹಾಗೂ 88 ಅಂಗನವಾಡಿ ಸಹಾಯಕಿಯರ ಗೌರವ ಸೇವೆ ಹುದ್ದೆಗಳ ಭರ್ತಿಗಾಗಿ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ಮಧ್ಯವರ್ತಿಗಳ ಮೋಸಕ್ಕೆ ಬಲಿಯಾಗದಂತೆ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಎಚ್ಚರಿಕೆ ನೀಡಿದ್ದಾರೆ.

09 ಅಂಗನವಾಡಿ ಕಾರ್ಯಕರ್ತೆ ಹಾಗೂ 88 ಅಂಗನವಾಡಿ ಸಹಾಯಕಿಯರ ಗೌರವ ಸೇವೆ ಹುದ್ದೆಗಳ ಭರ್ತಿಗಾಗಿ ದಿನಾಂಕ: 23-09-2024ರಿಂದ 23-10-2024 ರವರೆಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿತ್ತು. ಅದರಂತೆ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಪ್ರಕಟಿಸಲು ಕ್ರಮ ವಹಿಸಲಾಗುತ್ತಿದ್ದು, ಶೀಘ್ರದಲ್ಲಿಯೇ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಪ್ರಕಟಿಸಲಾಗುವುದು. ಅಂತಿಮ ಆಯ್ಕೆಯಾಗಿರುವ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶವನ್ನು ಜಿಲ್ಲಾ ಉಪನಿರ್ದೇಶಕರ ಕಚೇರಿಯಿಂದ ಅಭ್ಯರ್ಥಿಗಳ ವಿಳಾಸಕ್ಕೆ ನೋಂದಾಯಿತ ಅಂಚೆ ಮೂಲಕ ಕಳುಹಿಸಲಾಗುವುದು.

ಆದ್ದರಿಂದ ಅಭ್ಯರ್ಥಿಗಳು ಯಾವುದೇ ಮಧ್ಯವರ್ತಿಗಳು ಅಥವಾ ಇದಕ್ಕೆ ಸಂಬಂಧಿಸಿದಂತೆ ಯಾರೊಂದಿಗೂ ಹಣಕಾಸಿನ ವ್ಯವಹಾರ ಮಾಡಬಾರದು ಎಂದು ಕೊಪ್ಪಳ ಯೋಜನೆಯ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆ ಮೂಲಕ ಎಚ್ಚರಿಕೆ ನೀಡಿದ್ದಾರೆ.

## 'ಬಸವಶ್ರೀ' ರಾಜ್ಯಮಟ್ಟದ ಪ್ರಶಸ್ತಿಗೆ ಮುಲ್ಲಾ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟೆ: ನಾಟ್ಯ ಸ್ಫೂರ್ತಿ ಆರ್ಟ್ ಆ್ಯಂಡ್ ಕಲ್ಚರಲ್ ಅಕಾಡೆಮಿ(ರಿ) ಧಾರವಾಡ ಇವರು ಶಿಕ್ಷಣ ಹಾಗೂ ಸಮಾಜಸೇವೆ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದ ಮಹನೀಯರಿಗೆ ಕೊಡ ಮಾಡುವ 2025 ರ ರಾಜ್ಯಮಟ್ಟದ "ಬಸವ ಶ್ರೀ" ಪ್ರಶಸ್ತಿಗೆ ವಡವಡಗಿ ಗ್ರಾಮದ ಜಾಲಹಳ್ಳಿ ಜಯಶಾಂತಲಿಂಗೇಶ್ವರ ಪದವಿ ಕಾಲೇಜಿನಲ್ಲಿ ಇತಿಹಾಸ ವಿಷಯ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿರುವ ಮೌಲಸಾಬ ಮುಲ್ಲಾ ಇವರು ಆಯ್ಕೆಯಾಗಿದ್ದಾರೆ. 2025ರ ಜೂನ್ 15 ರಂದು ಧಾರವಾಡದ ಆಲೂರು ವೆಂಕಟರಾವ್ ಸಭಾಭವನದಲ್ಲಿ ಅಕಾಡೆಮಿಯ 15ನೇ ವಾರ್ಷಿಕೋತ್ಸವದ ಅಂಗವಾಗಿ ಹಮ್ಮಿಕೊಂಡ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಅವರಿಗೆ ಈ ಪ್ರಶಸ್ತಿಯನ್ನು ಕೊಟ್ಟು ಗೌರವಿಸಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

## ನರ್ಸಿಂಗ್ ವಿದ್ಯಾರ್ಥಿಗಳಿಂದ ಕಿರುನಾಟಕ ತಂಬಾಕು ಮುಕ್ತ ಸಮಾಜ ನಿರ್ಮಾಣ ಮಾಡಿ-ಜಗದೀಶ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.12-ತಂಬಾಕು ಸೇವನೆಯಿಂದ ಕ್ಯಾನ್ಸರ್ ಸೇರಿದಂತೆ ವಿವಿಧ ರೋಗಗಳು ತಗುಲಲಿದ್ದು, ಇದರಿಂದ ಮುಕ್ತರಾಗಿರಬೇಕು. ಜೊತೆಗೆ ಇನ್ನುಳಿದವರಲ್ಲೂ ಜಾಗೃತಿ ಮೂಡಿಸಿ ತಂಬಾಕು ಮುಕ್ತ ಸಮಾಜ ನಿರ್ಮಾಣಕ್ಕೆ ಮುಂದಾಗಬೇಕು ಎಂದು ಸಜ್ಜಲಶ್ರೀ ನರ್ಸಿಂಗ್ ಕಾಲೇಜಿನ ಸಮುದಾಯ ಆರೋಗ್ಯ ಶುಶ್ರುಷಾ ವಿಭಾಗದ ಉಪನ್ಯಾಸಕ ಜಗದೀಶ ಹಿರೇಮಠ ಹೇಳಿದರು.

ತಾಲೂಕಿನ ಭಗವತಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸಜ್ಜಲಶ್ರೀ ಕಾಲೇಜಿನ ವತಿಯಿಂದ ಗುರುವಾರ ನಮ್ಮ ನಡೆ ತಂಬಾಕು ಮುಕ್ತ ಗ್ರಾಮದ ಕಡೆ ಎಂಬ ಘೋಷಣೆಯಡಿ ಹಮ್ಮಿಕೊಂಡಿದ್ದ ತಂಬಾಕು ಸೇವನೆಯಿಂದಾಗುವ ದುಷ್ಪರಿಣಾಮಗಳು ಮತ್ತು ಈ ಸಂಬಂಧದ ಆರೋಗ್ಯ ಶಿಕ್ಷಣ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ತಂಬಾಕು ಸೇವನೆಯಿಂದ ಮುಖ್ಯವಾಗಿ ಕ್ಯಾನ್ಸರ್ ಬರುವ ಸಾಧ್ಯತೆ ಹೆಚ್ಚಿದ್ದು, ಇದರ ಹೊರತಾಗಿಯೂ ಅನೇಕ ರೋಗಗಳು ಸಹ ಅಂಟಿಕೊಳ್ಳಲಿವೆ. ಇದನ್ನು ಪ್ರತಿಯೊಬ್ಬರೂ ಅರಿಯಬೇಕು. ಉತ್ತಮ ಆರೋಗ್ಯ ಹೊಂದಲು ತಂಬಾಕು ಸೇವನೆಯಂತಹ ಚಟದಿಂದ ಮುಕ್ತರಾಗಿರಬೇಕು ಎಂದು ಹಿರೇಮಠ ಹೇಳಿದರು.

ನರ್ಸಿಂಗ್ ಕಾಲೇಜಿನ ಸಮುದಾಯ ಆರೋಗ್ಯ ಶುಶ್ರುಷಾ ವಿಭಾಗದ ಮುಖ್ಯಸ್ಥೆ ಡಾ.ಶಿಲ್ಪಾ ಕೂಗಲಿ ಕಾರ್ಯಕ್ರಮ ಉದ್ಘಾಟಿಸಿ, ತಂಬಾಕು ಮುಕ್ತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಬದ್ಧರಾಗಿರಬೇಕು. ಆರೋಗ್ಯವಂತ ಸಮಾಜನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಹೇಳಿದರು.

ತಂಬಾಕು ಸೇವನೆಯಿಂದಾಗುವ ದುಷ್ಪರಿಣಾಮಗಳನ್ನು ತಿಳಿಸಿ, ತಂಬಾಕು ಮುಕ್ತ ಗ್ರಾಮ ನಿರ್ಮಾಣ ಕುರಿತು ಜಾಗೃತಿ ಮೂಡಿಸಲು ಕಾಲೇಜಿನ ಬಿಎಸ್ ಸಿ ನರ್ಸಿಂಗ್ ಮತ್ತು ಡಿಪ್ಲೊಮಾ ನರ್ಸಿಂಗ್ 3 ನೇ ವರ್ಷದ ವಿದ್ಯಾರ್ಥಿಗಳು ಕಿರುನಾಟಕ ಪ್ರದರ್ಶಿಸಿದರು.

ಶಾಲೆಯ ಮುಖ್ಯ ಗುರುಮಾತೆ ಎಸ್.ಎಸ್.ಬಳೂಲದ, ನರ್ಸಿಂಗ್ ಕಾಲೇಜಿನ ಪ್ರೊ. ರೇಣುಕರಾಜ ನಾಗಮ್ಮನವರ, ಡಾ.ರಾಜಶೇಖರ ಹಿರೇಗೌಡರ, ಉಪನ್ಯಾಸಕಿಯರಾದ ಲಕ್ಷ್ಮೀ ಪಾಟೀಲ, ಕಿರಣ ಕಲಕಬಂಡಿ, ವಿಜಯಲಕ್ಷ್ಮಿ ಗೌಡರ, ಶ್ರೀದೇವಿ ವನಗೇರಿ, ಮಹಾಲಕ್ಷ್ಮಿ ಚಲವಾದಿ ಹಾಗೂ ಶಿಕ್ಷಕರು, ಸಿಬ್ಬಂದಿ ವರ್ಗ ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ಬಾಲ ಕಾರ್ಮಿಕ ಪದ್ದತಿ ನಿರ್ಮೂಲನೆಗಾಗಿ ಜನ ಜಾಗೃತಿ ಮೂಡಿಸಬೇಕಿದೆ- ಜಿಲ್ಲಾಧಿಕಾರಿ ನಲಿನ್ ಅತುಲ್



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಮಕ್ಕಳೇ ದೇಶದ ಭವಿಷ್ಯದ ಪ್ರಜೆಗಳಾಗಿರುವುದರಿಂದ ಅವರ ಸರ್ವತೋಮುಖ ಅಭಿವೃದ್ಧಿಗೆ ಪೂರಕವಾಗಿ ನಮ್ಮ ಸಮಾಜವನ್ನು ರೂಪಿಸಬೇಕು. ಸಮಾಜದ ಅನಿಷ್ಟ ಪದ್ಧತಿಯಾದ ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆಗಾಗಿ ಜನ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು, ಈ ಕುರಿತು ಜನರಿಗೆ ತಿಳಿ ಹೇಳಬೇಕಿದೆ ಎಂದು ಜಿಲ್ಲಾಧಿಕಾರಿ ನಲಿನ್ ಅತುಲ್ ಅವರು ಹೇಳಿದರು.

ಗುರುವಾರದಂದು ಜಿಲ್ಲಾ ಪಂಚಾಯತ್‌ನ ಜೆ.ಎಚ್.ಪಟೇಲ್ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಜಿಲ್ಲಾ ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಕ್ಷಣ ಇಲಾಖೆ, ಯುನಿಸೆಫ್ ಮಕ್ಕಳ ರಕ್ಷಣಾ ಯೋಜನೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸಂಘ, ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ ಹಾಗೂ ಕಾನೂನು ಅರಿವು-ನೆರವು ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ಹೊಸದಾಗಿ ಶಿಕ್ಷಣ ಹಕ್ಕು ಕಾಯ್ದೆ ಪ್ರಕಾರ ಮಕ್ಕಳಿಗೆ ಉಚಿತ ಶಿಕ್ಷಣ ನೀಡಬೇಕು. ನಮ್ಮ ಭಾಗದಲ್ಲಿ ಕೃಷಿ, ಹೋಟೆಲ್, ಗ್ಯಾರೇಜ್, ಆರೋಗ್ಯಕ್ಷೇತ್ರ ಸೇರಿದಂತೆ ಹಲವಾರು ಕಡೆಗಳಲ್ಲಿ ಬಾಲಕಾರ್ಮಿಕ ಮಕ್ಕಳು ಕಂಡುಬರುತ್ತಾರೆ. ಬಾಲಕಾರ್ಮಿಕರನ್ನು ದುಡಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧವಾಗಿದೆ. ಪಾಲಕರು ತಮ್ಮ ಮಕ್ಕಳನ್ನು ಬಾಲಕಾರ್ಮಿಕರನ್ನಾಗಿ ಮಾಡಬಾರದು. ಇದರಿಂದ ಅವರ ಬಾಲ್ಯವನ್ನು ಕಸಿದುಕೊಂಡಂತಾಗುತ್ತದೆ. ದೇಶದ ಭವಿಷ್ಯವಾದ ಮಕ್ಕಳ ವ್ಯಕ್ತಿತ್ವ ಅಭಿವೃದ್ಧಿಗೆ ಪೂರಕವಾಗುವಂತೆ ನಮ್ಮ ಸಮಾಜವನ್ನು ರೂಪಿಸಬೇಕು ಎಂದು ಹೇಳಿದರು.

ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಪತ್ತೆಯಾದ 62 ಬಾಲಕಾರ್ಮಿಕ ಪ್ರಕರಣಗಳಲ್ಲಿ 13 ಬಾಲಕಾರ್ಮಿಕರ ಪ್ರಕರಣಗಳಿಗೆ ನ್ಯಾಯಾಲಯದಲ್ಲಿ ಮೊಕದ್ದಮೆ ಹೂಡಲಾಗಿದೆ. ಕೊಪ್ಪಳ ಜಿಲ್ಲೆಯಲ್ಲಿ ಇಂತಹ ಘಟನೆಗಳು ನಡೆಯದಂತೆ ಕಾರ್ಮಿಕ ಇಲಾಖೆ ಸೇರಿದಂತೆ ಇತರೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಮುಂಜಾಗ್ರತೆ ವಹಿಸಬೇಕೆಂದು ಹೇಳಿದರು.

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶೇಖರಗೌಡ ಜಿ. ರಾಮತ್ನಾಳ ಮಾತನಾಡಿ, ಉಚಿತ ಕಡ್ಡಾಯ ಶಿಕ್ಷಣ ಸೌಲಭ್ಯಗಳಿದ್ದರೂ ಜಿಲ್ಲೆಯಲ್ಲಿ ಬಾಲಕಾರ್ಮಿಕರು ಮತ್ತು ಬಾಲ್ಯ ವಿವಾಹದಂತಹ ಪ್ರಕರಣಗಳು ಕಂಡು ಬರುತ್ತಿರುವುದು ವಿಷಾದನೀಯ ಸಂಗತಿಯಾಗಿದೆ. ಬಾಲ ಕಾರ್ಮಿಕರ ನಿರ್ಮೂಲನೆ ಕೇವಲ ಒಂದು ಇಲಾಖೆ ಕೆಲಸ ಮಾಡಿದರೆ ಸಾಲದು, ಇತರೆ ವಿವಿಧ ಇಲಾಖೆಗಳು, ಗ್ರಾಮ ಪಂಚಾಯತಿ ಪಿಡಿಓ ರಿಂದ ಹಿಡಿದು ಆಯಾ ಶಾಲೆಗಳ ಮುಖ್ಯೋಪಾಧ್ಯಾಯರ ಮೇಲೆಯೂ ಜವಾಬ್ದಾರಿ ಇದೆ. ಮಕ್ಕಳು ಒಂದು ವಾರ ಶಾಲೆಗೆ ಬರದಿದ್ದರೆ ಯಾಕೆ ಬರಲಿಲ್ಲ. ಅವರಿಗೆ ಮದುವೆ ಮಾಡಲಾಗಿದೆಯೇ, ಕೆಲಸಕ್ಕೆ ಕಳಿಸಲಾಗಿದೆಯೆ ಅಥವಾ ಅವರ ಆರೋಗ್ಯ ಸರಿಯಾಗಿಲ್ಲವೆ ಎಂಬ ಮಾಹಿತಿಯನ್ನು ಶಿಕ್ಷಕರು ಸಂಗ್ರಹಿಸಬೇಕು. ಈ ಕುರಿತು ಪಾಲಕರಿಗೆ ಒಂದು ನೋಟಿಸ್ ನೀಡುವ ಕೆಲಸವನ್ನು ಶಿಕ್ಷಕರು ಮಾಡಬೇಕು. ಬಾಲಕಾರ್ಮಿಕ ಮಕ್ಕಳನ್ನು ರಕ್ಷಣೆ ಮಾಡಿದಾಗ ಈ ಕುರಿತು ಪತ್ರಿಕಾ ಪ್ರಕಟಣೆ ನೀಡಬೇಕು ಎಷ್ಟು ಮಕ್ಕಳನ್ನು ರಕ್ಷಣೆ ಮಾಡಲಾಗಿದೆ, ಯಾರ ಮೇಲೆ ಪ್ರಕರಣ ದಾಖಲಿಸಲಾಗಿದೆ ಎಂಬ ಮಾಹಿತಿಯನ್ನು ಜನರಿಗೆ ತಿಳಿಸಬೇಕೆಂದು ಹೇಳಿದರು. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ್ ಎಸ್. ದರಗದ ಅವರು ವಿಶ್ವ ಬಾಲಕಾರ್ಮಿಕ ವಿರೋಧಿ ದಿನ-2025 ರ ಪ್ರಮಾಣ ವಚನ ಬೋಧಿಸಿ ಮಾತನಾಡಿ, ಈ ದಿನಾಚರಣೆ ಉದ್ದೇಶ ಮಕ್ಕಳು ಯಾರೂ ಬಾಲಕಾರ್ಮಿಕರಾಗಿ ಉಳಿಯಬಾರದು ಎಂಬುದಾಗಿದೆ. ಮಕ್ಕಳು ತಮ್ಮ ಬಾಲ್ಯದ ವಯಸ್ಸಿನಲ್ಲಿ ಹೇಗಿರಬೇಕೋ ಹಾಗೆಯೇ ಇರಬೇಕು. ದುಡಿಯುವುದಕ್ಕೆ ಕಳಿಸುವುದರಿಂದ ಅವರ ಬಾಲ್ಯವನ್ನು ಕಸಿದುಕೊಂಡಂತೆ ಆಗುತ್ತದೆ. ಇದು ಯಾಕೆ ಆಗುತ್ತದೆ ಎಂದರೆ ನಮ್ಮಲ್ಲಿ ಇನ್ನೂ ಎಷ್ಟೋ ಕಡೆಗೆ ಜನರಿಗೆ ಸರಿಯಾದ ಸೂರಿಲ್ಲ. ಅವರು ತಮ್ಮ ಹೊಟ್ಟೆ ತುಂಬಿಸಲಾಗದೆ ಅವರ ಮಕ್ಕಳು ದುಡಿಮೆಗೆ ಕೈಜೋಡಿಸುತ್ತಿದ್ದಾರೆ. ಕೆಳವರ್ಗದ ಜನರಿಗೆ ಇನ್ನೂ ಬಹಳಷ್ಟು ಮೂಲಭೂತ ಸೌಲಭ್ಯಗಳನ್ನು ಕೊಡಬೇಕಿದೆ. ಎಷ್ಟೋ ಮಕ್ಕಳಿಗೆ ಇನ್ನೂ ಅವರ ಆಧಾರ್ ಕಾರ್ಡ್‌ಗಳೇ ಇಲ್ಲ ಎಂದು ಹೇಳಿದರು.

ಜಿಲ್ಲಾ ಕಾರ್ಮಿಕ ಅಧಿಕಾರಿ ಸುಧಾ ಗರಗ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಬಾಲಕಾರ್ಮಿಕ ಮಕ್ಕಳಿಗೆ ಬಾಂಡ್‌ಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಶ್ರೀಶೈಲ್ ಬಿರಾದಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ಪರಶುರಾಮ್ ವೈ. ಶೆಟ್ಟೆಪ್ಪನವರ್, ಮಕ್ಕಳ ರಕ್ಷಣಾ ಯೋಜನೆ-ಯುನಿಸೆಫ್ ಕೊಪ್ಪಳದ ಸಂಯೋಜಕರಾದ ಹರೀಶ್ ಜೋಗಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಹಾಂತಸ್ವಾಮಿ ಪೂಜಾರ, ವಾರ್ತಾ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ. ಸುರೇಶ್ ಜಿ., ಕೊಪ್ಪಳ ವೃತ್ತದ ಕಾರ್ಮಿಕ ನಿರೀಕ್ಷಕರಾದ ಮಂಜುಳಾ, ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕರಾದ ಬಸವರಾಜ ಹಿರೇಗೌಡ್ರ, ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಶಾಲಾ ಶಿಕ್ಷಕರು, ಮಕ್ಕಳು ಸೇರಿದಂತೆ ಇತರೆ ಹಲವಾರು ಜನರು ಉಪಸ್ಥಿತರಿದ್ದರು.

## ರಾಜ್ಯ ಸರ್ಕಾರದ ಸಾಧನೆಯ ಮಾಹಿತಿ ಪ್ರದರ್ಶನ ಮಳಿಗೆಗೆ ಸಂಸದರಾದ ಜಿ ಕುಮಾರ ನಾಯಕ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 12-ರಾಜ್ಯ ಸರ್ಕಾರದ ಅಭಿವೃದ್ಧಿಗಳ ಕುರಿತು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಜೂನ್ 12ರಿಂದ ಜೂನ್ 18ರವರೆಗೆ ರಾಯಚೂರು ನಗರದ ಕೇಂದ್ರ ಬಸ್ ನಿಲ್ದಾಣದಲ್ಲಿ ಆಯೋಜಿಸಿರುವ ಮಾಹಿತಿ ಪ್ರದರ್ಶನ ಮಳಿಗೆಗೆ ರಾಯಚೂರ ಸಂಸದರಾದ ಜಿ.ಕುಮಾರನಾಯಕ ಅವರು ಜೂನ್ 12 ರಂದು ಚಾಲನೆ ನೀಡಿದರು. ಬೆಳಗ್ಗೆ ರಾಯಚೂರ ನಗರದಲ್ಲಿ ನಡೆದ ಖಾಸಗಿ ಕಾರ್ಯಕ್ರಮದಲ್ಲಿ ಭಾಗಿಯಾಗಿ ಬಳಿಕ ನೇರವಾಗಿ ರಾಯಚೂರ ಕೇಂದ್ರ ಬಸ್ ನಿಲ್ದಾಣಕ್ಕೆ ಆಗಮಿಸಿದ ಸಂಸದರು, ಕೇಂದ್ರ ಬಸ್ ನಿಲ್ದಾಣದ ಮುಖ್ಯದ್ವಾರದ ಮೂಲಕ ಆಗಮಿಸುವ ವೇಳೆ 'ಗ್ಯಾರಂಟಿ ಸಮರ್ಪಣೆ ಅಭಿವೃದ್ಧಿಯ ಸಂಕಲ್ಪ, ನಾಡಿನ ಏಳು ಕೋಟಿ ಜನರ ಬೆಳಕು ಗ್ಯಾರಂಟಿ ಬದುಕು' ಫಲಕದ ಬಳಿಯಲ್ಲಿ ನಿಂತು ಸೆಲ್ಫಿ ತೆಗೆಯಿಸಿಕೊಂಡದ್ದು ವಿಶೇಷವಾಗಿತ್ತು.

ಬಳಿಕ ರಿಬ್ಬನ್ ಕತ್ತರಿಸುವ ಮೂಲಕ ಸಂಸದರು, ಮಾಹಿತಿಯ ಮಳಿಗೆಗೆ ಚಾಲನೆ ನೀಡಿದರು.

ಗೃಹಲಕ್ಷ್ಮಿ, ಗೃಹಜ್ಯೋತಿ, ಅನ್ನಭಾಗ್ಯ, ಶಕ್ತಿ, ಯುವನಿಧಿ ಯೋಜನೆಗಳಿಗೆ ರಾಜ್ಯ ಸರಕಾರ ನೀಡಿದ ನೆರವು, ರಾಜ್ಯ ಸರಕಾರವು ವಸತಿ ರಹಿತರಿಗೆ ಸೂರು ಕಲ್ಪಿಸಿದ್ದು, ವಿದ್ಯಾಸಿರಿ ಯೋಜನೆ, ಇಂದಿರಾ ಕ್ಯಾಂಟೀನ್, ಆರೋಗ್ಯ ಯೋಜನೆಗಳು ಸೇರಿದಂತೆ ನಾನಾ ಮಾಹಿತಿಯ ಫಲಕಗಳನ್ನು ಸಂಸದರು ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು.

ಕರ್ನಾಟಕ ಸರ್ಕಾರದ ಹೆಮ್ಮೆಯ ಗ್ಯಾರಂಟಿ ಯೋಜನೆಗಳನ್ನು ಎಲ್ಲರಿಗೂ ಪರಿಚಯಿಸುವ ಈ ಪ್ರದರ್ಶನ ಚೆನ್ನಾಗಿ ಮೂಡಿ ಬಂದಿದೆ. ಶುಭಾಶಯಗಳು ಎಂದು ಇದೆ ವೇಳೆ ಸಂಸದರು ವಿಜಿಟ್ ಬುಕನಲ್ಲಿ ಬರೆದು ಸಂತಷ ವ್ಯಕ್ತಪಡಿಸಿದರು.

ಪುಸ್ತಕ ಬಿಡುಗಡೆ: ರಾಯಚೂರಿನ ವಾರ್ತಾ ಇಲಾಖೆಯು ಪ್ರಕಟಿಸಿದ ರಾಜ್ಯ ಸರ್ಕಾರದ ಎರಡು ವರ್ಷಗಳ ಸಾಧನೆಯ ರಾಯಚೂರ ಜಿಲ್ಲೆಯ ಸಮಗ್ರ ಅಭಿವೃದ್ಧಿ ಮಾಹಿತಿಯ 'ಎಡೆದೊರೆ ನಾಡಲ್ಲಿ ಪಂಚ ಗ್ಯಾರಂಟಿ ಯಶೋಗಾಥೆ' ಪುಸ್ತಕವನ್ನು ಸಂಸದರು ಇದೆ ವೇಳೆ ಬಿಡುಗಡೆ ಮಾಡಿದರು.

ಪುಸ್ತಕ ವಿತರಣೆ: ವಾರ್ತಾ ಇಲಾಖೆ ಪ್ರಕಟಿಸುವ ವಾರ್ತಾ ಜನಪದ ಮಾಸಿಕ ಮತ್ತು ರಾಯಚೂರ ಜಿಲ್ಲೆಯ ಸಮಗ್ರ ಅಭಿವೃದ್ಧಿ ಮಾಹಿತಿಯ 'ಎಡೆದೊ-ರೆ ನಾಡಲ್ಲಿ ಪಂಚ ಗ್ಯಾರಂಟಿ ಯಶೋಗಾಥೆ' ಪುಸ್ತಕವನ್ನು ಇದೆ ವೇಳೆ ಸಾರ್ವಜನಿಕರಿಗೆ ವಿತರಿಸಲಾಯಿತು.

ಇದೆವೇಳೆ, ರಾಯಚೂರು ಒಕ್ಕಲುತನ ಹುಟ್ಟುವಳಿ ಮಾರಾಟ ಹಾಗೂ ಸಂಸ್ಕರಣ ಸಹಕಾರ ಸಂಘದ ಶ್ರೀ ಪತಂಗೆ ಜಯವಂತರಾವ್, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಮಗದ ವಿಭಾಗೀಯ ನಿಯಂತ್ರಣಾಧಿಕಾರಿಗಳಾದ ಎಂ.ಎಸ್.ಚಂದ್ರಶೇಖರ, ರಾಯಚೂರ ವಾರ್ತಾ ಇಲಾಖೆಯ ಗವಿಸಿದ್ದಪ್ಪ ಹೊಸಮನಿ, ಪ್ರಕಾಶ, ಲಿಂಗರಾಜ್, ಹೊರಗುತ್ತಿಗೆ ನೌಕರರಾದ ರಮೇಶ, ವೆಂಕಟೇಶ ಹಾಗೂ ಇನ್ನಿತರರು ಇದ್ದರು.

## ಜಮೀನಿನಲ್ಲಿ ಯಾವುದೇ ಕೃಷಿ ಪೂರ್ವ ಚಟುವಟಿಕೆ ಕೈಗೊಳ್ಳಬಾರದೆಂದು ರೈತರಿಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.11-ಮೆಗಾಟೆಕ್ಸ್‌ಟೈಲ್ ಪಾರ್ಕ್ ಸ್ಥಾಪಿಸಲಾಗುತ್ತಿರುವ ಹಿನ್ನೆಲೆಯಲ್ಲಿ ಕಲಬುರಗಿ ತಾಲೂಕಿನ ಫರಹತಾಬಾದ ಹೋಬಳಿಯ ನದಿಸಿನ್ನೂರ ಮತ್ತು ಹೊನ್ನಕಿರಣಗಿ ಗ್ರಾಮಗಳ ವ್ಯಾಪ್ತಿಗೆ ಸೇರಿದ ಸರ್ಕಾರಕ್ಕೆ ನೀಡಿರುವ ವಿವಿಧ ಸರ್ವೆ ನಂಬರ್‌ಗಳ 1000 ಎಕರೆ ಜಾಗದಲ್ಲಿ ರೈತರು ಯಾವುದೇ ಕೃಷಿ ಪೂರ್ವ, ಬಿತ್ತನೆ, ಕುಂಟಿ ಹಾಗೂ ನೇಗಿಲು ಚಟುವಟಿಕೆಗಳನ್ನು ಕೈಗೊಳ್ಳಬಾರದೆಂದು ಕಲಬುರಗಿ ಜಿಲ್ಲಾ ಪಂಚಾಯತ್ ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಹಭಾಗಿತ್ವದಲ್ಲಿ ಕಲಬುರಗಿ ತಾಲೂಕಿನ ಫರಹತಾಬಾದ ಹೋಬಳಿಯ ನದಿಸಿನ್ನೂರ ಮತ್ತು ಹೊನ್ನಕಿರಣಗಿ ಗ್ರಾಮಗಳ ವ್ಯಾಪ್ತಿಗೆ ಸೇರಿದ ವಿವಿಧ ಸರ್ವೆ ನಂಬರ್‌ಗಳ 1000 ಎಕರೆ ಪ್ರದೇಶದಲ್ಲಿ ಪಿ.ಪಿ.ಪಿ ಮಾದರಿಯಲ್ಲಿ ಮೆಗಾ ಟೆಕ್ಸ್‌ಟೈಲ್ ಪಾರ್ಕ್‌ನ್ನು ಸ್ಥಾಪಿಸಲಾಗುತ್ತಿದೆ. ಈ ಉದ್ದೇಶಕ್ಕಾಗಿ 1000 ಎಕರೆ ಜಮೀನನ್ನು ಪಿಎಂ-ಮಿತ್ರಾ ಮೆಗಾ ಜವಳಿ ಪಾರ್ಕ್ ಕರ್ನಾಟಕ ಲಿ., ಈ ಎಸ್‌ಪಿವಿಗೆ ಹಸ್ತಾಂತರಿಸಲಾಗಿದೆ. ಈ ಮೆಗಾ ಜವಳಿ ಪಾರ್ಕ್‌ಗೆ ಪ್ರಸ್ತುತ ರಸ್ತೆ, ವಿದ್ಯುತ್, ನೀರು ಮುಂತಾದ ಮೂಲಭೂತ ಸೌಲಭ್ಯಗಳ ಕಾಮಗಾರಿಗಳನ್ನು ಒದಗಿಸಲು ಸಂಬಂಧಿಸಿದ ಇಲಾಖೆಗಳಿಂದ ಟೆಂಡರ್ ಪ್ರಕ್ರಿಯೆ ಚಾಲ್ತಿಯಲ್ಲಿದೆ ಎಂದು ಅವರು ತಿಳಿಸಿದ್ದಾರೆ.

## ನಾಗರಿಕ ರಕ್ಷಣಾ ಸ್ವಯಂ ಸೇವಕರಾಗಿ ಕಾರ್ಯನಿರ್ವಹಿಸಲು ಆಸಕ್ತಿಯುಳ್ಳ ಮಾಜಿ ಸೈನಿಕರು ನೋಂದಣಿಗೆ ಸೂಚನೆ

ಕಲಬುರಗಿ,ಜೂ.11-ನಾಗರಿಕ ರಕ್ಷಣಾ ಸ್ವಯಂ ಸೇವಕರಾಗಿ ಕಾರ್ಯನಿರ್ವಹಿಸಲು ಆಸಕ್ತಿಯುಳ್ಳ ಮಾಜಿ ಸೈನಿಕರು ಕಲಬುರಗಿ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪ ನಿರ್ದೇಶಕ ಕಚೇರಿಯಲ್ಲಿ 2025ರ ಜೂನ್ 19 ರೊಳಗಾಗಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕೆಂದು ಕಲಬುರಗಿ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.

ವಾಯುದಾಳಿ ಎಚ್ಚರಿಕೆಯ ಸನ್ನಿವೇಶಗಳಲ್ಲಿ ಮತ್ತು ನಂತರದ ಬ್ಲ್ಯಾಕೌಟ್, ಅಗ್ನಿಶಾಮಕ ರಕ್ಷಣೆ, ಶೋಧ ಮತ್ತು ರಕ್ಷಣೆ, ನಾಗರಿಕರನ್ನು ಸುರಕ್ಷಿತ ಪ್ರದೇಶಗಳು/ಬಂಕರ್‌ಗಳಿಗೆ ಸ್ಥಳಾಂತರಿಸುವುದು, ತಾತ್ಕಾಲಿಕ ಆಸ್ಪತ್ರೆಗಳ ರಚನೆ, ಪ್ರಕೃತಿ ವಿಪತ್ತುಗಳು ಮತ್ತು ಇತರ ತುರ್ತು ಪರಿಸ್ಥಿತಿಗಳ ಸಮಯದಲ್ಲಿ ಸಾರ್ವಜನಿಕರ ರಕ್ಷಣೆಗೆ ಸಹಾಯ ಮಾಡಲು ಮಾಜಿ ಸೈನಿಕರು ಶಿಸ್ತು ಶೌರ್ಯ ಮತ್ತು ಸೇವಾ ಮನೋಭಾವದಿಂದ ಸಮೃದ್ಧವಾಗಿರುವುದರಿಂದ ನಾಗರಿಕ ರಕ್ಷಣಾ ಸ್ವಯಂ ಸೇವಕರಾಗಿ ಕಾರ್ಯನಿರ್ವಹಿಸಲು ಅತ್ಯಂತ ಉಪಯುಕ್ತವಾಗಿದೆ.

ಮಾಜಿ ಸೈನಿಕರು ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಸೈನಿಕ ಕಲ್ಯಾಣ ಮತ್ತು ಪುರ್ನವಸತಿ ಇಲಾಖೆಯ ಉಪ ನಿರ್ದೇಶಕರ ಕಚೇರಿಯನ್ನು ಹಾಗೂ ಕಚೇರಿ ದೂರವಾಣಿ ಸಂಖ್ಯೆ 08472-225003ಗೆ ಸಂಪರ್ಕಿಸಲು ಕೋರಲಾಗಿದೆ.

ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ

## ಮಕ್ಕಳನ್ನು ಶಾಲೆಗೆ ಕಳುಹಿಸುವುದು ಪೋಷಕರ ಮೂಲಭೂತ ಹಕ್ಕು: ನ್ಯಾ. ಎಚ್.ಎ.ಸಾತ್ವಿಕ್

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 12-ಬಡತನದ ನೆಪವೊಡ್ಡಿ ಮಕ್ಕಳನ್ನು ಶಾಲೆಯಿಂದ ಹೊರಗುಳಿಸಿ ದುಡಿಮೆಗೆ ಹಚ್ಚುವುದು ಸಂವಿಧಾನ ವಿರೋಧಿ ನಡೆಯಾಗಲಿದೆ. ಮಕ್ಕಳನ್ನು ಕಡ್ಡಾಯವಾಗಿ ಶಾಲೆಗೆ ಕಳಿಸುವುದು ಪೋಷಕರ ಮೂಲಭೂತ ಹಕ್ಕು ಆಗಿದೆ ಎಂದು ಗೌರವಾನ್ವಿತ ಹಿರಿಯ ಶ್ರೇಣಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಎಚ್.ಎ.ಸಾತ್ವಿಕ್ ಅವರು ಹೇಳಿದರು.

ಜೂನ್ 12ರಂದು ಗುರುವಾರ ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿಯ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪಂಚಾಯತ್, ಪೊಲೀಸ್ ಇಲಾಖೆ, ಮಹಾನಗರ ಪಾಲಿಕೆ, ಶಿಕ್ಷಣ ಇಲಾಖೆ, ಕಾರ್ಮಿಕ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮಕ್ಕಳ ಸಹಾಯವಾಣಿ ಘಟಕ, ಸ್ವಯಂ ಸೇವಾ ಸಂಸ್ಥೆಗಳು ಮತ್ತು ಜಿಲ್ಲಾ ಬಾಲಕಾರ್ಮಿಕ ಯೊಜನೆ ರಾಯಚೂರು ಅವರ ಸಂಯುಕ್ತಾಶ್ರಯದಲ್ಲಿ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ-2025ರ ಅಂಗವಾಗಿ ನಡೆದ ಜಾಗೃತಿ ಜಾಥಾಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಸಂವಿಧಾನವು ಮಕ್ಕಳಿಗೆ ಶಿಕ್ಷಣ ನೀಡುವುದು ಮೂಲಭೂತ ಹಕ್ಕು ಎಂದು ತಿಳಿಸುತ್ತದೆ. ಯಾವುದೇ ಮಕ್ಕಳು ಶಿಕ್ಷಣದಿಂದ ವಂಚಿತವಾಗದಂತೆ ಪೋಷಕರು ಎಚ್ಚರವಹಿಸಬೇಕು. 14 ವರ್ಷದೊಳಗಿನ ಮಕ್ಕಳನ್ನು ದುಡಿಮೆಗೆ ಹಚ್ಚುವುದು ಅಪರಾಧವಾಗಿದೆ. ಮಕ್ಕಳಿಗೆ ಶಿಕ್ಷಣ ಒದಗಿಸುವ ಮೂಲಕ ಅವರ ಭವಿಷ್ಯವನ್ನು ಉಜ್ವಲಗೊಳಿಸಬೇಕು ಎಂದರು.

ಮಕ್ಕಳನ್ನು ಕೃಷಿ ಸೇರಿದಂತೆ ಉದ್ಯಮ, ಹೋಟಲ್‌ಗಳಲ್ಲಿ ಬಳಸುವುದು ಶಿಕ್ಷಾರ್ಹ ಅಪರಾಧವಾಗಿದೆ. ಇಂತಹ ಘಟನೆಗಳು ಕಂಡುಬಂದಲ್ಲಿ ಕೂಡಲೇ ಸಂಬಂಧಿಸಿದ ಅಧಿಕಾರಿಗಳಿಗೆ ಮಾಹಿತಿ ನೀಡಬೇಕು. ಮಕ್ಕಳನ್ನು ಚೆನ್ನಾಗಿ ಓದಿಸಿ ಉನ್ನತ ಹುದ್ದೆಗಳಾದ ಐಎಎಸ್, ಐಪಿಎಸ್ ಅಧಿಕಾರಿಗಳಾಗಿ ಕಾರ್ಯನಿರ್ವಹಿಸುವಂತೆ ಪೋಷಕರು ಮಕ್ಕಳಿಗೆ ಬೆಂಬಲ ನೀಡಬೇಕೆಂದರು.

ಇದೆ ವೇಳೆ, ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ-ಯ ಅಂಗವಾಗಿ ಪ್ರಮಾಣ ವಚನ ಬೋಧಿಸಲಾಯಿತು. ಬಾಲಕಾರ್ಮಿಕ ತರಬೇತಿ ಕೇಂದ್ರಗಳಲ್ಲಿ ವಿದ್ಯಾಭ್ಯಾಸ ಮಾಡಿ ಉತ್ತಮ ಸಾಧನೆ ಗೈದ ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಗೌರವಿಸಲಾಯಿತು.

ಇದೇ ಸಂದರ್ಭದಲ್ಲಿ ಮಕ್ಕಳ ಕಲ್ಯಾಣ ಸಮಿತಿಯ ಜಿಲ್ಲಾಧ್ಯಕ್ಷರಾದ ಮಂಗಳ ಹೆಗಡೆ, ಜಿಲ್ಲಾ ಕಾರ್ಮಿಕ ಅಧಿಕಾರಿ ಆರತಿ, ಮಹಾನಗರ ಪಾಲಿಕೆಯ ಉಪ ಆಯುಕ್ತರಾದ ಸಿದ್ದಯ್ಯಲಿಂಗಸ್ವಾಮಿ ಹಿರೇಮಠ, ರಾಯಚೂರು ಕ್ಷೇತ್ರ ಶಿಕ್ಷಣಾಧಿಕಾರಿ ಈರಣ್ಣ ಕೋಸಗಿ, ಜಿಲ್ಲಾ ಬಾಲಕಾರ್ಮಿಕ ಯೋಜನಾ ನಿರ್ದೇಶಕರಾದ ಮಂಜುನಾಥ ರೆಡ್ಡಿ, ಜಿಲ್ಲಾ ಮಕ್ಕಳ ರಕ್ಷಣ ಘಟಕದ ರಕ್ಷಣಾಧಿಕಾರಿ ಅಮರೇಶ, ಕಾರ್ಮಿಕ ನಿರೀಕ್ಷಕರಾದ ಮಹ್ಮದ್ ಉಮರ್ ಅಬ್ದುಲ್ ಘನಿ, ಪ್ರಿಯಾಂಕ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು, ಸ್ವಯಂ ಸೇವಾ ಸಂಸ್ಥೆಗಳ ಪ್ರತಿನಿಧಿಗಳು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಯೋಗ ದಿನಾಚರಣೆಯ ಅಂಗವಾಗಿ ಪೂರ್ವಭಾವಿ ಕಾರ್ಯಕ್ರಮವಾದ 'ಹರಿತ ಯೋಗ' ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.12-ಕಲಬುರಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಆಯುಷ್ ಇಲಾಖೆ ವತಿಯಿಂದ 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ಪೂರ್ವಭಾವಿ ಕಾರ್ಯಕ್ರಮವಾದ "ಹರಿತ ಯೋಗ" ಕಾರ್ಯಕ್ರಮವನ್ನು ಕಲಬುರಗಿ ಜಿಲ್ಲಾ ಆಯುಷ್ ಅಧಿಕಾರಿ ಡಾ.ಕೆ.ಬಿ.ಬಬಲಾದಿ ಇವರ ನೇತೃತ್ವದಲ್ಲಿ ಕಲಬುರಗಿಯ ಆಳಂದ ರಸ್ತೆಯ ವಿವೇಕಾನಂದ ಸಾರ್ವಜನಿಕ ಉದ್ಯಾನವನದಲ್ಲಿ ಗುರುವಾರ ಹಮ್ಮಿಕೊಳ್ಳಲಾಯಿತು.

ಮೊದಲಿಗೆ ಕಲಬುರಗಿ ಎನ್.ಸಿ.ಸಿ. ಹಾಗೂ ಸ್ಕೌಟ್ಸ್ ಆಂಡ್ ಗೈಡ್ಸ್ ಹಾಗೂ ಆಯುಷ್ ಇಲಾಖೆ ವತಿಯಿಂದ ಸ್ವಚ್ಛತೆ ಕಾರ್ಯಕ್ರಮ, ಈ ಉದ್ಯಾನವನದಲ್ಲಿ ಸಸಿ ನೆಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಈ ಹರಿತ ಯೋಗ ಕಾರ್ಯಕ್ರಮದ ಹಿನ್ನೆಲೆಯಲ್ಲಿ ಜಿಲ್ಲಾ ಆಯುಷ್ ಅಧಿಕಾರಿ ಡಾ.ಕೆ.ಬಿ.ಬಬಲಾದಿ ಯೋಗದ ಮಹತ್ವದ ಕುರಿತು ಉಪನ್ಯಾಸ ನೀಡಿದರು. ಯೋಗ ತರಬೇತುದಾರರಾದ ಸುದೀಪ್ ಮತ್ತು ಶಶಿಕಲಾ ಅವರು ಎಲ್ಲಾ ನಾಗರಿಕರು, ಎನ್.ಸಿ.ಸಿ., ಸ್ಕೌಟ್ಸ್ ಆಂಡ್ ಗೈಡ್ಸ್ ಹಾಗೂ ಎಲ್ಲಾ ವಿದ್ಯಾರ್ಥಿಗಳಿಗೆ ಯೋಗಾಸಾನ ಮಾಡಿಸಿದರು. ಕಾರ್ಯಕ್ರಮದಲ್ಲಿ ಚಿತ್ತಾಪೂರ ಸರ್ಕಾರಿ ಆಯುರ್ವೇದ ಆಸ್ಪತ್ರೆ ವೈದ್ಯಾಧಿಕಾರಿ ಡಾ.ಮಹಾದೇವಿ ಮತ್ತು ಕಮಲಾಪೂರ ಸರ್ಕಾರಿ ಆಯುರ್ವೇದ ಆಸ್ಪತ್ರೆ ವೈದ್ಯಾಧಿಕಾರಿ ಡಾ.ಮುಕುಂದ್ ಕುಲಕರ್ಣಿ ಅವರು ಮಾತನಾಡಿದರು. ಕಾರ್ಯಕ್ರಮದಲ್ಲಿ ಸಂತೋಷ ಬಣಷೆಟ್ಟಿ, ಮಲ್ಲಿನಾಥ ದಂಗಾಪೂರೆ ಓಂಕಾರ, ಮಿಲೇನಿಯಮ್ ಕಾಲೇಜಿನ ಪ್ರಾಂಶುಪಾಲ ಬಸವರಾಜ, ವಿದ್ಯಾರ್ಥಿಗಳು, ನಾಗರಿಕರು ಹಾಗೂ ಹಿರಿಯ ನಾಗರಿಕರು ಸೇರಿದಂತೆ 120 ಕ್ಕೂ ಹೆಚ್ಚು ಜನ ಕಾರ್ಯಕ್ರಮದಲ್ಲಿ ಉತ್ಸಾಹದಿಂದ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

ಈ ಕಾರ್ಯಕ್ರಮದಲ್ಲಿ ಎನ್.ಸಿ.ಸಿ. ಬಟಾಲಿಯನ್ ಅಧಿಕಾರಿಗಳು, ಎನ್.ಸಿ.ಸಿ. ವಿದ್ಯಾರ್ಥಿಗಳು, ಸ್ಕೌಟ್ಸ್ & ಗೈಡ್ಸ್ ಅಧಿಕಾರಿ ರವಿ ಬರಾಡ್, ವಿದ್ಯಾರ್ಥಿಗಳು ಮತ್ತು ಅರಣ್ಯ ಇಲಾಖೆಯ ಸಿಬ್ಬಂದಿಗಳು, ಆಯುಷ್ ಇಲಾಖೆಯ ಸಿಬ್ಬಂದಿಗಳಾದ ಅರುಣ, ಸೀಮಾ ಹಾಗೂ ಇನ್ನಿತರ ಎಲ್ಲಾ ಸಿಬ್ಬಂದಿಗಳು ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಿರ್ವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು. ವೈದ್ಯಾಧಿಕಾರಿ ಡಾ. ಮುಕುಂದ ಕಾರ್ಯಕ್ರಮ ನಿರೂಪಿಸಿದರು. ಜಿಲ್ಲಾ ಆಯುಷ್ ಕಚೇರಿಯ ಸೂಪರಿಂಟೆಂಡೆಂಟ್‌ರಾದ ಬಸವರಾಜ ವಂದಿಸಿದರು.

## ಉಪನ್ಯಾಸಕರು, ಶಿಕ್ಷಕರ ಹುದ್ದೆಗಳಿಗೆ : ಅತಿಥಿ ಉಪನ್ಯಾಸಕರು, ಶಿಕ್ಷಕರ ಆಯ್ಕೆ ಮಾಡಲು ಸಂದರ್ಶನಕ್ಕೆ ಸೂಚನೆ

ಯಾದಗಿರಿ : ಜೂನ್ 12 : 2025-26ನೇ ಸಾಲಿನಲ್ಲಿ ಯಾದಗಿರಿ ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಉಪನ್ಯಾಸಕರು, ಶಿಕ್ಷಕರ ಹುದ್ದೆಗಳಿಗೆ ಅತಿಥಿ ಉಪನ್ಯಾಸಕರು, ಶಿಕ್ಷಕರನ್ನು ಆಯ್ಕೆ ಮಾಡಲು ಸಂದರ್ಶನ ನಡೆಯಲಿದೆ ಎಂದು ಯಾದಗಿರಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಶ್ರೀಮತಿ ಭಾಗ್ಯಶ್ರೀ ಕುಂಬಾರ ಅವರು ತಿಳಿಸಿದ್ದಾರೆ.

ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಕಾಲೇಜು, ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ, ಕಾಲೇಜು ಹಾಗೂ ಮೌಲಾನಾ ಆಜಾದ್ ಮಾದರಿ ಶಾಲೆ, ಕಾಲೇಜುಗಳಿಗೆ ಅತಿಥಿ ಉಪನ್ಯಾಸಕರು, ಶಿಕ್ಷಕರನ್ನು ಸಾಮಾನ್ಯ ಪ್ರವೇಶ ಪರೀಕ್ಷೆ ಮೂಲಕ ತಾತ್ಕಾಲಿಕವಾಗಿ ಆಯ್ಕೆ ಮಾಡಲು ಅರ್ಜಿ ಆಹ್ವಾನಿಸಿ ಪ್ರವೇಶ ಪರೀಕ್ಷೆಯನ್ನು ನಡೆಸಲಾಗಿತ್ತು. ಅದರಂತೆ ಅರ್ಹ ಅಭ್ಯರ್ಥಿಗಳನ್ನು ಸಂದರ್ಶನ ನಡೆಸಿ ಆಯ್ಕೆ ಮಾಡಲು 1:2 ರಂತೆ ಅಭ್ಯರ್ಥಿಗಳ ಆಯ್ಕೆಪಟ್ಟಿಯನ್ನು ಬಿಡುಗಡೆಗೊಳಿಸಿದೆ. ಪ್ರಯುಕ್ತ 1:2 ರಂತೆ ಆಯ್ಕೆಯಾದ ಅರ್ಹ ಅಭ್ಯರ್ಥಿಗಳು ಸಂದರ್ಶನವನ್ನು 2025ರ ಜೂನ್ 16 ರಂದು ಬೆಳಿಗ್ಗೆ 9 ಗಂಟೆಗೆ ಅಲ್ಪಸಂಖ್ಯಾತರ ಮೌಲಾನಾ ಆಜಾದ ಮಾದರಿ ಶಾಲೆ, ವಿಶ್ವರಾಧ್ಯ ನಗರ, ಗ್ರಾಮೀಣ ಪೊಲೀಸ್ ಠಾಣೆ, ಹಿಂದುಗಡೆ, ವಿಶಾಲ ಮಾರ್ಟ್ ಹತ್ತಿರ, ಯಾದಗಿರಿ ಇಲ್ಲಿ ನಡೆಯಲಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿಗಳ ಕಾರ್ಯಾಲಯ, ಕೊಠಡಿ ಸಂಖ್ಯೆ ಸಿ-7, ಮೊದಲನೇ ಮಹಡಿ, ಜಿಲ್ಲಾ ಕಛೇರಿಗಳ ಸಂಕೀರ್ಣ (ಮಿನಿ ವಿಧಾನ ಸೌಧ) ಚಿತ್ತಾಪುರ ರಸ್ತೆ, ಯಾದಗಿರಿ ಕಛೇರಿ ದೂ.ಸಂ.08473253235, ಶಹಾಪೂರ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ಮೊ.ನಂ.8095971486, ಸುರಪುರ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ಮೊ.ನಂ.7795592068,

# ಶಾಲೆ ಬಿಟ್ಟ ಮಕ್ಕಳ ಶೈಕ್ಷಣಿಕ ಸುಧಾರಣೆ ವಿಧಾನಕ್ಕೆ ಮೆಚ್ಚುಗೆ ಶಾಹೀನ್ 'ಎಐಸಿಯು'ಗೆ ಶಿಕ್ಷಣ ತಜ್ಞರ ಸಮಿತಿ ಭೇಟಿ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 12 : ಶಾಹೀನ್ ಶಿಕ್ಷಣ ಸಂಸ್ಥೆಗಳ ಸಮೂಹದ ನಗರದ ಶೈಕ್ಷಣಿಕ ತೀವ್ರ ನಿಗಾ ಘಟಕ(ಎಐಸಿಯು)ಕ್ಕೆ ಕಲ್ಯಾಣ ಕರ್ನಾಟಕದ ಶಿಕ್ಷಣ ಗುಣಮಟ್ಟ ಸುಧಾರಣೆಗೆ ಕೆಕೆಆರ್‌ಡಿಬಿಯಿಂದ ರಚಿಸಲಾದ ಶಿಕ್ಷಣ ತಜ್ಞರ ಸಮಿತಿಯು ಬುಧವಾರ ಭೇಟಿ ನೀಡಿತು.

ಸಮಿತಿಯ ಅಧ್ಯಕ್ಷೆ ಛಾಯಾ ದೇಗಾಂವಕರ್, ಸದಸ್ಯರಾದ ಡಾ. ಅಬ್ದುಲ್ ಖದೀರ್, ಎನ್.ಬಿ.ಪಾಟೀಲ, ನಾಗಾಬಾಯಿ ಬಿ. ಬುಳ್ಳಾ ಹಾಗೂ ಮಲ್ಲಿಕಾರ್ಜುನ ಎಂ.ಎಸ್. ಅವರು ಘಟಕದಲ್ಲಿ ಕಲಿಕೆಯಲ್ಲಿ ಹಿಂದುಳಿದ ಹಾಗೂ ಶಾಲೆ ಬಿಟ್ಟ ಮಕ್ಕಳನ್ನು ಶೈಕ್ಷಣಿಕ ಮುಖ್ಯ ವಾಹಿನಿಗೆ ತರಲು ಅನುಸರಿಸುತ್ತಿರುವ ವಿಧಾನಗಳ ಬಗ್ಗೆ ಮಾಹಿತಿ ಪಡೆದರು.

ಘಟಕದ ಮುಖ್ಯಸ್ಥರು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ತಮ್ಮ ಅನುಭವ ಹಂಚಿಕೊಂಡರು. ಘಟಕಕ್ಕೆ ಬಂದ ಮೇಲೆ ಮೊಬೈಲ್ ವ್ಯಾಮೋಹದಿಂದ ಹೇಗೆ ಹೊರ ಬಂದೇವು, ಕಲಿಕೆಯಲ್ಲಿ ಹೇಗೆ ಆಸಕ್ತಿ ಹುಟ್ಟಿತು, ಶಿಕ್ಷಕರು ಆತ್ಮವಿಶ್ವಾಸ ವೃದ್ಧಿಸಿ ಬೇಸಿಕ್ ಸುಧಾರಣೆಗೆ ಹೇಗೆ ನೆರವಾದರು ಎನ್ನುವುದನ್ನು ವಿದ್ಯಾರ್ಥಿಗಳು ಎಳೆ ಎಳೆಯಾಗಿ ಬಿಡಿಸಿಟ್ಟರು. ಶಾಹೀನ್ ಸಮೂಹದ ಶಾಲಾ, ಕಾಲೇಜುಗಳನ್ನು ಹಿಂದೆಯೇ ಟ್ಯೂಷನ್, ಮೊಬೈಲ್, ಆಟೊಮೊಬೈಲ್‌ನಿಂದ ಮುಕ್ತಗೊಳಿಸಲಾಗಿದೆ. ಮನೆಪಾಠದಿಂದ ಮುಕ್ತಗೊಳಿಸಿದಾಗ, ಹೆಚ್ಚಿನ ಕಾಳಜಿಯ ಅವಶ್ಯಕತೆ ಮನಗಂಡು ಶೈಕ್ಷಣಿಕ ತೀವ್ರ ನಿಗಾ ಘಟಕದ ಯೋಜನೆ ರೂಪಿಸಲಾಯಿತು ಎಂದು ಶಾಹೀನ್ ಶಿಕ್ಷಣ ಸಂಸ್ಥೆಗಳ ಸಮೂಹದ ಅಧ್ಯಕ್ಷರೂ ಆದ ಸಮಿತಿಯ ಸದಸ್ಯ ಡಾ. ಅಬ್ದುಲ್ ಖದೀರ್ ತಿಳಿಸಿದರು.



ಘಟಕದಲ್ಲಿ ಪ್ರತಿ ಆರು ವಿದ್ಯಾರ್ಥಿಗಳಿಗೆ ತಲಾ ಒಬ್ಬರು ಶಿಕ್ಷಕರು ಇದ್ದಾರೆ. ವಿದ್ಯಾರ್ಥಿಗಳು ಯಾವ ವಿಷಯಗಳಲ್ಲಿ ಬಲಹೀನ ಆಗಿದ್ದಾರೋ ಆ ವಿಷಯಗಳ ವಿಶೇಷ ತರಬೇತಿ ಕೊಟ್ಟು, ಸುಧಾರಿಸಿ, ಬಳಿಕ ಆಯಾ ತರಗತಿಗೆ ಕಳುಹಿಕೊಡಲಾಗುತ್ತದೆ ಎಂದು ಹೇಳಿದರು. ಘಟಕದಲ್ಲಿ ಕಲಿಕೆಯಲ್ಲಿ ಹಿಂದುಳಿದ ಹಾಗೂ ಶಾಲೆ ಬಿಟ್ಟ ವಿದ್ಯಾರ್ಥಿಗಳ ಮೇಲೆ ನೇರ ನಿಗಾ ಇಡಲಾಗುತ್ತದೆ. ಹಂತ, ಹಂತವಾಗಿ ಅವರ ಶೈಕ್ಷಣಿಕ ಅಡಿಪಾಯ ಬಲಪಡಿಸಲಾಗುತ್ತದೆ. ಇದರಿಂದ ವಿದ್ಯಾರ್ಥಿಗಳಿಗೆ ಮುಂದಿನ ಕಲಿಕೆ ಬಹಳ ಸುಲಭವಾಗುತ್ತದೆ. ಘಟಕದ ನೆರವಿನಿಂದ ಕಲಿಕೆಯಲ್ಲಿ ಹಿಂದುಳಿದ ಮಕ್ಕಳೂ ಸರ್ಕಾರಿ ಕೋಟಾದಡಿ ವೈದ್ಯಕೀಯ ಸೀಟು ಪಡೆಯುತ್ತಿದ್ದಾರೆ. ವಿವಿಧ ವೃತ್ತಿಪರ ಕೋರ್ಸ್ ಸೀಟು ಗಿಟ್ಟಿಸಿಕೊಳ್ಳುತ್ತಿದ್ದಾರೆ ಎಂದು ತಿಳಿಸಿದರು.

ಘಟಕದಲ್ಲಿ 1 ರಿಂದ 12ನೇ ತರಗತಿ ವರೆಗಿನ ವಿದ್ಯಾರ್ಥಿಗಳಿಗೆ ತರಬೇತಿ ನೀಡಲಾಗುತ್ತದೆ. ವರ್ಷವಿಡೀ ಪ್ರವೇಶ ಪಡೆಯಲು ಮುಕ್ತ ಅವಕಾಶ ಇದೆ. ಸದ್ಯ ಘಟಕದಲ್ಲಿ ದೇಶದ ವಿವಿಧ ರಾಜ್ಯಗಳ 800 ವಿದ್ಯಾರ್ಥಿಗಳು ಇದ್ದಾರೆ ಎಂದು ವಿವರಿಸಿದರು.

ಶೈಕ್ಷಣಿಕ ತೀವ್ರ ನಿಗಾ ಘಟಕ ಮಕ್ಕಳ ಶೈಕ್ಷಣಿಕ ಸುಧಾರಣೆಗೆ ಶೇ 100ಕ್ಕೆ 100 ರಷ್ಟು ಪರಿಣಾಮಕಾರಿಯಾಗಿದೆ ಎಂದು ಛಾಯಾ ದೇಗಾಂವಕರ್ ಅಭಿಪ್ರಾಯ ವ್ಯಕ್ತಪಡಿಸಿದರು. ಕಲಿಕೆಯಲ್ಲಿ ಹಿಂದುಳಿಯುವುದು, ವಿಷಯ ಅರ್ಥವಾಗದಿರುವುದು ಮಕ್ಕಳು ಶಾಲೆ ಬಿಡಲು ಕಾರಣವಾಗುತ್ತದೆ. ಶೈಕ್ಷಣಿಕ ತೀವ್ರ ನಿಗಾ ಘಟಕದಿಂದ ಮಕ್ಕಳ ಬೇಸಿಕ್ ಬಲವಾಗುತ್ತದೆ. ಕಲಿಕೆಯಲ್ಲಿ ಆಸಕ್ತಿ ಹುಟ್ಟುತ್ತದೆ. ಶಾಲೆ ಬಿಡುವುದು ತಪ್ಪುತ್ತದೆ. ಶೈಕ್ಷಣಿಕ ಪ್ರಗತಿಗೂ ನೆರವಾಗುತ್ತದೆ ಎಂದು ತಿಳಿಸಿದರು. ಶಾಹೀನ್ ಶೈಕ್ಷಣಿಕ ತೀವ್ರ ನಿಗಾ ಘಟಕದ ಮುಖ್ಯಸ್ಥೆ ಮೇಹರ್ ಸುಲ್ತಾನಾ, ಶಾಹೀನ್ ಶಿಕ್ಷಣ ಸಂಸ್ಥೆಗಳ ಸಮೂಹದ ಸಿಇಒ ತೌಸಿಫ್ ಮಡಿಕೇರಿ ಮತ್ತಿತರರು ಇದ್ದರು. ಶಿಕ್ಷಣ ಇಲಾಖೆಯ ಕಲಬುರಗಿ ವಿಭಾಗದ ಆಯುಕ್ತ ಡಾ. ಆಕಾಶ್ ಶಂಕರ, ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಸಲೀಂ ಪಾಶಾ ಅವರೂ ಶಾಹೀನ್ ಕಾಲೇಜಿಗೆ ಭೇಟಿ ನೀಡಿದರು.

## ಬಾಲಕಾರ್ಮಿಕ ನಿರ್ಮೂಲನೆಗೆ ಶಿಕ್ಷಣವೇ ಅಸ್ತ್ರ : ನ್ಯಾ.ದಿಡ್ಡಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.12–ವಿವಿಧ ಕಾರಣಗಳಿಂದ ಬಾಲ ಕಾರ್ಮಿಕರಾಗಿ ಕೆಲಸ ಮಾಡುತ್ತಿರುವ ಮಕ್ಕಳನ್ನು ಗುರುತಿಸಿ, ಅವರಿಗೆ ಶಿಕ್ಷಣ ನೀಡಿದಾಗ ಮಾತ್ರ ಬಾಲಕಾರ್ಮಿಕ ಪದ್ದತಿ ನಿರ್ಮೂಲನೆ ಸಾಧ್ಯವೆಂದು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ನ್ಯಾ.ಚಂದ್ರಶೇಖರ ದಿಡ್ಡಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಪೊಲೀಸ್ ಇಲಾಖೆ, ಶಿಕ್ಷಣ, ಸಮಾಜ ಕಲ್ಯಾಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಕಾರ್ಮಿಕ ಹಾಗೂ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸಂಸ್ಥೆ ಸಹಯೋಗದಲ್ಲಿ ಗುರುವಾರ ಹಮ್ಮಿಕೊಂಡ ವಿಶ್ವ ಬಾಲಕಾರ್ಮಿಕ ಪದ್ದತಿ ವಿರೋಧಿ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, 14 ವರ್ಷದೊಳಗಿನ ಮಕ್ಕಳನ್ನು ಅವರ ಶಿಕ್ಷಣ ಹಕ್ಕಿನಿಂದ ವಂಚಿಸಿ, ದುಡಿಮೆಗೆ ಬಳಸುವುದು ಕಾನೂನು ಪ್ರಕಾರ ಅಪರಾಧವಾಗಿದ್ದು, ಮಕ್ಕಳನ್ನು ದುಡಿಸಿಕೊಳ್ಳುವವರ ವಿರುದ್ದ ಕಾನೂನು ಕ್ರಮಕ್ಕೈಗೊಳ್ಳಲು ಮುಂದಾಗಬೇಕು ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಪ್ರತಿಜ್ಞಾವಿಧಿ ಬೋಧಿಸಿ ಮಾತನಾಡಿದ ಜಿಲ್ಲಾಧಿಕಾರಿ ಜಾನಕಿ ಕೆ.ಎಂ, ಬಾಲಕಾರ್ಮಿಕರನ್ನು ಪತ್ತೆಹಚ್ಚಿ ಶಾಲೆಗೆ ಸೇರಿಸಿದ ಮಾತ್ರಕ್ಕೆ ಕರ್ತವ್ಯ ಮುಗಿಯದು. 2–3 ವರ್ಷಗಳವರೆಗೆ ನಿಗಾ ವಹಿಸಬೇಕು. ಶಿಕ್ಷಣವೇ ಜೀವನ ಬದಲಾವಣೆಗೆ ಏಕೈಕ ಮಾರ್ಗ. ನಮ್ಮ ಸುತ್ತಮುತ್ತ ಎಲ್ಲಿಯಾದರೂ ಬಾಲ ಕಾರ್ಮಿಕರು ಕಂಡುಬಂದಲ್ಲಿ ಕಾರ್ಮಿಕ ಇಲಾಖೆಯ 1098 ಸಹಾಯವಾಣಿಗೆ ಮಾಹಿತಿ ನೀಡುವ ಕಾರ್ಯವಾಗಬೇಕು. ಮಾಹಿತಿ ನೀಡುವುದು ಸಹ ನಿಮ್ಮ ಜವಾಬ್ದಾರಿ ಮಾಡಿದ ಹಾಗೆ ಎಂದರು.

ದುಷ್ಟ ಅಮಾನವೀಯ ಈ ಪದ್ದತಿಗೆ ತಿಲಾಂಜಲಿ ಇಡಬೇಕಾಗಿದೆ. ಬಾಲ್ಯವನ್ನು ಕದಿಯುವ, ಕಸಿಯುವ ಹಕ್ಕು ಯಾರಿಗೂ ಇಲ್ಲ. ಬಾಲ ಕಾರ್ಮಿಕರನ್ನು ಪತ್ತೆಹಚ್ಚುವ ಅಧಿಕಾರಿಗಳ ಪ್ರಯತ್ನಕ್ಕೆ ಸಾರ್ವಜನಿಕರು ಸಹ ನೆರವಾಗಬೇಕು. ಅಂದಾಗಮಾತ್ರ ಬಾಲಕಾರ್ಮಿಕರನ್ನು ಗುರುತಿಸಿ, ಶಿಕ್ಷಣ ನೀಡುವ ಮೂಲಕ ಮುಖ್ಯವಾಹಿನಿಗೆ ತರಲು ಸಾಧ್ಯವಾಗುತ್ತದೆ. ಬಾಲಕಾರ್ಮಿಕನಾಗಿದ್ದ ಬಸವರಾಜ ಲಮಾಣಿ ಬಾಲ ಕಾರ್ಮಿಕ ವಿಶೇಷ ಶಾಲೆಯಲ್ಲಿ ವ್ಯಾಸಂಗ ಮಾಡಿ ಜ್ಯೂನಿಯರ್ ಇಂಜಿನೀಯರ್ ಆಗಿರುವುದು ಬೇರೆಯವರಿಗೆ ಸ್ಪೂರ್ತಿಯಾಗಲಿದೆ ಎಂದು ಜಿಲ್ಲಾಧಿಕಾರಿ ಹೇಳಿದರು.

ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷ ಹನಮಂತಗೌಡ ಪಾಟೀಲ ಮಾತನಾಡಿದರು. ವಕೀಲರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಉಪ ಕಾನೂನು ನೆರವು ಅಭಿರಕ್ಷಕ ಪ್ರಶಾಂತ ನಾರಾಯಣಕರ, ಬಾಲ ಮತ್ತು ಕಿಶೋರ ಕಾರ್ಮಿಕರ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986, ತಿದ್ದುಪಡಿ ಕಾಯ್ದೆ 2016 ಕುರಿತು ಉಪನ್ಯಾಸ ನೀಡಿದರು. ಬಾಲಕಾರ್ಮಿಕರಾಗಿದ್ದ ಬಸವರಾಜ ಲಮಾಣಿ ಇಂಜಿನೀಯರಾದ ಬಗೆಯ ಅನುಭವವನ್ನು ಹಂಚಿಕೊಂಡರು. ಬಾಲಕಾರ್ಮಿಕತೆಯಿಂದ ಮುಕ್ತಿಹೊಂದಿ ಮುಖ್ಯವಾಹಿನಿ ಶಾಲೆಗೆ ಸೇರಿದ ಮಕ್ಕಳಿಗೆ ಪ್ರಶಂಸಣಾ ಪತ್ರ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ರಮೇಶ ಬದ್ನೂರ, ಜಿಲ್ಲಾ ಕಾರ್ಮಿಕ ಅಧಿಕಾರಿ ರಮೇಶ ಸುಂಬಡ, ಜಿಲ್ಲಾ ಬಾಲಕಾರ್ಮಿಕ ಸಂಸ್ಥೆಯ ಯೋಜನಾ ನಿರ್ದೇಶಕ ಸುಧಾಕರ ಬಡಿಗೇರ,

ಕಾರ್ಮಿಕ ನಿರೀಕ್ಷಕ ರಾಜಶೇಖರ ಕರಡಿಕೇರಿ ಉಪಸ್ಥಿತರಿದ್ದರು. ಕಾರ್ಯಕ್ರಮ ಪೂರ್ವದಲ್ಲಿ ಬಾಲಕಾರ್ಮಿಕ ವಿರೋಧಿ ದಿನದ ಅಂಗವಾಗಿ ಹಮ್ಮಿಕೊಂಡ ಜಾಗೃತಿ ಜಾಥಾಕ್ಕೆ ಚಾಲನೆ ನೀಡಲಾಯಿತು.

## ಜೂ.15 ರಂದು ಸಮಾಜ ಕಲ್ಯಾಣ ಸಚಿವ ಡಾ.ಹೆಚ್.ಸಿ.ಮಹಾದೇವಪ್ಪ ಬೀದರಗೆ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಜೂ.12 : ಸಮಾಜ ಕಲ್ಯಾಣ ಹಾಗೂ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಹೆಚ್.ಸಿ.ಮಹಾದೇವಪ್ಪ ಅವರು ಜೂನ್.15 ರಂದು ಬೀದರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿರುತ್ತಾರೆ.



ಅಂದು ಅವರು ಮಧ್ಯಾಹ್ನ 1.30 ಗಂಟೆಗೆ ಹುಮನಾಬಾದ ತಾಲ್ಲೂಕಿನ ದುಬಲಗುಂಡಿ ಗ್ರಾಮದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಮಧ್ಯಾಹ್ನ 3.30 ಗಂಟೆಗೆ ಬಸವಕಲ್ಯಾಣ ತಾಲ್ಲೂಕು ಹಿರೇನಾಗವ ಗ್ರಾಮದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಸಂಜೆ 6 ಗಂಟೆಗೆ ಬೀದರ ತಾಲ್ಲೂಕಿನ ಸಂಶಿನಗರದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆಂದು ಸಚಿವರ ವಿಶೇಷ ಕರ್ತವ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೀರು ಪೂರೈಕೆಗಾಗಿ ಮಾಜಿ ಸಚಿವರಿಗೆ ಸ್ಥಳೀಯರ ಮನವಿ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ :ಜೂ.12: ಪಟ್ಟಣದ ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರ ಗೃಹ ಕಚೇರಿಯಲ್ಲಿ ಗುರುವಾರ ಬೀ. ಬೀ. ಗಲ್ಲಿಯ ನಿವಾಸಿಗಳು ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರಿಗೆ ಭೇಟಿಯಾಗಿ ಕುಡಿಯುವ ನೀರು ಪೂರೈಕೆಗೆ ಮನವಿ ಮಾಡಿದರು.

> ಸ್ಥಳೀಯರ ವಿವಿಧ ಬೇಡಿಕೆಗಳು ಹಾಗೂ ಕುಡಿಯುವ ನೀರಿನ ಪೂರೈಕೆಯ ಕುರಿತು ಸಂಬಂಧಿಸಿದ ಇಲಾಖೆ ಅಧಿಕಾರಿಗಳ ಜತೆಯಲ್ಲಿ ಮಾತನಾಡಿ, ಸ್ಥಳೀಯರ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಿಕೊಡುವ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು.
>
> **ರಾಜಶೇಖರ ಪಾಟೀಲ್**
> **ಮಾಜಿ ಸಚಿವ, ಹುಮನಾಬಾದ್**

ಸ್ಥಳೀಯ ನಿವಾಸಿ ಫಾರುಖ್ ಮಾತನಾಡಿ, ಕಳೆದ ಸಾಕಷ್ಟು ದಿನಗಳಿಂದ ನಮ್ಮ ಗಲ್ಲಿಗೆ ನೀರು ಪೂರೈಕೆ ಆಗುತ್ತಿಲ್ಲ. ಇದರಿಂದಾಗಿ ಕುಡಿಯುವ ನೀರಿಗಾಗಿ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಈ ಕುರಿತು ಪುರಸಭೆ ಅಧಿಕಾರಿ ಹಾಗೂ ಸ್ಥಳೀಯ ಚುನಾಯಿತ ಪ್ರತಿನಿಧಿಗಳಿಗೆ ಮನವಿ ಮಾಡಿದರು ಕೂಡಾ ಯಾವುದೇ ಪ್ರಯೋಜನೆ ಆಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಪ್ರತಿನಿತ್ಯ ಬೆಳಗ್ಗೆ ಎದ್ದ ತಕ್ಷಣ ಎಲ್ಲ ಕೆಲಸ ಕಾರ್ಯಗಳನ್ನು ಬಿಟ್ಟು ನೀರು ತರುವ ಕೆಲಸದಲ್ಲಿಯೇ ಸಮಯ ವ್ಯರ್ಥವಾಗುತ್ತಿದೆ. ಇದರಿಂದ ದೈನಂದಿನ ಕೆಲಸ ಕಾರ್ಯಗಳಿಗೆ ಹೋಗಲು ವಿಳಂಬವಾಗುತ್ತಿದೆ. ಆದ್ದರಿಂದ ಜನಸಾಮಾನ್ಯರ ಹಿತದೃಷ್ಟಿಯಿಂದ ಸಂಬಂಧಿಸಿದ ಇಲಾಖೆ ಅಧಿಕಾರಿಗಳಿಗೆ ಜತೆಯಲ್ಲಿ ಮಾತನಾಡಿ ಶೀಘ್ರಗತಿಯಲ್ಲಿ ಕುಡಿಯುವ ನೀರು ಪೂರೈಕೆ ಮಾಡಬೇಕು ಎಂದರು.

ಈ ಸಂದರ್ಭದಲ್ಲಿ ಪುರಸಭೆ ಸದಸ್ಯ ಅಫ್ಸರಮಿಯ, ಸೈಯದ್ ಯಾಸೀನ್, ಸೈಯದ್ ಜಫರ್, ಸೈಯದ್ ಆಸೀಫ್, ಮಹಮ್ಮದ್ ಇಂಬ್ರಾನ್, ಮಹಮ್ಮದ್ ಸಾಜೀದ್, ಮಹಮ್ಮದ್ ಮೊಹೀದ್ಧಿನ್, ಅಬ್ದುಲ್ ಖಯಾಂ ಸೇರಿ ಅನೇಕರಿದ್ದರು.

## ಕಮಲನಗರ - ತೋರಣ ರಸ್ತೆ ಸಂಪೂರ್ಣ ಗುಂಡಿಮಯ ಪ್ರಯಾಣಿಕರ ಪರದಾಟ

ಮಲ್ಲಮ್ಮ ನುಡಿ ವಾರ್ತೆ
(ಪರಮೇಶ ರಾಂಪುರೆ)

ಕಮಲನಗರ:ಜೂ.12: ತಾಲೂಕು ಕೇಂದ್ರ ದಿಂದ ತೋರಣ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಾಂಪುರ ಮುಖ್ಯ ರಸ್ತೆ ಕಳೆದ ಮೂರು ತಿಂಗಳಿಂದ ಗುಂಡಿಗಳ ಹೆಚ್ಚಳದಿಂದ ಸುಗಮ ಸಂಚಾರಕ್ಕೆ ಪ್ರಾಯಾಣಿಕರು ಪ್ರತಿದಿನ ಪರದಾಟ ನಡೆಸುತ್ತಿದ್ದಾರೆ.

ಈ ಸಂಬಂಧ ಅನೇಕ ಬಾರಿ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದರು ಕೂಡ ಕಿಂಚಿತ್ತೂ ಕಾಳಜಿ ಯಾವ ಅಧಿಕಾರ ಹಾಗೂ ಜನ ಪ್ರತಿನಿಧಿಗಳು ವಹಿಸುತ್ತಿಲ್ಲ, ಅವರ ಹೇಳಿಕೆ ಪತ್ರಿಕೆ ಸುದ್ದಿಗೆ ಮಾತ್ರ ಸೀಮಿತವಾಗುತ್ತಿದೆ ಪರಿಹಾರ ಅಂತೂ ಆಗುತ್ತಿಲ್ಲ, ಎಂದು ಪ್ರಯಾಣಿಕರು ತೀವ್ರವಾಗಿ ಬೇಸರ ವ್ಯಕ್ತಪಡಿಸಿದರು.

ಒಟ್ಟಿನಲ್ಲಿ ಎಲ್ಲರ ಕಣ್ಣಿಗೆ ಕಾಣುತ್ತಿದ್ದರು ಅನೇಕ ಬಾರಿ ಇದೆ ರಸ್ತೆ ಮೇಲಿಂದ ಜನಪ್ರತಿನಿಧಿಗಳು ಸಂಚಾರ ಮಾಡಿದರು ಕೂಡ ರಸ್ತೆ ಯಾವುದೇ ದುರುಸ್ತಿ ಕಾಣದಿರುವುದು ಸ್ಥಳೀಯ ದುರ್ದೈವ ಸರಿ ಎನ್ನುವಂತೆ ಆಗಿದೆ.




ಸಂಪೂರ್ಣ ಹೊಸ ರಸ್ತೆ ಮಾಡುತ್ತೇವೆ ಎನ್ನುವ ಜನ ಪ್ರತಿನಿಧಿಗಳು

ಸದ್ಯ ಸಮಸ್ಯೆ ತೀವ್ರತೆ ಮತ್ತು ಮುಂಜಾಗೃತೆ ಕ್ರಮವಾಗಿ

ರಸ್ತೆ ಗುಂಡಿಗಳನ್ನು ಮುಚ್ಚಿ ಪ್ರಯಾಣಿಕರಿಗೆ ಸುಗಮ ಸಂಚಾರ–ಕ್ಕೆ ವ್ಯವಸ್ಥೆ ಮಾಡಿ ಕೂಡುವಂತೆ ಒತ್ತಾಯಿಸಿದ್ದಾರೆ.

## ಮುಖ್ಯಮಂತ್ರಿಸಿದ್ದರಾಮಯ್ಯ ಜಿಲ್ಲಾ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಜೂ. 12: ಕರ್ನಾಟಕ ಸರ್ಕಾರ ಮುಖ್ಯಮಂತ್ರಿಗಳು ಸನ್ಮಾನ್ಯ ಶ್ರೀ ಸಿದ್ದರಾಮಯ್ಯ ಅವರು ಜೂ.14 ರಂದು ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ ಪ್ರವಾಸವು ಕೆಳಗಿನಂತಿದೆ ಎಂದು ಸರ್ಕಾರದ ವಿಶೇಷ ಕಾರ್ಯದರ್ಶಿ ಕೆ.ಚಿರಂಜೀವಿ ಅವರು ತಿಳಿಸಿದ್ದಾರೆ. 2025ರ ಜೂನ್ 14ರ ಶನಿವಾರ ರಂದು ಬೆಳಿಗ್ಗೆ 11.55 ಗಂಟೆಗೆ ಹೆಲಿಕ್ಯಾಪ್ಟರ್ ಮೂಲಕ ಯಾದಗಿರಿ ಜಿಲ್ಲಾ ಕ್ರೀಡಾಂಗಣಕ್ಕೆ ಆಗಮಿಸಿ, ಯಾದಗಿರಿ



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಬೆಂಗಳೂರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಹಾಗೂ ಕಲಬುರಗಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ, ವತಿಯಿಂದ ಆಯೋಜಿಸಿರುವ, ಕರ್ನಾಟಕ ಸರ್ಕಾರದ ವತಿಯಿಂದ 440.68 ಕೋ.ರೂ.ಗಳ ವೆಚ್ಚದಲ್ಲಿ "ಆರೋಗ್ಯ ಆವಿಷ್ಕಾರ" ಯೋಜನೆಯಡಿ ಕಲ್ಯಾಣ ಕರ್ನಾಟಕ ವಿಭಾಗದ ಆರೋಗ್ಯ ಇಲಾಖೆಯ ವಿವಿಧ ಕಾಮಗಾರಿಗಳಿಗೆ ಅಡಿಗಲ್ಲು ಕಾರ್ಯಕ್ರಮ ಹಾಗೂ ಯಾದಗಿರಿ ಜಿಲ್ಲಾ ಬಂಜಾರಾ ಭವನದ ಉದ್ಘಾಟಿಸುವರು. ನಂತರ ಕಲಬುರಗಿಗೆ ಪ್ರಯಾಣ ಬೆಳೆಸುವರು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೋಟಿ ಗೀತಾ ಲೇಖನ ಯಜ್ಞದ ಮಹತ್ವ ಸಾರಿದ ರೆಡ್ಡಿ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಮೇ 6 ರಂದು ಹೈದ್ರಾಬಾದ್ ಕೋರ್ಟ್ ಗೆ ಹೋಗುವ ಮುಂಚೆ ರಾಜ್ಯದ ಕೊಲ್ಲೂರು ಮೂಕಾಂಬಿಕಾ ಮತ್ತು ಉಡುಪಿ ಶ್ರೀಕೃಷ್ಣಮಠಕ್ಕೆ ಹೋದಾಗ ಪುತ್ತಿಗೆ ಶ್ರೀಗಳು ಉಡುಪಿಯಲ್ಲಿ ಕೋಟಿ ಗೀತಾ ಯಜ್ಞದ ಪುಸ್ತಕ ನೀಡಿದ್ದನ್ನು ಗಂಗಾವತಿ ಶಾಸಕ ಜಿ.ಜನಾರ್ದನರೆಡ್ಡಿ ಸ್ಮರಿಸಿದರು.

ತೆಲಂಗಾಣ ಹೈಕೋರ್ಟ್ ರೆಡ್ಡಿ ಅವರಿಗೆ ಜೈಲಿನಿಂದ ಬಿಡುಗಡೆಗೆ ಅವಕಾಶ ಕಲ್ಪಿಸಿದ್ದು ಬೆಂಗಳೂರಿಗೆ ಆಗಮಿಸಿದ್ದ ಸಂದರ್ಭದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಉಡುಪಿ ಶ್ರೀಗಳು ಕೋಟಿ ಗೀತಾ ಲೇಖನ ಯಜ್ಞ ಕೋಟಿ ಜನ ಭಗವದ್ಗೀತೆಯನ್ನು ಬರೆಯಬೇಕೆಂಬ ಸಂಕಲ್ಪ ತೊಟ್ಟಿದ್ದಾರೆ. ನನಗೂ ಈ ಪುಸ್ತಕ ನೀಡಿದ್ದರು. 36 ದಿನಗಳ ಕಾಲ ಜೈಲಿನಲ್ಲಿದ್ದಾಗ 18 ಅಧ್ಯಾಯಗಳನ್ನು ಪೂರ್ತಿ ಕೈಯಾರೆ ಬರೆದಿರುವುದಾಗಿ ತಿಳಿಸಿದರು. ಉಡುಪಿ ಶ್ರೀಕೃಷ್ಣನ ಪಾದಕ್ಕೆ ಸ್ಮರಿಸಿ ಯುವ ಜನತೆ ಭಗವದ್ಗೀತೆಯನ್ನು ಬರೆಯುವ ಮೂಲಕ




ಕರ್ಮ ಸಿದ್ಧಾಂತಗಳನ್ನು ಸತತವಾಗಿ ಅವಲೋಕನ ಮಾಡಬೇಕು. ಪ್ರತಿ ಶ್ಲೋಕವೂ ಒಳ್ಳೆಯ ಅರ್ಥವನ್ನು ಸ್ಫುರಿಸುತ್ತದೆ. ನಾವು ಒಳ್ಳೆಯದನ್ನು ಮಾಡಿದರೆ ಒಳ್ಳೆಯದಾಗುತ್ತೆ, ಕೆಟ್ಟದ್ದನ್ನು ಮಾಡಿದರೆ ಕೆಟ್ಟದ್ದಾಗುತ್ತದೆ. ಅದರ ಮೇಲೆ ವಿಶ್ವಾಸ ಮೂಡಲು ಭಗವದ್ಗೀತೆ ಒಂದು ಅತ್ಯಂತ ವಿಶ್ವಾಸಾರ್ಹವಾದ ಆಕರವಾಗಿದೆ ಎಂದು ಹೇಳಿದರು. ಇ.ಡಿ.ವಿಚಾರ: ಸಂಡೂರು ಕ್ಷೇತ್ರದ ಚುನಾವಣಾ ಪ್ರಚಾರದಲ್ಲಿ ನಾನು ಸತತವಾಗಿ ಹೇಳಿದ್ದೆ. ವಾಲ್ಮೀಕಿ ಹಗರಣದ ಹಣವನ್ನು ಎಲ್ಲ ಶಾಸಕರು ಪಡೆದಿದ್ದಾರೆ. ಕೇವಲ ನಾಗೇಂದ್ರ ಅಷ್ಟೇ ಅಲ್ಲ, ತುಕಾರಾಮ್ ಇದೇ ಹಣದಲ್ಲಿ ಗೆದ್ದಿದ್ದಾರೆ. ಅವರಿಗೆಲ್ಲ ಹಣ ಮುಟ್ಟಿದೆ. ಸರ್ಕಾರದ ಹಣ ದುರುಪಯೋಗ ಮಾಡಿಕೊಂಡು ಗೆದ್ದಿದ್ದಾರೆ. ಆ ಹಣ ದುರುಪಯೋಗಪಡಿಸಿಕೊಂಡಿದ್ದಾರೆ. ಸರಿಯಾದ ದಾಖಲೆ ಇಟ್ಟುಕೊಂಡೇ ಇ.ಡಿ.ತನಿಖೆ ನಡೆಸುತ್ತಾರೆ. ವಿಚಾರದ ಬಗ್ಗೆ ಹೆಚ್ಚು ಮಾತನಾಡುವುದಿಲ್ಲ. ಅವರ ಕೈಯಲ್ಲಿ ಅಧಿಕಾರ ಇದೆ. ಅಧಿಕಾರ ಇದ್ದಾಗ ಏನೇನೆಲ್ಲ ಮಾಡುತ್ತಾರೆ ಎನ್ನುವುದಕ್ಕೆ ನಾನೇ ಉದಾಹರಣೆಯಾಗಿದ್ದೇನೆ. ಯಾರೇ ಅಗಲಿ ಸತ್ಯ, ನ್ಯಾಯ ಅನ್ನುವುದು ಒಂದಲ್ಲ ಒಂದು ದಿನ ಬೆಳಕಿಗೆ ಬಂದೇ ಬರುತ್ತದೆ ಎಂದು ಮಾರ್ಮಿಕವಾಗಿ ನುಡಿದರು. ಬಳ್ಳಾರಿಗೆ ನಾನು ತೆರಳುತ್ತಿದ್ದೇನೆ. ಇದೇ ಜೂ.16 ರಂದು ಗಂಗಾವತಿಯಲ್ಲಿ ಕೆ.ಡಿ.ಪಿ. ಸಭೆ ಇದೆ. ಸಾರ್ವಜನಿಕರಿಗೆ ಸೇವೆ ಮಾಡುತ್ತೇನೆ. ನಾನು ಜನಸೇವೆಗೆ ಮುಂದಾಗುತ್ತೇನೆ. ಆ 36 ದಿನಗಳ ಕಾಲ ನಾನು ದೇವರನ್ನೇ ನಂಬಿಕೊಂಡಿದ್ದೆ ಎಂದರು. ಈ ಸಂದರ್ಭದಲ್ಲಿ ಬಿಜೆಪಿ ಎಸ್.ಟಿ.ಮೋರ್ಚಾ ರಾಜ್ಯಾಧ್ಯಕ್ಷ ಬಂಗಾರು ಹನುಮಂತು, ರಾಜ್ಯ ಕಾರ್ಯದರ್ಶಿ ಕೆ.ಎಸ್.ದಿವಾಕರ್, ರೆಡ್ಡಿ ಅವರ ಆಪ್ತರಾದ ಆಲಿಖಾನ್ ಇದ್ದರು.

## ಏರ್ ಇಂಡಿಯಾ ವಿಮಾನ ದುರಂತದಿಂದ ದಿಗ್ಭ್ರಮೆ



ನವದೆಹಲಿ:ಜೂ.12:ಅಹಮದಾಬಾದ್‌ನಲ್ಲಿ ಏರ್ ಇಂಡಿಯಾ ವಿಮಾನ ದುರಂತಕ್ಕೆ ಪ್ರಧಾನಿ ನರೇಂದ್ರ ಮೋದಿಯವರು ಸಂತಾಪ ಸೂಚಿಸಿದ್ದಾರೆ.

ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಅಹಮದಾಬಾದ್‌ನಲ್ಲಿ ಏರ್ ಇಂಡಿಯಾ ವಿಮಾನ ದುರಂತದಿಂದ ದಿಗ್ಭ್ರಮೆಗೊಂಡಿದ್ದೇನೆ. ಇದರಿಂದ ಎಲ್ಲರಿಗೂ ಅತೀವ ನೋವು ಉಂಟಾಗಿದೆ. ದುರಂತದಲ್ಲಿ ಸಿಲುಕಿರುವವರಿಗೆ ನೆರವು ನೀಡುವ ವಿಚಾರವಾಗಿ ಸಚಿವರು ಹಾಗೂ ಅಧಿಕಾರಿಗಳ ಜೊತೆ ಮಾತನಾಡಿದ್ದೇನೆ. ಅಲ್ಲದೇ ನಿರಂತರವಾಗಿ ಅವರ ಜೊತೆ ಸಂಪರ್ಕದಲ್ಲಿದ್ದೇನೆ ಎಂದು ತಿಳಿಸಿದ್ದಾರೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.